ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 68 ಸಂಚಿಕೆ- 68 | PAGE-8 ಪುಟ-8 | ಶನಿವಾರ 19.04.2025 | RS.2/- ಬೆಲೆ 2/-

## ವರ್ಷಪೂರ್ತಿ ರಾಜಕಾರಣಕ್ಕೆ ಮುಂದಾಗಲು ಕಾರ್ಯಕರ್ತರಿಗೆ ವಿಜಯೇಂದ್ರ ಕರೆ



ಮಲ್ಲಮನುಡಿ ವಾರ್ತೆ ಕಲಬುರಗಿ :ಏ.18: ಕಾಂಗ್ರೆಸ್ಸಿನಲ್ಲಿ ರಾಜಕಾರಣ ಮಾಡಲು ಯಾವ ಗಂಡಸಿದ್ದಾನೆಂದು ನಾನು ಕೂಡ ನೋಡುತ್ತೇನೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸವಾಲು ಹಾಕಿದರು. ಯಾರೂ ಹೆದರುವ ಅಗತ್ಯವಿಲ್ಲ. ಹೊಂದಾಣಿಕೆಯ ರಾಜಕಾರಣ ಮಾಡಲು ನಮ್ಮ ಕಾರ್ಯಕರ್ತರು ಪುಕ್ಕಟೆಯಾಗಿ ಬಂದಿಲ್ಲ ಎಂದರು.

ಅವರು ಜನಾಕ್ರೋಶ ಯಾತ್ರೆಯ ಬೃಹತ್ ಸಾರ್ವಜನಿಕ ಸಭೆಯಲ್ಲಿ ಮಾತನಾಡಿ, ಚುನಾವಣೆ ಬಂದಾಗ ರಾಜಕಾರಣ ಮಾಡುವುದನ್ನು ಬಿಟ್ಟು ವರ್ಷಪೂರ್ತಿ ರಾಜಕಾರಣ ಮಾಡುವುದನ್ನು ಅಭ್ಯಾಸ ಮಾಡಿ. ಕಲಬುರಗಿ ಜಿಲ್ಲೆಯ ಪ್ರತಿಯೊಂದು ವಿಧಾನಸಭಾ ಕ್ಷೇತ್ರದಲ್ಲಿ ನಾವು ಯಾಕೆ ಗೆಲ್ಲಲು ಸಾಧ್ಯವಿಲ್ಲ ಎಂಬ ಸವಾಲನ್ನು ರಾಜ್ಯದ ಅಧ್ಯಕ್ಷನಾಗಿ ನಾನು ಸ್ವೀಕರಿಸುತ್ತೇನೆ ಎಂದರು.

ಇನ್ನು 3 ವರ್ಷಗಳ ಕಾಲ ಹೋರಾಟದ ಪರ್ವ ಎಂಬುದನ್ನು ಜಿಲ್ಲಾಧ್ಯಕ್ಷರು ಮತ್ತು ಪದಾಧಿಕಾರಿಗಳು ನೆನಪಿನಲ್ಲಿ ಇಟ್ಟುಕೊಳ್ಳಬೇಕಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಕಾರ್ಯಕರ್ತರಲ್ಲಿ ಮನವಿ ಮಾಡಿದರು. ಎಲ್ಲಿ ನಮ್ಮ ಕಾರ್ಯಕರ್ತರಿಗೆ ನೋವು, ಅವಮಾನ ಆಗುತ್ತದೋ ಅಲ್ಲಿ ನೀವೆಲ್ಲರೂ ಒಗ್ಗಟ್ಟಿನಿಂದ, ಒಂದಾಗಿ ಹೋಗಿ ಅವರಿಗೆ ರಕ್ಷಣೆ ಕೊಡಬೇಕು ಎಂದು ಸೂಚಿಸಿದರು.

ಕಾರ್ಯಕರ್ತರ ಪ್ರೀತಿ, ವಿಶ್ವಾಸಕ್ಕೆ ಋಣಿ :ಯಾವನೇ ಬರಲಿ, ಅವನ ಶಕ್ತಿಯನ್ನು ಮೆಟ್ಟಿ ನಿಲ್ಲುವ ಶಕ್ತಿ ಬಿಜೆಪಿಯ ಪ್ರತಿಯೊಬ್ಬ ಕಾರ್ಯಕರ್ತನಿಗೆ ಇದೆ. ಮುಖಂಡರೆಲ್ಲರೂ ದಯವಿಟ್ಟು ಒಗ್ಗಟ್ಟಾಗಿರಿ ಎಂದು ಎಚ್ಚರಿಸಿದರು.

ಕಾರ್ಯಕರ್ತರ ಪ್ರೀತಿ, ವಿಶ್ವಾಸಕ್ಕೆ ಬೆಲೆ ಕಟ್ಟಲು ಸಾಧ್ಯವಿಲ್ಲ. ಇಂಥ ಉರಿ ಬಿಸಿಲಲ್ಲೂ ಕೂಡ ಸಾವಿರಾರು ಕಾರ್ಯಕರ್ತರು, ತಾಯಂದಿರು ದೊಡ್ಡ ಸಂಖ್ಯೆಯಲ್ಲಿ ಬಂದು ಜನಾಕ್ರೋಶ ಯಾತ್ರೆಯನ್ನು ಯಶಸ್ವಿಯಾಗಿ ಮಾಡಿದ್ದೀರಿ. ತಮ್ಮ ಪ್ರೀತಿ, ವಿಶ್ವಾಸಕ್ಕೆ ಋಣಿಯಾಗಿದ್ದೇನೆ ಎಂದು ಬಿ.ವೈ.ವಿಜಯೇಂದ್ರ ಅವರು ನುಡಿದರು.

ಗುಲ್ಬರ್ಗದಲ್ಲಿ ಯಾವನೇ ಕಾರ್ಯಕರ್ತರು ಎದೆಗುಂದುವ ಅಗತ್ಯವಿಲ್ಲ. ನಿಮ್ಮ ವಿಜಯೇಂದ್ರ ನಿಮ್ಮ ಜೊತೆಗಿರುತ್ತಾರೆ. 3 ಕಾರಣಗಳಿಗೆ ಜನಾಕ್ರೋಶ ಯಾತ್ರೆ ನಡೆಯುತ್ತಿದೆ. ಚುನಾವಣೆ ಪೂರ್ವದಲ್ಲಿ ರಾಮರಾಜ್ಯ ನಿರ್ಮಿಸುವ ಮಾದರಿಯಲ್ಲಿ ನೀಡಿದ ಭರವಸೆಗಳನ್ನು ಸಿದ್ದರಾಮಯ್ಯನವರು ಮುಖ್ಯಮಂತ್ರಿ ಕುರ್ಚಿ ಮೇಲೆ ಕುಳಿತ ಬಳಿಕ ಸಂಪೂರ್ಣವಾಗಿ ಮರೆತಿದ್ದಾರೆ. ಗ್ಯಾರಂಟಿ ಪ್ರಚಾರದ ಹಿನ್ನೆಲೆಯಲ್ಲಿ ನಾವು ಕೂಡ ಲೋಕಸಭಾ ಚುನಾವಣೆಯಲ್ಲಿ ಆತಂಕಕ್ಕೆ ಈಡಾಗಿದ್ದೆವು. ಮತದಾರರು ಬೂತ್‌ನಲ್ಲಿ ಮತ ಹಾಕುವ ಒಂದೆ-ರಡು ದಿನಗಳ ಮೊದಲು ಗ್ಯಾರಂಟಿ ಹಣ ಹಾಕಿದ್ದರು ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜ್ಯದ ಜನರನ್ನು ಭಿಕ್ಷುಕರ ರೀತಿ ನೋಡುತ್ತಿದ್ದಾರೆ. ಒಂದೆಡೆ ಮಹಿಳೆಯರಿಗೆ ಪುಕ್ಕಟೆ ಪ್ರಯಾಣ ಎನ್ನುತ್ತಾರೆ. ಇನ್ನೊಂದೆಡೆ ಗ್ರಾಮೀಣ ಭಾಗದ ಸಾವಿರಾರು ಬಸ್ ಓಡಾಟವನ್ನು ಸ್ಥಗಿತಗೊಳಿಸಿದ್ದಾರೆ ಎಂದು ಬಿ.ವೈ.ವಿಜಯೇಂದ್ರ ಅವರು ಟೀಕಿಸಿದರು. ಇದರ ಪರಿಣಾಮವಾಗಿ ಶಾಲಾ, ಕಾಲೇಜಿಗೆ ತೆರಳುವ ಗ್ರಾಮೀಣ ಭಾಗದ ರೈತರ, ಬಡವರ ಮಕ್ಕಳಿಗೆ ಬಸ್ ವ್ಯವಸ್ಥೆ ಇಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಕೆಎಸ್‌ಆರ್‌ಟಿಸಿಗೆ 6,500 ಕೋಟಿ ರೂ. ವನ್ನು ಸರಕಾರ ಕೊಡಬೇಕಾಗಿದೆ. ಸರಕಾರಕ್ಕೆ ದುಡ್ಡು ಕೊಡಲು ಆಗುತ್ತಿಲ್ಲ. ವಿದ್ಯುತ್ ದರ ಯೂನಿಟ್‌ಗೆ 36 ಪೈಸೆ ಹೆಚ್ಚಿಸಿದ್ದಾರೆ ಎಂದು ಟೀಕಿಸಿದರು.

ಪ್ರಿಯಾಂಕ್ ಖರ್ಗೆಯವರು ಗುಲ್ಬರ್ಗಾದಲ್ಲಿ ಯುವಕರಿಗೆ ನೌಕರಿ ಕೊಡುವುದಾಗಿ ಹೇಳಿ ಸರಕಾರಿ ದುಡ್ಡು, 4 ಕೋಟಿ ರೂ. ಖರ್ಚು ಮಾಡಿ, 1 ಲಕ್ಷ ಯುವಜನರಿಗೆ ಉದ್ಯೋಗ ನೀಡುವುದಾಗಿ ಹೇಳಿದ್ದರು. ಆದರೆ, ಖಾಸಗಿ ಸಂಸ್ಥೆಗಳಲ್ಲಿ 1,200 ಉದ್ಯೋಗ ನೀಡಿದ್ದಾರೆ. 1,200 ಜನರಿಗೆ ಉದ್ಯೋಗ ಕೊಡಲು 4 ಕೋಟಿ ರೂ. ಖರ್ಚು ಮಾಡಿದ್ದಾರೆ. ಇದು ರಾಜ್ಯ ಸರಕಾರದ ಕಾರ್ಯವೈಖರಿ ಎಂದು ಶ್ರೀರಾಮುಲು ಅವರ ಮಾತನ್ನು ಉಲ್ಲೇಖಿಸಿ ವಿವರಿಸಿದರು.

ಚಿತ್ತಾಪುರ ಕ್ಷೇತ್ರಕ್ಕೆ ಹೋಗಿ ಬಂದಿದ್ದೇನೆ. ಕಾಗಿಣಾ ನದಿಯಲ್ಲಿ ಮರಳು ಮಾಫಿಯ ಜಿಲ್ಲಾ ಉಸ್ತುವಾರಿ ಸಚಿವರ ಮೂಗಿನ ಕೆಳಗೇ ನಡೆ-ಯುತ್ತಿದೆ. ಒಂದೇ ನಂಬರ್ ಪ್ಲೇಟ್‌ನಲ್ಲಿ ನಾಲ್ಕೈದು ಟ್ರಕ್ ಓಡಾಡುತ್ತಿವೆ. ಕಾನೂನುಬಾಹಿರವಾಗಿ ಮಹಾರಾಷ್ಟ್ರ, ಅಕ್ಕಪಕ್ಕದ ರಾಜ್ಯಗಳಿಗೆ ಮರಳು ಮಾಫಿಯ ವಿಸ್ತರಣೆ ಆಗಿದೆ ಎಂದು ಬಿ.ವೈ.ವಿಜಯೇಂದ್ರ ಆರೋಪಿಸಿದರು.

ಉಸ್ತುವಾರಿ ಸಚಿವರಿಗೆ ಇದರ ಬಗ್ಗೆ ಗಮನಿಸಲು ಸಾಧ್ಯ ಆಗುತ್ತಿಲ್ಲವೇ ಎಂದು ಪ್ರಶ್ನಿಸಿದರು. ಅವರ

(2ನೇ ಪುಟ ನೋಡಿ)

## ರಾಯಚೂರಿನಲ್ಲಿ ಗುಡುಗು ಸಹಿತ ಭಾರಿ ಮಳೆ; ಸಿಡಿಲು ಬಡಿದು ಇಬ್ಬರು ಸಾವು



ಮಲ್ಲಮ್ಮ ನುಡಿ ವಾರ್ತೆ ರಾಯಚೂರು:ಏ.18: ಬೆಂಗಳೂರು ಸೇರಿದಂತೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ಮಳೆಯಾಗುತ್ತಿದ್ದು, ಶುಕ್ರವಾರ ರಾಯಚೂರು ಜಿಲ್ಲೆಯಲ್ಲೂ ಹಲವು ಕಡೆ ಭಾರಿ ಗಾಳಿ, ಗುಡುಗು, ಸಿಡಿಲು ಸಹಿತ ಮಳೆ ಆಗುವ ಮೂಲಕ ಬಿಸಿಲಿಗೆ ಕಾದು ಕೆಂಡದಂತಾಗಿದ್ದ ಇಳೆ ತಂಪಾಗುವಂತೆ ಮಾಡಿದೆ.

(2ನೇ ಪುಟ ನೋಡಿ)

## ಮಗನನ್ನ ಸಿಎಂ ಮಾಡೋಕೆ ಖರ್ಗೆಯವರೇ ಸರ್ಕಾರ ಬೀಳಿಸುತ್ತಾರೆ: ಶ್ರೀರಾಮುಲು



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಏ.18: ತಮ್ಮ ಮಗನನ್ನ ಸಿಎಂ ಮಾಡಲು ಮಲ್ಲಿಕಾರ್ಜುನ ಖರ್ಗೆಯವರೇ ಈ ಸರ್ಕಾರ ಬಿಳಿಸುತ್ತಾರೆ ಎಂದು ಮಾಜಿ ಸಚಿವ ಶ್ರೀರಾಮುಲು ಹೇಳಿಕೆ ನೀಡಿದ್ದಾರೆ.

ಕಲಬುರಗಿಯಲ್ಲಿ ನಡೆದ ಜನಾಕ್ರೋಶ ರ‍್ಯಾಲಿಯಲ್ಲಿ ಮಾತನಾಡಿದ ಅವರು, ಸಿಎಂ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಈಗಾಗಲೇ ಸಿಎಂಗಾದಿಗೆ ಫೈಟ್ ಮಾಡುತ್ತಿದ್ದಾರೆ. ಇದರ ನಡುವೆಯೇ ಮೂರನೇ ವ್ಯಕ್ತಿ ಪ್ರವೇಶ ಮಾಡುತ್ತಾರೆ. ಮಲ್ಲಿಕಾರ್ಜುನ ಖರ್ಗೆ ತಮ್ಮ ಮಗನನ್ನು ಸಿಎಂ ಮಾಡಲು ಅವರೇ ಸರ್ಕಾರವನ್ನ ಬೀಳಿಸುತ್ತಾರೆ ಎಂದಿದ್ದಾರೆ. ಮೊನ್ನೆ ಖರ್ಗೆ ಅವರು ಸರ್ಕಾರ ಬೀಳುವ ಬಗ್ಗೆ ಮಾತನಾಡಿದ್ದಾರೆ. ಮೋದಿಯವರು ಈ ಸರ್ಕಾರ ಬಿಳಿಸುತ್ತಾರೆ ಎಂದು ಹೇಳಿದ್ದಾರೆ. ಮೋದಿಯವರಿಗೆ ಏನು ಕರ್ಮ ಈ ಸರ್ಕಾರ ಬಿಳಿಸೋಕೆ. ಇಬ್ಬರ ಕಾದಾಟದಲ್ಲಿ ತಮ್ಮ ಮಗನನ್ನ ಸಿಎಂ ಮಾಡಲು ಖರ್ಗೆಯವರೇ ಪ್ಲಾನ್ ಮಾಡಿದ್ದಾರೆ ಎಂದು ಗುಡುಗಿದರು.

ತಂದೆ, ಮಕ್ಕಳು ಸೇರಿ ರಿಪಬ್ಲಿಕ್ ಆಫ್ ಕಲಬುರಗಿಯನ್ನಾಗಿ ಮಾಡಿದ್ದಾರೆ. ನಮ್ಮ ರಾಜ್ಯಾಧ್ಯಕ್ಷರು ಅಲ್ಲಿಗೆ ಭೇಟಿ ಕೊಟ್ಟರೇ ಅವರ ಕಾರ್ಯಕರ್ತರು ದಬ್ಬಾಳಿಕೆ ಮಾಡುತ್ತಾರೆ. ಅದಕ್ಕೆ ತಕ್ಕ ಉತ್ತರ ನೀಡುತ್ತೇವೆ. ನಿನ್ನೆ ಜಾತಿಗಣತಿ ಬಗ್ಗೆ ನಿರ್ಧಾರ ಮಾಡುವುದಿಲ್ಲ ಎಂದು ಗೊತ್ತಿತ್ತು. ಹೀಗಾಗಿ ಪಲಾಯನ ಮಾಡಿದ್ದಾರೆ ಎಂದು ಕಿಡಿಕಾರಿದ್ದಾರೆ.

ಸಿಎಂ ಕುರ್ಚಿಗೆ ಕಂಟಕ ಬಂದಾಗ ಜಾತಿಗಣತಿ ಪ್ರಸ್ತಾಪ ಮಾಡುತ್ತಾರೆ. ಅವರ ಕೈಯಲ್ಲಿ ಆಗೋದು ಅಷ್ಟೇ. ಮುಂದೆ ಒಂದು ಕಮಿಟಿ ನೇಮಕ ಮಾಡಿ ವರದಿ ತರಿಸಿಕೊಳ್ಳುತ್ತೇವೆ ಎನ್ನುತ್ತಾರೆ. ಈ ಸರ್ಕಾರ ಸುಮ್ಮನೇ ಕಾಲಹರಣ ಮಾಡುತ್ತದೆ ಎಂದು ವಾಗ್ದಾಳಿ ನಡೆಸಿದರು.

## ಪತ್ರಕರ್ತನ ಮೇಲೆ ಹಲ್ಲೆ ಮಾಡಿದ್ದ ಅರಣ್ಯಾಧಿಕಾರಿ ಅಮಾನತ್ತು



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 18 : ಕರ್ತವ್ಯ ನಿರತ ಪತ್ರಕರ್ತನ ಮೇಲೆ ಹಲ್ಲೆ ನಡೆಸಿ, ದರ್ಪ ತೋರಿದ್ದ ಹೊನ್ನಿಕೇರಿ ವಲಯ ಗಸ್ತು ಅರಣ್ಯ ಪಾಲಕ ದಸ್ತಗಿರಿ ಸಾಬ್ ಅವರನ್ನು ಅಮಾನತ್ತುಗೊಳಿಸಿ ಉಪ ಅರಣ್ಯ ಸಂರಕ್ಷಣಾಧಿಕಾರಿ ವಾನತಿ ಎಂ.ಎಂ ಆದೇಶ ಹೊರಡಿಸಿದ್ದಾರೆ.

ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿದ ವಿಡಿಯೋ ದೃಶ್ಯಾವಳಿಗಳು ಮತ್ತು ಪತ್ರಿಕೆಗಳಲ್ಲಿನ ವರದಿ ಆಧರಿಸಿ ಈ ಕ್ರಮ ಜರುಗಿಸಲಾಗಿದೆ. ಇಲಾಖೆ ವಿಚಾರಣೆ ಕಾಯ್ದಿರಿಸಿ, ಕರ್ನಾಟಕ ಸಿವಿಲ್ ನಿಯಮಗಳು 1957ರ ನಿಯಮ 10 (1) ಅನ್ವಯ ಗುರುವಾರ (ಏ.17) ಈ ಆದೇಶ ಹೊರಡಿಸಿದ್ದಾರೆ. ಕರ್ತವ್ಯ ನಿರ್ವಹಿಸುವಾಗ ದಸ್ತಗಿರಿ ಸಾಬ್ ಅವರು ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಿದಿರುವುದು ಮೇಲ್ನೋಟಕ್ಕೆ ಕಂಡು ಬಂದಿದ್ದು, ಕರ್ನಾಟಕ ನಾಗರಿಕ ಸೇವಾ ನಡತೆ ನಿಯಮಗಳು ಉಲ್ಲಂಘಿಸಿ ಕರ್ತವ್ಯದಲ್ಲಿ ಅಶಿಸ್ತು ತೋರಿದ್ದಾರೆ. ಸದರಿ ಘಟನೆಯ ಬಗ್ಗೆ ಕೂಲಂಕುಶ ತನಿಖೆ ನಡೆದು, ಪ್ರಕರಣ ಸತ್ಯಾಸತ್ಯತೆ ತಿಳಿಯಬೇಕಾಗಿದೆ. ಅಧಿಕಾರಿ ಅದೇ ಸ್ಥಳದಲ್ಲಿ ಕೆಲಸ ನಿರ್ವಹಿಸಲು ಅವಕಾಶ ಮಾಡಿಕೊಟ್ಟರೆ ನಿಷ್ಪಕ್ಷಪಾತ ತನಿಖೆಗೆ ಅಡ್ಡಿಯಾಗುವ ಸಂಭವ ಹಿನ್ನೆಲೆ ಅವರನ್ನು ಅಮಾನತುಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ.

(2ನೇ ಪುಟ ನೋಡಿ)

## ಮಹಾತ್ಮಾಗಾಂಧಿ ನರೇಗಾ ಯೋಜನೆಯ ಮಾನವ ದಿನಗಳ ಸೃಜನೆಯಲ್ಲಿ ಬೀದರ ಜಿಲ್ಲೆ ರಾಜ್ಯದಲ್ಲಿ 3ನೇ ಸ್ಥಾನದಲ್ಲಿ:ಸಿಇಓ ಡಾ.ಗಿರೀಶ ಬದೋಲೆ



ಮಲ್ಲಮ್ಮ ನುಡಿ ವಾರ್ತೆ ಬೀದರ : ಏ.18: ಗ್ರಾಮೀಣ ಪ್ರದೇಶದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳು, ಅತೀ ಸಣ್ಣ ರೈತರು ಮತ್ತು ಮಹಿಳೆಯರಿಗೆ ಉದ್ಯೋಗವಕಾಶ ಕಲ್ಪಿಸಿಕೊಟ್ಟು ಅವರ ಸ್ವಾವಲಂಬಿ ಬದುಕಿಗೆ ಆಸರೆಯಾಗುವ ಮಹಾತ್ವಾಕಾಂಕ್ಷಿ ಯೋಜನೆ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ 2024-25ನೇ ಸಾಲಿನಲ್ಲಿ ಬೀದರ ಜಿಲ್ಲೆಯು ಅತೀ ಹೆಚ್ಚು ಮಾನವ ದಿನಗಳನ್ನು ಸೃಜಿಸಿದ ಜಿಲ್ಲೆಗಳಲ್ಲಿ ಬೀದರ ಜಿಲ್ಲೆ ಒಂದಾಗಿದ್ದು ಬೀದರ ಜಿಲ್ಲೆಯು ರಾಜ್ಯದಲ್ಲಿ 3ನೇ ಸ್ಥಾನದಲ್ಲಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಡಾ.ಗಿರೀಶ ಬದೋಲೆ ತಿಳಿಸಿದ್ದಾರೆ.

ಬೀದರ ಜಿಲ್ಲೆಗೆ 2024-25ನೇ ಸಾಲಿನಲ್ಲಿ 50.00 ಲಕ್ಷ ಮಾನವ ದಿನಗಳ ಸೃಜನೆಯ ಗುರಿ ನೀಡಲಾಗಿತ್ತು. ಮಾರ್ಚ.31, 2025ಕ್ಕೆ ಕೊನೆಗೊಂಡ ಆರ್ಥಿಕ ವರ್ಷದಲ್ಲಿ ಬೀದರ ಜಿಲ್ಲೆಯು 62,28,784 ಮಾನವದಿನಗಳನ್ನು ಸೃಜಿಸುವ ಮೂಲಕ 130.58% ಸಾಧನೆ ಮಾಡಿ ರಾಜ್ಯದಲ್ಲಿ ಅತೀ ಹೆಚ್ಚು ಮಾನವದಿನ ಸೃಜನೆ ಮಾಡಿದ ಜಿಲ್ಲೆಗಳಲ್ಲಿ 3ನೇ ಸ್ಥಾನವನ್ನು ಪಡೆದಿದೆ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶದ ಜಿಲ್ಲೆಗಳಲ್ಲಿ ಮೊದಲನೆ ಸ್ಥಾನದಲ್ಲಿದೆಂದರು.

ಬೀದರ ಜಿಲ್ಲೆಯಲ್ಲಿ 2,57,344 ಉದ್ಯೋಗ ಚೀಟಿಗಳಿದ್ದು ಅದರಲ್ಲಿ 1,62,841 ಕ್ರಿಯಾಶೀಲ ಉದ್ಯೋಗ ಚೀಟಿಗಳಿರುತ್ತವೆ. ಜಿಲ್ಲೆಯಲ್ಲಿ 2024-25ನೇ ಸಾಲಿನಲ್ಲಿ 1,27,932 ಕುಟುಂಬಗಳಿಗೆ ಕೂಲಿ ನೀಡಲಾಗಿದೆ. ಅದರಲ್ಲಿ 31,190 ಕುಟುಂಬಗಳು ಪರಿಶಿಷ್ಟಜಾತಿಗೆ ಸೇರಿದ್ದರೆ 22,524 ಕುಟುಂಬಗಳು ಪರಿಶಿಷ್ಟ ಪಂಗಡಕ್ಕೆ ಸೇರಿರುತ್ತವೆ. ಅತೀ ಸಣ್ಣ ರೈತರು ಮತ್ತು ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ಕುಟುಂಬಗಳು 74,217 ಆಗಿರುತ್ತದೆ, ಒಟ್ಟು ಕೂಲಿಕಾರರಲ್ಲಿ 1,07,984 ಮಹಿಳೆಯರಿಗೆ ಕೂಲಿ ಕೆಲಸ ನೀಡಲಾಗಿದೆ. ಒಟ್ಟು ಸೃಜಿಸಿದ 62,28,784 ಮಾನವ ದಿನಗಳಲ್ಲಿ 35,62,252 ಮಾನವ ದಿನಗಳನ್ನು ಮಹಿಳಾ ಕೂಲಿಕಾರರಿಂದ ಸೃಜಿಸಲಾಗಿದ್ದು, ಇದು ಪ್ರತಿಶತ 54.56% ಆಗಿರುತ್ತದೆ. 519 ವಿಕಲಚೇತನರಿಗೆ ಕೂಲಿ ಕೆಲಸ ನೀಡಲಾಗಿದೆ. ಬೀದರ ಜಿಲ್ಲೆಯಲ್ಲಿ 2024-25ನೇ ಸಾಲಿನಲ್ಲಿ 1033 ಕುಟುಂಬಗಳ ಕೂಲಿಕಾರರು ಪೂರ್ಣ 100 ದಿನಗಳ ಕೆಲಸ ಪಡೆದಿರುತ್ತಾರೆಂದರು.

ಮಹಾತ್ಮಗಾಂಧಿ ನರೇಗಾ ಯೋಜನೆಯು ಜಿಲ್ಲೆಯ ಗ್ರಾಮೀಣ ಪ್ರದೇಶದ ಕುಟುಂಬಗಳ ಆರ್ಥಿಕ ಪುನಶ್ಚೇತನಕ್ಕೆ ನೆರವಾಗುವುದಲ್ಲದೆ ಬಡ ಕೂಲಿಕಾರ್ಮಿಕರು ಉದ್ಯೋಗ ಅರಸಿ ಮುಂಬೈ, ಪುಣೆ, ಹೈದರಾಬಾದ ಮತ್ತು ಬೆಂಗಳೂರು ನಗರ ಪ್ರದೇಶಗಳಿಗೆ ವಲಸೆ ಹೋಗುವುದನ್ನು ತಪ್ಪಿಸುವಲ್ಲಿ ಸಹಕಾರಿಯಾಗಿದೆ. ಹಾಗೆಯೇ ಬೀದರ ಜಿಲ್ಲೆಯ ಗ್ರಾಮೀಣ ಕೂಲಿಕಾರರು 2025-26ನೇ ಸಾಲಿನಲ್ಲಿಯೂ ಸಹ ಅತೀ ಹೆಚ್ಚು ಸಂಖ್ಯೆಯಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಕೆಲಸ ಮಾಡುವ ಮೂಲಕ ಯೋಜನೆಯ ಸದುಪಯೋಗ ಪಡೆದುಕೊಳ್ಳಲು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಡಾ.ಗಿರೀಶ ಬದೋಲೆ ತಿಳಿಸಿದ್ದಾರೆ.

## ಸಂಪುಟ ಸಭೆಯಲ್ಲಿ ಜಾತಿ ಗಣತಿ ವರದಿ ವಿರೋಧಿಸಿಲ್ಲ, ಸಚಿವರು ಏರು ಧ್ವನಿಯಲ್ಲೂ ಮಾತಾಡಿಲ್ಲ: ಸಿಎಂ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಏ.18: 'ಜಾತಿ ಗಣತಿ' ಎಂದು ಜನಪ್ರಿಯವಾಗಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ವರದಿಯ ಬಗ್ಗೆ ಚರ್ಚಿಸಲು ಗುರುವಾರ ಸಂಜೆ ಕರೆಯಲಾಗಿದ್ದ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ವರದಿಗೆ ಯಾರೂ ಯಾವುದೇ ವಿರೋಧ ವ್ಯಕ್ತಪಡಿಸಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ ಹೇಳಿದ್ದಾರೆ.

ಕೆಲವು ಮಾಧ್ಯಮಗಳು ವರದಿ ಮಾಡಿದಂತೆ ಚರ್ಚೆಯ ಸಮಯದಲ್ಲಿ ಕೆಲವು ಸಚಿವರು ಪರಸ್ಪರ ಏರು ಧ್ವನಿಯಲ್ಲಿ ವಾಗ್ವಾದ ನಡೆಸಿಲ್ಲ ಎಂದು ಸಿಎಂ ಸ್ಪಷ್ಟಪಡಿಸಿದ್ದಾರೆ.

"ನಿನ್ನೆ, ಜಾತಿ ಗಣತಿ ವರದಿ ಕುರಿತು ಸಚಿವ ಸಂಪುಟದಲ್ಲಿ ಚರ್ಚಿಸಲಾಯಿತು. ಚರ್ಚೆ ಅಪೂರ್ಣವಾಗಿದೆ ಮತ್ತು ಅದನ್ನು ಇನ್ನೊಂದು ದಿನಕ್ಕೆ ಮುಂದೂಡಲಾಗಿದೆ. ಈ ವಿಷಯವನ್ನು ಮುಂದಿನ ಸಚಿವ ಸಂಪುಟದಲ್ಲಿ ಚರ್ಚಿಸಲಾಗುವುದು. ಯಾರೂ ಅದನ್ನು ವಿರೋಧಿಸಿಲ್ಲ" ಎಂದು ಸಿದ್ದರಾಮಯ್ಯ ಹೇಳಿದರು.

ಇಂದು ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ, "ಕೆಲವು ಸಚಿವರು ಪರಸ್ಪರ ಏರು ಧ್ವನಿಯಲ್ಲಿ ವಾಗ್ವಾದ ನಡೆಸಿದರು ಎಂಬ ಮಾಧ್ಯಮ ವರದಿ ಸುಳ್ಳು" ಎಂದು ಹೇಳಿದರು.

ಇನ್ನು ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಕೂಡ

(2ನೇ ಪುಟ ನೋಡಿ)

## ಭಾರಿ ಬಿರುಗಾಳಿಗೆ ನೆಲಕ್ಕುರುಳಿದ ಮರ ಗಿಡಗಳು ಮುಸ್ತರಿ ಗ್ರಾಮದಲ್ಲಿ ಸಿಡಿಲು ಬಡಿದು ಎಮ್ಮೆ ಕರು ಸಾವು



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಪಟ್ಟಣ ಸೇರಿದಂತೆ ತಾಲೂಕಿನ ಹಲವೆಡೆ ಶುಕ್ರವಾರ ಮಧ್ಯಾಹ್ನ ಬಿರುಗಾಳಿ ಸಹಿತ ಮಳೆ ಗಾಳಿಗೆ ಸುಮಾರು 15ರಿಂದ 20 ಮರಗಿಡಗಳು ಹಾಗೂ ಮನೆ ಮೇಲಿನ ಪತ್ರಗಳು(ತಗಡಗಳು) ಹಾರಿ ಮನೆಗಳಿಗೆ ಹಾನಿಯಾದ ವರದಿಯಾಗಿದೆ. ಪಟ್ಟಣದ ಪುರಸಭೆ, ತಹಶೀಲ್ ಕಚೇರಿ ಆವರಣ, ಹುಮನಾಬಾದ ರಸ್ತೆ, ಬಸವೇಶ್ವರ ವೃತ, ಭವಾನಿ ಮಂದಿರಕ್ಕೆ ಹೋಗುವ ರಸ್ತೆ ಸೇರಿದಂತೆ ವಿವಿಧೆಡೆ ಸುಮಾರು

(2ನೇ ಪುಟ ನೋಡಿ)

## ಮೇನಲ್ಲಿ ಬಾಹ್ಯಾಕಾಶ ನಿಲ್ದಾಣಕ್ಕೆ ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ



ಮಲ್ಲಮ್ಮನುಡಿವಾರ್ತೆನವದೆಹಲಿ:ಏ.18: ಬಾಹ್ಯಾಕಾಶ ಪ್ರಯಾಣದಲ್ಲಿ ಒಂದು ದೊಡ್ಡ ಮೈಲಿಗಲ್ಲು ಸಾಧಿಸಲು ಭಾರತ ಸಜ್ಜಾಗಿದೆ. ಗಗನಯಾತ್ರಿ ಅಥವಾ ನಿಯೋಜಿತ ಗಗನಯಾತ್ರಿ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಮುಂದಿನ ತಿಂಗಳು ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಹಾರಲಿದ್ದಾರೆ ಎಂದು ಕೇಂದ್ರ ಹೇಳಿದೆ. ಭಾರತೀಯ ಗಗನಯಾತ್ರಿಯನ್ನು ಹೊತ್ತು ಸಾಗಲಿರುವ ಅಂತಾರಾಷ್ಟ್ರೀಯ ಬಾಹ್ಯಾಕಾಶ ಯಾನ ಮಿಷನ್ ಮುಂದಿನ ತಿಂಗಳು ನಿಗದಿಯಾಗಿದೆ. ಭಾರತ ತನ್ನ ಬಾಹ್ಯಾಕಾಶ ಪ್ರಯಾಣದಲ್ಲಿ ಒಂದು ನಿರ್ಣಾಯಕ ಅಧ್ಯಾಯವನ್ನು ಬರೆಯಲು ಸಜ್ಜಾಗಿದೆ. ಇಸ್ರೋ ಹೊಸ ಮೈಲುಗಲ್ಲು ದಾಖಲಿಸುತ್ತಿರುವಾಗ ಭಾರತೀಯ ಗಗನಯಾತ್ರಿಯೊಬ್ಬರು ಐತಿಹಾಸಿಕ ಬಾಹ್ಯಾಕಾಶ ಯಾನಕ್ಕೆ ಸಜ್ಜಾಗಿದ್ದಾರೆ. ಗಗನಯಾನ ಸಿದ್ಧತೆ, ಐಎಸ್‌ಎಸ್ ಮಿಷನ್ ಮತ್ತು ಉಡಾವಣೆಗಳೊಂದಿಗೆ ಭಾರತದ ಬಾಹ್ಯಾಕಾಶ ಕನಸುಗಳು ಎತ್ತರಕ್ಕೆ ಏರುತ್ತಿವೆ ಎಂದು ಕೇಂದ್ರ ಬಾಹ್ಯಾಕಾಶ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ತಿಳಿಸಿದ್ದಾರೆ. ಕಳೆದ ಎಂಟು ತಿಂಗಳಿಂದ ನಾಸಾ ಮತ್ತು ಖಾಸಗಿ ಬಾಹ್ಯಾಕಾಶ ಕಂಪನಿ ಆಕ್ಸಿಯಮ್ ಸ್ಪೇಸ್‌ನಲ್ಲಿ ತರಬೇತಿ ಪಡೆಯುತ್ತಿರುವ ಗ್ರೂಪ್ ಕ್ಯಾಪ್ಟನ್ ಶುಕ್ಲಾ, ಭಾರತ 60 ಮಿಲಿಯನ್ ಡಾಲರ್‌ಗಿಂತಲೂ ಹೆಚ್ಚು ಹಣವನ್ನು ಪಾವತಿಸಿರುವ ಖಾಸಗಿ ವಾಣಿಜ್ಯ ಕಾರ್ಯಾಚರಣೆಯಲ್ಲಿ ಐಎಸ್‌ಎಸ್‌ಗೆ ಹಾರುತ್ತಿದ್ದಾರೆ. ಈ ಕಾರ್ಯಾಚರಣೆಯನ್ನು ಸ್ಪೇಸ್‌ಎಕ್ಸ್ ಫಾಲ್ಕನ್ 9 ರಾಕೆಟ್‌ನಲ್ಲಿ ಉಡಾವಣೆ ಮಾಡಲಾಗುವುದು. ನಾಲ್ವರು ಸಿಬ್ಬಂದಿಯನ್ನು ಸ್ಪೇಸ್‌ಎಕ್ಸ್ ಕ್ರೂ ಡ್ರ್ಯಾಗನ್ ಕ್ಯಾಪ್ಸುಲ್‌ನಲ್ಲಿ ಕೂರಿಸಲಾಗುವುದು. ಇದು ಅಮೆರಿಕದ ಫ್ಲೋರಿಡಾದಲ್ಲಿರುವ ಕೆನಡಿ ಬಾಹ್ಯಾಕಾಶ ಕೇಂದ್ರದಿಂದ ಉಡಾವಣೆಯಾಗಲಿದೆ.

ಗ್ರೂಪ್ ಕ್ಯಾಪ್ಟನ್ ಶುಕ್ಲಾ 40 ವರ್ಷ ವಯಸ್ಸಿನವರಾಗಿದ್ದಾರೆ. ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೋ) ತನ್ನ ಗಗನಯಾತ್ರಿಗಳಲ್ಲಿ ಅತ್ಯಂತ ಕಿರಿಯರನ್ನು ಈ ಕಾರ್ಯಾಚರಣೆಗೆ ಆಯ್ಕೆ ಮಾಡಿದೆ. ಆಕ್ಸಿಯಮ್-4 ಮಿಷನ್‌ನ ಕಮಾಂಡರ್ ಆಗಿ ನಾಸಾದ ಮಾಜಿ ಗಗನಯಾತ್ರಿ ಪೆಗ್ಗಿ ವಿಟ್ಸನ್ ಕಾರ್ಯನಿರ್ವಹಿಸಲಿದ್ದಾರೆ. ಅವರು ಈಗ ಆಕ್ಸಿಯಮ್ ಸ್ಪೇಸ್‌ನಲ್ಲಿ ಕೆಲಸ ಮಾಡುತ್ತಿದ್ದಾರೆ. ಇತರ ಇಬ್ಬರು ಸಿಬ್ಬಂದಿ ಸದಸ್ಯರು ಪೋಲೆಂಡ್‌ನ ಸ್ಲಾವೋಸ್ಜ್ ಉಜ್ನಾನ್ಸ್ಕಿ (ಯುರೋಪಿಯನ್ ಬಾಹ್ಯಾಕಾಶ ಸಂಸ್ಥೆಯ ಗಗನಯಾತ್ರಿ ಮತ್ತು ಮಿಷನ್ ತಜ್ಞರಾಗಿದ್ದಾರೆ), ಹಂಗೇರಿಯ ಟಿಬೋರ್ ಕಾಪು ಕೂಡ ಅದೇ ಪಾತ್ರವನ್ನು ವಹಿಸುತ್ತಾರೆ. ಗ್ರೂಪ್ ಕ್ಯಾಪ್ಟನ್ ಶುಕ್ಲಾ ಈ ಮಿಷನ್‌ನ ಪೈಲಟ್ ಆಗಿರುತ್ತಾರೆ.

## ಜನಿವಾರ ಪ್ರಕರಣ :ಸಿದ್ದರಾಮಯ್ಯ ಕ್ಷಮೆ ಕೇಳಲಿ, ತಪ್ಪಿತಸ್ಥರ ವಿರುದ್ಧ ಕ್ರಮ ಆಗಲಿ: ಆರ್.ಅಶೋಕ್



ಮಲ್ಲಮ್ಮನುಡಿವಾರ್ತೆಬೆಂಗಳೂರು:ಏ.18: ಸಿಇಟಿ ಪರೀಕ್ಷೆಯಲ್ಲಿ ಬ್ರಾಹ್ಮಣರಿಗೆ ಜನಿವಾರಕ್ಕೆ ಅವಕಾಶ ನೀಡದೇ ಸರ್ಕಾರ ಅಪಮಾನ ಮಾಡಿದೆ. ಹಿಂದೂಗಳ ಬಗ್ಗೆ ಎಷ್ಟು ಕೋಪ ಇದೆ ಎಂಬುದು ಗೊತ್ತಾಗುತ್ತದೆ. ಸಿದ್ದರಾಮಯ್ಯ ಕೂಡಲೇ ರಾಜ್ಯದ ಜನರ ಕ್ಷಮೆ ಕೋರಲಿ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಆಗ್ರಹಿಸಿದ್ದಾರೆ.

ಬೆಂಗಳೂರಿನಲ್ಲಿ ಮಾತಾಡಿದ ಅಶೋಕ್, ಬ್ರಾಹ್ಮಣರು ಮಾತ್ರವಲ್ಲದೆ, ಮರಾಠರು, ವೈಶ್ಯಸಮಯದಾಯದವರು ಕೂಡ ಜನಿವಾರ ಹಾಕುತ್ತಾರೆ. ಈ ಎಲ್ಲ ಸಮುದಾಯಗಳಿಗೆ ಅಪಮಾನ ಮಾಡಲಾಗಿದೆ. ಮುಸ್ಲಿಂ ಹುಡುಗಿಯರು ಹಿಜಬ್ ಹಾಕಲು ಅವಕಾಶ ನೀಡಲಾಗಿದೆ. ಸಿಎಂ ಸಿದ್ದರಾಮಯ್ಯ ಕ್ಷಮೆ ಕೇಳಿ, ಅಧಿಕಾರಿಗಳನ್ನು ಅಮಾನತು ಮಾಡಬೇಕು ಎಂದು ಆಗ್ರಹಿಸಿದರು.

ವಕ್ಫ್ ಹೆಸರಲ್ಲಿ ಜನರ ಜಮೀನುಗಳನ್ನು

(2ನೇ ಪುಟ ನೋಡಿ)

## ಸಿಇಟಿ ಕೀ ಉತ್ತರ ಪ್ರಕಟ: ಕೆಇಎ



ಮಲ್ಲಮ್ಮನುಡಿವಾರ್ತೆಬೆಂಗಳೂರು:ಏ.18: ಪ್ರಸಕ್ತ ಸಾಲಿನ ಸಾಮಾನ್ಯ ಪ್ರವೇಶ ಪರೀಕ್ಷೆ ಗುರುವಾರ ಮುಗಿದಿದ್ದು, ಶುಕ್ರವಾರವೇ ಎಲ್ಲ ನಾಲ್ಕು ವಿಷಯಗಳ 16 ವರ್ಷನ್‌ಗಳ ಕೀ ಉತ್ತರಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ತನ್ನ ವೆಬ್‌ಸೈಟ್‌ನಲ್ಲಿ ಪ್ರಕಟಿಸಿದೆ.

(2ನೇ ಪುಟ ನೋಡಿ)

## ಒಂದನೇ ಪುಟದಿಂದ

# ಸಿಡಿಲು ಬಡಿದು ಇಬ್ಬರು ಸಾವು

ಇಂದು ಮಧ್ಯಾಹ್ನ 3:20 ರಿಂದ 4 ಗಂಟೆಯವರೆಗೆ ಜಿಲ್ಲೆಯ ವಿವಿಧೆಡೆ ಗುಡುಗು ಸಹಿತ ಮಳೆಯಾಗಿದೆ. ನಗರದಲ್ಲಿ ವರ್ಷದ ಮೊದಲ ಮಳೆ ಸುರಿಯಿತು. ಮಸ್ಕಿ, ಹಟ್ಟಿ ಚಿನ್ನದ ಗಣಿ, ಲಿಂಗಸುಗೂರಲ್ಲಿ ಸಾಧಾರಣ ಮಳೆಯಾಗಿದೆ.ಇನ್ನು ರಾಯಚೂರು ತಾಲ್ಲೂಕಿನ ಉಡಮಗಲ್ ಹಾಗೂ ಮರ್ಚಾಟ್ಹಾಳ ಗ್ರಾಮದಲ್ಲಿ ಸಿಡಿಲು ಬಡಿದು ಇಬ್ಬರು ಮೃತಪಟ್ಟಿದ್ದಾರೆ.

ಮೃತರನ್ನು ಉಡಮಗಲ್ ನ ಮಲ್ಲಮ್ಮ(50) ಹಾಗೂ ಮರ್ಚಾಟ್ಹಾಳದ ಹನುಮಂತ(55) ಎಂದು ಗುರುತಿಸಲಾಗಿದೆ.

ಮಲ್ಲಮ್ಮ ಅವರು ಗ್ರಾಮದ ಹೊರವಲಯದಲ್ಲಿ ಕುರಿ ಮೇಯಿಸಲು ಹೋದಾಗ ಸಿಡಿಲು ಬಡಿದು ಸಾವನ್ನಪ್ಪಿದ್ದಾರೆ.

# ಕಾರ್ಯಕರ್ತರಿಗೆ ವಿಜಯೇಂದ್ರ ಕರೆ

ಮೂಗಿನ ಕೆಳಗೇ ಭ್ರಷ್ಟಾಚಾರ, ಸ್ಯಾಂಡ್ ಮಾಫಿಯ ನಡೆದಿದೆ ಎಂದು ಎಲ್ಲರೂ ಮಾತನಾಡುತ್ತಿದ್ದಾರೆ ಎಂದು ಹೇಳಿದರು.

ಸ್ವಂತ ಜಿಲ್ಲೆಯಲ್ಲಿ ಈ ರೀತಿ ಹಗಲು ದರೋಡೆಗೆ ಯಾಕೆ ಅವಕಾಶ ಕೊಟ್ಟಿದ್ದಾರೆ? ಅವರಿಗೇನು ಲಾಭ ಇದರಿಂದ? ಇದನ್ನು ಉತ್ತರಿಸಬೇಕೆಂದು ಆಗ್ರಹಿಸಿದರು.

ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಸಚಿವ ಬಿ.ಶ್ರೀರಾಮುಲು, ವಿಧಾನಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್, ಶಾಸಕರಾದ ಡಾ. ಅವಿನಾಶ್ ಜಾಧವ್, ಬಸವರಾಜ ಮತ್ತಿಮೂಡ್, ಮಾಜಿ ಸಂಸದ ಡಾ. ಉಮೇಶ್ ಜಾಧವ್, ವಿಧಾನಪರಿಷತ್ ಸದಸ್ಯರಾದ ಬಿ.ಜಿ. ಪಾಟೀಲ್, ಸುನೀಲ್ ವಲ್ಯಾಪುರೆ, ಮಾಜಿ ಶಾಸಕರಾದ ರಾಜಕುಮಾರ್ ಪಾಟೀಲ್ ತೇಲ್ಕೂರ್, ಸುಭಾಷ್ ಗುತ್ತೇದಾರ್, ದತ್ತಾತ್ರೇಯ ಪಾಟೀಲ್ ರೇವೂರ, ವಿಧಾನಪರಿಷತ್ ಮಾಜಿ ಸದಸ್ಯರಾದ ಅಮರನಾಥ್ ಪಾಟೀಲ್, ಶಶಿಲ್ ಜಿ. ನಮೋಶಿ, ರೈತ ಮೋರ್ಚಾ ರಾಜ್ಯ ಅಧ್ಯಕ್ಷ ಮತ್ತು ಮಾಜಿ ಶಾಸಕ ಎ.ಹೆಚ್. ಪಾಟೀಲ್ ನಡಹಳ್ಳಿ, ಮುಖಂಡ ನಿತಿನ್ ಗುತ್ತೇದಾರ್, ಕಲಬುರ್ಗಿ ನಗರ ಜಿಲ್ಲಾಧ್ಯಕ್ಷ ಚಂದ್ರಕಾಂತ್ ಬಿ. ಪಾಟೀಲ್, ಕಲಬುರಗಿ ಗ್ರಾಮಾಂತರ ಜಿಲ್ಲಾಧ್ಯಕ್ಷ ಅಶೋಕ್ ಬಗಲಿ, ಕಲಬುರ್ಗಿ ಗ್ರಾಮಾಂತರ ನಿಕಟಪೂರ್ವ ಜಿಲ್ಲಾಧ್ಯಕ್ಷ ಶಿವರಾಜ್ ಪಾಟೀಲ್ ರದ್ದೇವ್ಡಗಿ, ಜಿಲ್ಲಾ ಪದಾಧಿಕಾರಿಗಳು, ಮಂಡಲ ಅಧ್ಯಕ್ಷರು ಮತ್ತು ಪಕ್ಷದ ಮುಖಂಡರು ಭಾಗವಹಿಸಿದ್ದರು.

# ಸಿಡಿಲು ಬಡಿದು ಎಮ್ಮೆ ಕರು ಸಾವು



20ಕ್ಕೂ ಅಧಿಕ ಮರ ಗಿಡಗಳು ಭಾರಿ ಬಿರುಗಾಳಿಗೆ ಉರುಳಿ ಬಿದ್ದಿವೆ, ಯಾವುದೇ ಜೀವ ಹಾನಿಯಾಗಿಲ್ಲ ಎಂದು ತಿಳಿದು ಬಂದಿದೆ.

ಪಟ್ಟಣದ ಪುರಸಭೆ, ತಹಶೀಲ್ ಕಚೇರಿ ಆವರಣದಲ್ಲಿ ನಿಲ್ಲಿಸಲಾದ ಕಾರ ಮೇಲೆ, ಅಂಗಡಿಗಳ ಮೇಲೆ ಮರ ಗಿಡಗಳು ಬಿದ್ದು ಹಾನಿಯಾಗಿದ್ದು, ಅಲ್ಲದೇ ತಾಲೂಕಿನ ನಿರ್ಣಾ, ಮುಸ್ತರಿ ಸೇರಿ ಒಂದೆರಡು ಕಡೆ ಮನೆಗಳಿಗೂ ಹಾನಿಯಾಗಿರುವ ಮಾಹಿತಿಯಿದ್ದು, ಭಾರಿ ಬಿರುಗಾಳಿಗೆ ಪಟ್ಟಣದ ಮನೆಗಳ ಮೇಲಿನ ತಗಡುಗಳು ಹಾರಿ ಹೋಗಿದ ಪರಿಣಾಮ ಜನರು ತೊಂದರೆಗೊಳಗಾದರು. ಮುಸ್ತರಿ ಗ್ರಾಮದಲ್ಲಿ ರೈತನು ಬೆಳೆದ ಪಪಾಯಿ ಬೆಳೆ ಹಾಳಾಗಿದೆ ಎನ್ನಲಾಗಿದ್ದು, ಮುಸ್ತರಿ ಗ್ರಾಮದ ಸರ್ವೇ ನಂಬರ್ 312ರಲ್ಲಿ ಸಿಡಿಲು ಬಡಿದು ಎಮ್ಮೆಯ ಕರು ಸಾವನಪ್ಪಿದೆ. ಅದೆ ರೀತಿ ತಾಲೂಕಿನ ಇತರೆಡೆಯಲ್ಲಿಯೂ ರೈತರ ಬೆಳೆಗಳು ಹಾನಿಯಾಗಿರುವ ಸಂಭವವಿದೆ. ಭಾರಿ ಬಿರುಗಾಳಿ ಮಳೆಯ ಅವಾಂತರದ ಹಿನ್ನೆಲ್ಲೆಯಲ್ಲಿ ಪೊಲೀಸ ಇಲಾಖೆ ಮತ್ತು ತಾಲೂಕು ಆಡಳಿತ ಮತ್ತು ಪುರಸಭೆ, ಅರಣ್ಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿದ್ದು, ಧರೆಗುರುಳಿದ ಮರಗಿಡಗಳನ್ನು ತೆರವುಗೊಳಿಸುವ ಕಾರ್ಯಚರಣೆ ನಡೆಸಿದರು. ಮರಗಿಡಗಳು ಉರುಳಿ ಬಿದ್ದಿದ್ದು, ಅದನ್ನು ತೆರವುಗಳಿಸಲು ಅರಣ್ಯ ಇಲಾಖೆ, ಪುರಸಭೆ, ತಾಲೂಕು ಆಡಳಿತ ಮತ್ತು ಪೊಲೀಸ ಇಲಾಖೆಯ ಸಹಯೋಗದಲ್ಲಿ ಕಾರ್ಯಚರಣೆ ಆರಂಭಿಸಲಾಗಿದೆ. ರೈತರು ಬೆಳೆದಿರುವ ಪಪಾಯಿ ಕ್ರಾಪ ಹಾಳಾಗಿರುವ ಮತ್ತು ಮನೆಗಳ ಮೇಲಿನ ತಗಡುಗಳು ಹಾರಿ ಹಾನಿಯಾಗಿರುವ ಮಾಹಿತಿ ಮೇರೆಗೆ ನಮ್ಮ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿದ್ದಾರೆ ಎಂದು ತಹಶೀಲ್ದಾರರು ಹಾಗೂ ತಾಲೂಕು ದಂಡಾಧಿಕಾರಿ ಮಂಜುನಾಥ ಪಂಚಾಳ ಪತ್ರಿಕೆಗೆ ಮಾಹಿತಿ ನೀಡಿದ್ದಾರೆ.

# ವಿಜಯನಗರ ಸಾಮ್ರಾಜ್ಯ ಸಂಸ್ಥಾಪನಾ ಹಾಗೂ ಹರಿಹರ ದೇವರಾಯರ ಪಟ್ಟಾಭಿಷೇಕ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಏ.18:ಗಂಗಾವತಿ ನಗರದ ಶ್ರೀಕೃಷ್ಣದೇವರಾಯ ವೃತ್ತದಲ್ಲಿ ಗಂಡುಗಲಿ ಕುಮಾರರಾಮ ಹೋರಾಟ ಸಮಿತಿ, ಮತ್ತು ಅಖಿಲ ಕರ್ನಾಟಕ ಹರಿಹರ ಹಕ್ಕ--ಬುಕ್ಕನಾಯಕ ವೇದಿಕೆಯಿಂದ 689 ನೇ ಕರ್ನಾಟಕ (ವಿಜಯನಗರ) ಸಾಮ್ರಾಜ್ಯ ಸಂಸ್ಥಾಪನಾ ದಿನವನ್ನು. ಮತ್ತು ವಿಜಯನಗರದ ಮೊದಲ ಅರಸ ಹರಿಹರ ದೇವರಾಯರ ಪಟ್ಟಾಭಿಷೇಕ ದಿನವನ್ನು ಆಚರಿಸಿಲಾಯಿತು.

ಈ ಸಂಧರ್ಭದಲ್ಲಿ ಕುಮಾರರಾಮನ ವಂಶಸ್ಥರಾದ ಹೆಚ್ ರಾಜೇಶ್ ನಾಯಕ ದೊರೆ ಮಾತನಾಡಿ,

ವೀರ ಕಂಪಿಲರಾಯ ಮತ್ತು ಗಂಡುಗಲಿ ಕುಮಾರರಾಮರ ಆಡಳಿತದ ಮುಂದುವರೆದ ಭಾಗವೇ ಸಂಗಮ ಮನೆತನದ ಹರಿಹರ,ಬುಕ್ಕರಾಯರ ಆಡಳಿತವಾಗಿದೆ ಕ್ರಿ,ಶ 1336 ರಲ್ಲಿ ಆನೆಗೊಂದಿಯಲ್ಲಿ ಕುಮಾರರಾಮನ ಕನಸಿನ ಯೋಜನೆಯಂತೆ ಇವರುಗಳು ಆಳ್ವಿಕೆಯನ್ನು ನಡೆಸಿ ನಾಡು ನುಡಿ ಧರ್ಮ ಕಲೆ ಸಾಹಿತ್ಯ ಸಂಸ್ಕೃತಿಗೆ ಭದ್ರವಾದ ಅಡಿಪಾಯವನ್ನು ಹಾಕಿಕೊಟ್ಟರು ಇವರನ್ನೆ ಅನುಸರಿಸಿದ ಸಾಳುವ ತಳವಾರ,ತುಳುವ, ಅರವೀಡು,ಮನೆತನಗಳು ಸುಭದ್ರ ಸುಸ್ಥಿರವಾದ ಸಾಮ್ರಾಜ್ಯದ ಆಡಳಿತವನ್ನು ನಡೆಸಿದ್ದಾರೆ ಎಂದರು. ಕರವೇ ಜಿಲ್ಲಾಧ್ಯಕ್ಷ ಪಂಪಣ್ಣ ನಾಯಕ,ಮಾತನಾಡಿ ಕರ್ನಾಟಕ ವಿಜಯನಗರ ಸಾಮ್ರಾಜ್ಯ ಸಂಸ್ಥಾಪನಾ ಹಾಗೂ ಹರಿಹರ ದೇವರಾಯರ ಪಟ್ಟಾಭಿಷೇಕ ದಿನಾಚರಣೆಯನ್ನು ರಾಜ್ಯ ಸರ್ಕಾರ ರಜೆಯನ್ನು ಘೋಷಿಸಿ ಆಚರಣೆಯನ್ನು ಮಾಡಬೇಕೆಂದು ಒತ್ತಾಯಿಸಿದರು.

ಇದೇ ಸಂದರ್ಭದಲ್ಲಿ ಯುವ ಸಂಶೋಧಕರಾದ ಹರನಾಯಕ ಮಾತನಾಡಿ ರಾಜ್ಯದಲ್ಲಿ ನಮ್ಮ ರಾಜರ ಸ್ಮರಣೆಯನ್ನೆ ನಾವುಗಳು ಮರೆತು ಬೇರೆ ರಾಜರನ್ನು ಹೊತ್ತು ಮೆರೆಸುತ್ತಿದ್ದೆವೆ ಇನ್ನಾದರು ಕನ್ನಡಿಗರು ಬದಲಾಗಬೇಕು ವಿಜಯನಗರ ಅರಸ ಸ್ಮರಣೆ ತುಂಬಾ ಅವಶ್ಯಕವಾಗಿದ್ದು ನಮ್ಮ ಸ್ವಾಭಿಮಾನವನ್ನು ನಾವು ಮರೆಯುಬಾರದು ವಿಜಯನಗರ ಸಂಸ್ಥಾಪನಾ ದಿನಾಚರಣೆಯನ್ನು ಸರ್ಕಾರ ರಾಜ್ಯಾದ್ಯಂತ ಸರ್ಕಾರಿ ಕಾರ್ಯಕ್ರಮವಾಗಿ ಆಚರಣೆ ಮಾಡಬೇಕು ಎಂದರು.

ಈ ಸಂದರ್ಭದಲ್ಲಿ ಭೀಮರಾಯಪ್ಪ ಸಿಂಗಾಪುರ, ಪ್ರಹ್ಲಾದ ಕುಲಕರ್ಣಿ,ದೇವಪ್ಪ ವಾಲಿಕಾರ,ರವಿ ದೋತರ, ಗುಡ್ಡೆಕಲ್ಲ ಶರಣಪ್ಪ,ಕುಮಾರಿ ಸಿಂಧು,ಹತ್ತಿಮರದ ರಾಜು ನಾಯಕ, ಹೆಚ್ ,ಆರ್ ,ಕುಮಾರರಾಮ,ರಾಮಣ್ಣ ದಫೇದಾರ್, ಅರ್ಜುನ್ ಜಿ,ಆರ್, ದೇವರಾಜ್ ಹೇಮಗುಡ್ಡ, ನರಸಿಂಹ, ಅಭಿನವ ಸೂರ್ಯನಾಯಕ, ಇತರರು ಭಾಗವಹಿಸಿದ್ದರು.

# ಅರಣ್ಯಾಧಿಕಾರಿ ಅಮಾನತ್ತು

ಪತ್ರಕರ್ತನ ಮೇಲೆ ಹಲ್ಲೆ ಘಟನೆ ಖಂಡಿಸಿ ಗುರುವಾರ ಬೀದರ್ ಸೇರಿದಂತೆ ಜಿಲ್ಲೆಯ ವಿವಿಧೆಡೆ ಕಾರ್ಯನಿರತ ಪತ್ರಕರ್ತರ ಸಂಘ ನೇತೃತ್ವದಲ್ಲಿ ಪತ್ರಕರ್ತರು ಪ್ರತಿಭಟನೆ ನಡೆಸಿ, ಆಡಳಿತದ ಮೂಲಕ ಮುಖ್ಯಮಂತ್ರಿ ಮತ್ತು ಅರಣ್ಯ ಸಚಿವರಿಗೆ ಮನವಿ ಸಲ್ಲಿಸಿದರು. ಹಲ್ಲೆ ನಡೆಸಿದ ಸಿಬ್ಬಂದಿಗಳನ್ನು ಅಮಾನತ್ತುಗೊಳಿಸಿ, ಬಂಧಿಸಬೇಕು ಎಂದು ಒತ್ತಾಯಿಸಲಾಗಿತ್ತು.

ಇದಕ್ಕೆ ಸ್ಪಂದಿಸಿದ್ದ ಅರಣ್ಯ ಸಚಿವ ಈಶ್ವರ ಖಂಡ್ರೆ ಅವರು, ದುರ್ವರ್ತನೆ ತೋರಿದ ಅರಣ್ಯ ಇಲಾಖೆಯ ಸಿಬ್ಬಂದಿ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಬೇಕೆಂದು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗೆ ನಿರ್ದೇಶನ ನೀಡಿದ್ದರು. ಅದಾದ ಬಳಿಕ ಈಗ ಉಪ ಅರಣ್ಯ ಸಂರಕ್ಷಣಾಧಿಕಾರಿ ಅಮಾನತ್ತು ಆದೇಶ ಹೊರಡಿಸಿದ್ದಾರೆ.

## ಸಚಿವರು ಏರು ಧ್ವನಿಯಲ್ಲೂ ಮಾತಾಡಿಲ್ಲ: ಸಿಎಂ

ಸಂಪುಟ ಸಭೆಯಲ್ಲಿ ಯಾವುದೇ ಆಕ್ರಮಣಕಾರಿ ವಾದಗಳನ್ನು ತಳ್ಳಿಹಾಕಿದ್ದಾರೆ.

"ನಾವು ನಮ್ಮ ಆಲೋಚನೆಗಳನ್ನು ಹಂಚಿಕೊಂಡಿದ್ದೇವೆ ಅಷ್ಟೇ. ಏರು ಧ್ವನಿ ಅಥವಾ ವಾಗ್ವಾದ, ಅಂತಹದ್ದೇನೂ ನಡೆದಿಲ್ಲ. ಸಲಹೆಗಳನ್ನು ನೀಡಲಾಯಿತು. ಅದನ್ನು ಹೊರತುಪಡಿಸಿ ಯಾವುದೇ ನಿರ್ಧಾರ ಕೈಗೊಂಡಿಲ್ಲ" ಎಂದು ಅವರು ಹೇಳಿದ್ದಾರೆ.

## ತಪ್ಪಿತಸ್ಥರ ವಿರುದ್ಧ ಕ್ರಮ ಆಗಲಿ: ಆರ್.ಅಶೋಕ್

ನುಂಗಿ ಹಾಕಲಾಗಿದೆ. ಮಂಗಳೂರಿನಲ್ಲಿ ಸಿದ್ದರಾಮಯ್ಯ ಪ್ರಾಯೋಜಿತ ಪ್ರತಿಭಟನೆ ನಡೆದಿದೆ. ಮುಸ್ಲಿಮರಿಗೆ ಪ್ರತ್ಯೇಕ ಕಾನೂನು ನೀಡಲು ಸಾಧ್ಯವಿಲ್ಲ. ನೆಲದ ಕಾನೂನನ್ನು ಎಲ್ಲರೂ ಪಾಲಿಸಬೇಕು ಎಂದು ಅಶೋಕ್ ಹೇಳಿದರು.

ಕುಂಕುಮ ಕೇಸರಿ ಕಂಡರೆ ದ್ವೇಷ ಕಾರುತ್ತಿದ್ದ ಸಿಎಂ ಅವರು ಈಗ ಜನಿವಾರದ ವಿರುದ್ಧ ಹಗೆತನ ಮೆರೆಯುವ ಮೂಲಕ ಮತ್ತೊಮ್ಮೆ ತಮ್ಮ ಹಿಂದೂ ವಿರೋಧಿ ಮಾನಸಿಕತೆಯನ್ನ ಪ್ರದರ್ಶನ ಮಾಡಿದ್ದಾರೆ ಎಂದು ಅಶೋಕ್ ಕಿಡಿಕಾರಿದರು.

ತೀರ್ಥಹಳ್ಳಿಯಲ್ಲಿ ಸಿಇಟಿ ಪರೀಕ್ಷೆ ವೇಳೆಯಲ್ಲಿ ಬ್ರಾಹ್ಮಣ ಸಮುದಾಯದ ವಿದ್ಯಾರ್ಥಿಗಳಿಗೆ ಬಲವಂತವಾಗಿ ಜನಿವಾರ ತೆಗೆಸಿ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತಂದಿದ್ದರೆ, ಬೀದರ್‌ನಲ್ಲಿ ಜನಿವಾರ ತೆಗೆಯಲೊಪ್ಪದ ವಿದ್ಯಾರ್ಥಿಯನ್ನು ಪರೀಕ್ಷೆಗೆ ಹಾಜರಾಗಲು ಬಿಡದೆ ವಿದ್ಯಾರ್ಥಿಯ ಭವಿಷ್ಯವನ್ನ ಹಾಳು ಮಾಡಿದೆ. ಇದು ಹಿಂದೂ ವಿರೋಧಿ ಸರ್ಕಾರ ಎಂದು ಅಶೋಕ್ ವಾಗ್ದಾಳಿ ನಡೆಸಿದರು.

# ಉತ್ತರ ಪ್ರಕಟ: ಕೆಇಎ

ಭೌತವಿಜ್ಞಾನ, ರಸಾಯನವಿಜ್ಞಾನ, ಗಣಿತ ಮತ್ತು ಜೀವ ವಿಜ್ಞಾನ ವಿಷಯಗಳ ಕೀ ಉತ್ತರಗಳನ್ನು ಪ್ರಕಟಿಸಿದ್ದು,

ಆಕ್ಷೇಪಣೆಗಳು ಇದ್ದಲ್ಲಿ ಏ.22ರ ಸಂಜೆ 5 ಗಂಟೆ ಒಳಗೆ ಆನ್‌ಲೈನ್ ಮೂಲಕ ಸಲ್ಲಿಸಬಹುದು ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಆಕ್ಷೇಪಣೆ ಸಲ್ಲಿಸುವ ಸಂದರ್ಭದಲ್ಲಿ ಪತ್ರಿಕೆಯ ವಿವರ, ಪರೀಕ್ಷಾ ದಿನಾಂಕ, ವರ್ಷನ್ ಕೋಡ್, ಪ್ರಶ್ನೆ ಸಂಖ್ಯೆ ಹಾಗೂ ಪೂರಕ

ದಾಖಲೆಗಳನ್ನು ಪಿಡಿಎಫ್ ರೂಪದಲ್ಲಿ ಸಲ್ಲಿಸಬೇಕು. ಈ ಮಾಹಿತಿ ಸರಿ ಇಲ್ಲದಿದ್ದಲ್ಲಿ ಅಂತಹ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ತಿದ್ದುಪಡಿಗೆ ಅವಕಾಶ

ತಮ್ಮ ಸಿಇಟಿ ಅರ್ಜಿಯಲ್ಲಿ ಇನ್ನೂ ಏನಾದರೂ ತಪ್ಪುಗಳಿದ್ದು, ಅವುಗಳನ್ನು ತಿದ್ದುಪಡಿ ಮಾಡಿಕೊಳ್ಳಲು ಇಚ್ಛಿಸುವವರಿಗೆ ಮೇ 2ರವರೆಗೂ ಅವಕಾಶ ನೀಡಲಾಗಿದೆ. ಮೀಸಲಾತಿ, ವಿಶೇಷ ಪ್ರವರ್ಗ,

ಶೈಕ್ಷಣಿಕ ವಿವರಗಳು, ಕ್ಲಾಸ್ ಕೋಡ್ (ಎ, ಬಿ, ಸಿ, ಡಿ, ಇ, ಎಫ್, ಜಿ, ಎಚ್, ಐ, ಜೆ, ಕೆ, ಎಲ್, ಎಂ, ಎನ್, ಓ, ಝಡ್)


ಇತ್ಯಾದಿ ತಪ್ಪಾಗಿದ್ದರೆ ಅವುಗಳನ್ನು ಸರಿ ಮಾಡಿಕೊಳ್ಳಬಹುದು ಎಂದು ಪ್ರಸನ್ನ ತಿಳಿಸಿದ್ದಾರೆ.

ಅಭ್ಯರ್ಥಿಗಳ ಹೆಸರು, ತಂದೆ/ತಾಯಿ ಹೆಸರು, ಜನ್ಮ ದಿನಾಂಕ, 10ನೇ ತರಗತಿ ಹಾಗೂ 12ನೇ ತರಗತಿಯ ನೋಂದಣಿ ಸಂಖ್ಯೆ ಇತ್ಯಾದಿ ಮಾಹಿತಿಗಳು ತಪ್ಪಾಗಿ ನಮೂದು ಮಾಡಿದ್ದಲ್ಲಿ ದಾಖಲೆ ಸಮೇತ ಪ್ರಾಧಿಕಾರಕ್ಕೆ ಬಂದು ಮನವಿ ಸಲ್ಲಿಸಬೇಕು ಎಂದು ಅವರು ಸೂಚಿಸಿದ್ದಾರೆ.

ಕೃಷಿಕರ ಕೋಟಾದಡಿ ಪ್ರಾಯೋಗಿಕ ಪರೀಕ್ಷೆ ಬರೆಯಲು ಸಿಇಟಿ ಅರ್ಜಿಯಲ್ಲಿ ನಮೂದಿಸದೇ ಇದ್ದಲ್ಲಿ ಏ.20ರೊಳಗೆ ತಿದ್ದುಪಡಿ ಮಾಡಿಕೊಳ್ಳಬೇಕು. ಹೊಸದಾಗಿ ಕೃಷಿಕರ ಕೋಟಾ

ನಮೂದಿಸಿದವರು ಏ.21ರಂದು ತಮ್ಮ ದಾಖಲೆಗಳನ್ನು ಕೆಇಎ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಬೇಕು ಎಂದು ಅವರು ತಿಳಿಸಿದ್ದಾರೆ.

# ಪರಿಶ್ರಮದಿಂದ ಮಾತ್ರ ಯಶಸ್ಸು ಸಾಧ್ಯ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಏ.18:ವಿದ್ಯಾರ್ಥಿ ಜೀವನದಲ್ಲಿ ಏಕಾಗ್ರತೆ ಹಾಗೂ ಸತತ ಪರಿಶ್ರಮದಿಂದ ಮಾತ್ರ ಯಶಸ್ಸು ಪಡೆಯಬಹುದು ಎಂದು ಡೋಣಗಾಂವ ವಲಯ ಸಿಆರಸಿ ರಮಾಕಾಂತ ಕಾಳೆ ಹೇಳಿದರು.ತಾಲೂಕಿನ ಖತಗಾಂವ ಗ್ರಾಮದ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಶುಕ್ರವಾರ ಏಳನೇ ತರಗತಿ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡ ಬಿಳ್ಕೋಡುಗೆ ಸಮಾರಂಭದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ವಿನಯವಂತಿಕೆ ಹಾಗೂ ಶಿಸ್ತು ಸಂಯಮವನ್ನು ಮೈಗೂಡಿಸಿಕೊಂಡು ಸಮಾಜಕ್ಕೆ ಕೊಡುಗೆ ನೀಡುವ ಮೂಲಕ ಸರ್ವಶ್ರೇಷ್ಠ ಸಾಧನೆ ಮಾಡಬೇಕು. ವಿದ್ಯಾರ್ಥಿಗಳು ಶಿಕ್ಷಣದ ಜ್ಞಾನದ ಬೆಳಕಿನ ಶಕ್ತಿಯ ಮೂಲಕ ಸಾಧನೆ ಮಾಡಬೇಕು. ಶ್ರದ್ಧಾ ಭಕ್ತಿಯಿಂದ ವ್ಯಾಸಂಗ ಮಾಡಿ ಗುರಿಯನ್ನು ತಲುಪಿ ತಂದೆತಾಯಿಗಳು ಹಾಗೂ ಗುರುಹಿರಿಯರಿಗೆ ಕೀರ್ತಿ ತರಬೇಕು. ಮೊಬೈಲ್ ಬಳಕೆ ಹೆಚ್ಚಾಗುತ್ತಿದ್ದಂತೆ ವಿದ್ಯಾರ್ಥಿಗಳಲ್ಲಿ ಓದುವ ಆಸಕ್ತಿ ಕಡಿಮೆಯಾಗುತ್ತಿದೆ. ಹೀಗಾಗಿ ಉನ್ನತ ಸಾಧನೆಗಾಗಿ ವಿದ್ಯಾರ್ಥಿಗಳು ಪುಸ್ತಕಗಳು ಓದುವ ಹವ್ಯಾಸ ಹೆಚ್ಚಿಸಿಕೊಳ್ಳಬೇಕು ಎಂದರು.ಮುರ್ಕಿ ಸಿಆರಸಿ ಬಾಲಾಜಿ ಗವಳಿ ಮಾತನಾಡಿ, ವಿದ್ಯಾರ್ಥಿಗಳು ಸದಾ ಅಧ್ಯಯನಶೀಲರಾಗಿರಬೇಕು. ಅಂದಾಗ ಮಾತ್ರ ಯಶಸ್ವಿಯಾಗಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ಓದಿನ ಕಡೆ ಹೆಚ್ಚು ಗಮನ ಹರಿಸುವ ಮೂಲಕ ಸುಂದರ ಬದುಕು ಕಟ್ಟಿಕೊಳ್ಳಬೇಕು ಎಂದು ನುಡಿದರು.ನಿವೃತ್ತ ಶಿಕ್ಷಕ ಸೂರ್ಯಕಾಂತ ಮಹಾಜನ, ಶಿಕ್ಷಕರಾದ ಮಲ್ಲಮ್ಮ ಕಸ್ತೂರೆ, ಸಿದ್ರಾಮಪ್ಪಾ ಬಿರಾದಾರ, ವಿಜಯಕುಮಾರ, ಮಹಾದೇವ ಬಿರಾದಾರ, ರಚಿತಾ ಗುಡಮೆ ಹಾಗೂ ಮಕ್ಕಳು ಇದ್ದರು.

# ಸ್ವಾಭಿಮಾನಿ ಬಂಜಾರಾ ಜನಜಾಗೃತಿ ಸಮಾವೇಶ

ಮಲ್ಲಮ್ಮ ನುಡಿ ವಾರ್ತೆ

ಅಫಜಲಪುರ:ಏ.18: ತಾಲೂಕಿನ ಬಂಜಾರಾ ರಕ್ಷಣಾ ವೇದಿಕೆ ಹಾಗೂ ಬಂಜಾರಾ ಸಮಾಜದ ವಿವಿಧ ಸಂಘಟನೆಗಳ ಒಕ್ಕೂಟದಲ್ಲಿ ಬಂಜಾರಾ ಜನಜಾಗೃತಿ ಸಮಾವೇಶ ಏ.24 ರಂದು ನಡೆಯಲಿದೆ. ಕಾರ್ಯಕ್ರಮದಲ್ಲಿ ಖ್ಯಾತ ಚಲನಚಿತ್ರ ನಟಿ ಕಲ್ಪನಾ ಪವಾರ ಹಾಗೂ ಬಿಗ್ ಬಾಸ್ ವಿಜೇತ ಹಣಮಂತ ಲಮಾಣಿ ಭಾಗವಹಿಸಲಿದ್ದಾರೆ ಎಂದು ಬಂಜಾರಾ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಅಪ್ಪು ರಾಠೋಡ ಹಾಗೂ ಪದಾಧಿಕಾರಿಗಳು ಮಾಧ್ಯಮಗೋಷ್ಠಿಯಲ್ಲಿ ತಿಳಿಸಿದರು.ನಂತರ ಮಾತನಾಡಿದ ಬಂಜಾರಾ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಅಪ್ಪು ರಾಠೋಡ ಸಂತ ಸೇವಾಲಾಲ ಮಹಾರಾಜರ 286ನೇ ಜಯಂತ್ಯೋತ್ಸವ ಹಾಗೂ ಸ್ವಾಭಿಮಾನಿ ಬಂಜಾರಾ ಸಮಾಜ ಜನಜಾಗೃತಿ ಸಮಾವೇಶವು ಇದೆ ತಿಂಗಳು ಏಪ್ರಿಲ್ 24 ರಂದು ಅಫಜಲಪುರ ಪಟ್ಟಣದ ಶ್ರೀಗುರು ಮಳೇಂದ್ರ ಶಿವಾಚಾರ್ಯ ಕಲ್ಯಾಣ ಮಂಟಪದಲ್ಲಿ ನಡೆಯಲಿದೆ ಎಂದರು.ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯದಲ್ಲಿ ಮಹಾರಾಷ್ಟ್ರ ರಾಜ್ಯದ ಬಂಜಾರಾ ಕಾಶಿಕ್ಷೇತ್ರ ಪೌರಾಗಡ ಶ್ರೀ ಬಾಬುಸಿಂಗ ಮಹಾರಾಜರು ಹಾಗೂ ಖ್ಯಾತ ಕಲಾವಿದ ಟಿವಿ ವಾಹಿನಿಗಳ ರಿಯಾಲಿಟಿ ಶೋ ಬಿಗ್ ಬಾಸ್ ವಿಜೇತ ಹಾಗೂ ಸರಗಮಪ ಸಿಂಗರ್ ಖ್ಯಾತಿಯ ಹಣಮಂತ ಲಮಾಣಿ ಹಾಗೂ ಖ್ಯಾತ ಚಲನಚಿತ್ರ ನಟಿ ಕಲ್ಪನಾ ಪವಾರ ಸೇರಿದಂತೆ ಅನೇಕ ರಾಜಕೀಯ ದುರಿಣರು ಸೇರಿದಂತೆ ನಾಡಿನ ಹೆಸರಾಂತ ಮಠಾಧಿಶರು ಭಾಗಿಯಾಗಲಿದ್ದಾರೆ.

# ವಿಷಮುಕ್ತ ಕೃಷಿಯನ್ನು ಬೆಂಬಲಿಸಿ:ವಿಷ್ಣುವರ್ಧನ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಏ.18:ವಿಷಮುಕ್ತ ಕೃಷಿಯನ್ನು ಬೆಂಬಲಿಸಿ ಆರೋಗ್ಯವನ್ನು ಕಾಪಾಡಿಕೊಳ್ಳುವುದು, ಮಣ್ಣಿನ ರಚನೆಯನ್ನು ಹೆಚ್ಚಿಸುವುದು, ಆದಾಯವನ್ನು ಹೆಚ್ಚಿಸುವುದು ಮತ್ತು ವೆಚ್ಚವನ್ನು ಕಡಿಮೆ ಮಾಡುವುದು ಮುಂತಾದ ವಿವಿಧ ವಿಷಯಗಳನ್ನು ರೈತರ ರೂಡಿ ಮಾಡಿಕೊಳ್ಳಬೇಕು ಎಂದು ವಿಷ್ಣುವರ್ಧನ ಅವರು ಹೇಳಿದರು.

ತಾಲೂಕಿನ ಬಾಲೂರು ಗ್ರಾಮದಲ್ಲಿ ಸ್ವಯಂಚಾಲಿತ ಸಂಸ್ಥೆ ಆಯೋಜಿಸಿದ ರೈತ ಮಹಿಳೆಯರಿಗಾಗಿ ಸ್ವ-ಯಂ ಶಿಕ್ಷಣ ಪ್ರಯೋಗ ತರಬೇತಿ ಕಾರ್ಯಕ್ರಮದಲ್ಲಿ ಬೀದರ ನಬಾರ್ಡ್'ನ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ರಾಷ್ಟ್ರೀಯ ಬ್ಯಾಂಕ ಸಹಾಯಕ ವ್ಯವಸ್ಥಾಪಕರಾದ ವಿಷ್ಣುವರ್ಧನ ಅವರು ಮಾತಾನಾಡಿದರು.

ಇದು ಭಾರತದ ಪುಣೆ ಮೂಲದ ಸಂಸ್ಥೆ, ಇದನ್ನು 1998 ರಲ್ಲಿ ಪ್ರೇಮಾ ಗೋಪಾಲನ್ ಮತ್ತು ಶೀಲಾ ಪಟೇಲ್ ಸಹ-ಸ್ಥಾಪಿಸಿದರು ಮತ್ತು ಕೃಷಿ, ಆರೋಗ್ಯ ಮತ್ತು ನೈರ್ಮಲ್ಯದಂತಹ ಕ್ಷೇತ್ರಗಳಲ್ಲಿ ಮಹಿಳಾ ಉದ್ಯಮಿಗಳನ್ನು ಬೆಂಬಲಿಸುವ ಗುರಿಯನ್ನು ಹೊಂದಿದೆ ಎಂದು

ಇಂದು, ಸಂಸ್ಥೆಯು ಭಾರತದ ಮಹಾರಾಷ್ಟ್ರ, ಗುಜರಾತ್, ಬಿಹಾರ, ಅಸ್ಸಾಂ, ತಮಿಳುನಾಡು, ಕೇರಳ, ಒಡಿಶಾ ಮತ್ತು ಈಗ ಕರ್ನಾಟಕದಲ್ಲಿ ಕಾರ್ಯನಿರ್ವಹಿಸುತ್ತದೆ. ಸ್ವಾಮಿ ಶಿಕ್ಷಣ ಪ್ರಸಾಬ್ ಮತ್ತು ಓಕ್ ಫೌಂಡೇಶನ್ ಸಹಯೋಗದಲ್ಲಿ ಕಮಲನಗರ ತಾಲೂಕಿನ ಒಟ್ಟು 10 ಗ್ರಾಮಗಳಲ್ಲಿ 1000 ಮಹಿಳಾ ರೈತರೊಂದಿಗೆ ಸಖಿ ಆಹಾರ ಭದ್ರತಾ ಕೃಷಿ (ಡಬ್ಲ್ಯುಸಿಆರ್‌ಎಫ್) ಮಾದರಿಯಲ್ಲಿ ಕಾರ್ಯನಿರ್ವಹಿಸುತ್ತಿದೆ.

ಎಂದು ಅವರು ವಿವರಿಸಿದರು. ಕೃಷಿಗೆ ಸಂಬಂಧಿಸಿದ ವಿವಿಧ ಯೋಜನೆಗಳ ಬಗ್ಗೆ ಮಾಹಿತಿ ನೀಡಿದರು. ಈ ಕಾರ್ಯಕ್ರಮದಲ್ಲಿ ರಮೇಶ, ಎಸ್‌ಬಿಐ ಬ್ಯಾಂಕ್‌ನ ಜಾಧವ್ , ಮಾರುತಿ ಮಾನೆ ಮತ್ತು ಪ್ರಶಾಂತ ಖಾನಾಪುರೆ, ಯುವರಾಜ , ಸ್ವಯಂ ಶಿಕ್ಷಣ ಪ್ರಯೋಗ ಸಹಕಾರಿ ಸಿಬ್ಬಂದಿ ಅಮರ್ ಪಾಟೀಲ್ ಮತ್ತು 10 ಸಿಆರ್‌ಪಿಗಳು ಸಂಸ್ಕರಣಾ ಪ್ರಕಾರ 10 ಸಾವಯವ ವಸ್ತುಗಳನ್ನು ಪ್ರದರ್ಶಿಸಿದರು. ರೈತ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ಸ್ವಶಿಕ್ಷಣ ಪ್ರಯೋಗ ಸಂಸ್ಥೆಯ ಜಿಲ್ಲಾ ಸಂಯೋಜಕಿ ಪ್ರೀತಿ ಶಿರಸತ ಕಾರ್ಯಕ್ರಮ ಸಂಚಾಲನೆ ಮಾಡಿದರು.

# ಅವೈಜ್ಞಾನಿಕ ಸಮೀಕ್ಷೆಯ ಜಾತಿ ಜನಗಣತಿಯ ವಿರುದ್ಧ ಲಿಂಗಾಯತರ ವಿರೋಧ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಏ.18: ಕಾಂತರಾಜು ನೇತೃತ್ವದಲ್ಲಿ ಹಿಂದುಳಿದ ವರ್ಗಗಳ ಆಯೋಜ ನಡೆಸಿರುವ ಜಾತಿ ಜನಗಣತಿ ಅವೈಜ್ಞಾನಿಕವಾಗಿದ್ದು, ಲಿಂಗಾಯತ ಸಮಾಜ ತೀವ್ರ ವಿರೋಧ ವ್ಯಕ್ತಪಡಿಸುತ್ತದೆ ಎಂದು ಜಾಗತಿಕ ಲಿಂಗಾಯತ ಮಹಾಸಭಾದ ರಾಜ್ಯ ಕಾರ್ಯದರ್ಶಿ ಕಿರಣಕುಮಾರ ಖಂಡ್ರೆ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಗುರುವಾರ ಜಾಗತಿಕ ಲಿಂಗಾಯತ ಮಹಾಸಭಾ ಮತ್ತು ರಾಷ್ಟ್ರೀಯ ಬಸವದಳ, ಕರ್ನಾಟಕ ವಚನ ಸಾಹಿತ್ಯ ಪರಿಷತ್ತು, ಶರಣ ಸಾಹಿತ್ಯ ಪರಿಷತ್ತು, ವೀರಶೈವ ಲಿಂಗಾಯತ ವೇದಿಕೆ ಸೇರಿದಂತೆ ವಿವಿಧ ಲಿಂಗಾಯತ ಸಂಘ-ಟೆಯ ವತಿಯಿಂದ ಕರೆದ ಪತ್ರಿಕಾಗೋಷ್ಠಿಯನ್ನುದ್ದೇಸಿಸಿ ಅವರು ಮಾತನಾಡಿದರು. ರಾಜ್ಯದಲ್ಲಿ ಜಾತಿ ಜನಗಳತಿ ಮಾಡಿದ ಸರ್ಕಾರದ ನೀತಿ ಅವೈಜ್ಞಾನಿಕವಾಗಿದೆ. ರಾಜ್ಯದಲ್ಲಿಯೇ ಅತಿ ಹೆಚ್ಚು ಜನಸಂಖೆ ಹೊಂದಿರುವ ಲಿಂಗಾಯತ ಸಮಾಜವನ್ನು ಅಲ್ಪಸಂಖ್ಯಾತರನ್ನಾಗಿ ಮಾಡಲು ಹೊರಟಿದೆ ಎಂದು ತಮ್ಮ ಆಕ್ರೋಶ ಹೊರಹಾಕಿದರು.

ರಾಷ್ಟ್ರೀಯ ಬಸವದಳದ ಅಧ್ಯಕ್ಷ ಶ್ರೀಕಾಂತ ಭೊರಾಳೆ ಮಾತನಾಡಿ, ಲಿಂಗಾಯತರಲ್ಲಿ ಸುಮಾರು 99 ಒಳ ಪಂಗಡಗಳಿವೆ, ಧರ್ಮದ ಆಧಾರದಲ್ಲಿ ನೋಡಿದಾಗ ರಾಜ್ಯದಲ್ಲಿ ಲಿಂಗಾಯತರೇ ಅತಿ ಹೆಚ್ಚು ಜನಸಂಖೆಯಲ್ಲಿದ್ದಾರೆ. ಆದರೆ ಮುಸ್ಲೀಮರ ತುಷ್ಟಿಕರಣ ರಾಜಕಾರಣ ಮಾಡುವ ನಿಟ್ಟಿನಲ್ಲಿ ಸರ್ಕಾರ ಮುಸ್ಲೀಮರ ಜನಸಂಖೆ ಹೆಚ್ಚಿದೆ ಎಂದು ತೋರಿಸಿರುವುದು ಖಂಡನೀಯವಾಗಿದೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ವಚನ ಸಾಹಿತ್ಯ ಪರಿಷತ್ ಅಧ್ಯಕ್ಷ ಗುಂಡಪ್ಪ ಸಂಗಮಕರ, ರಾಷ್ಟ್ರೀಯ ಬಸವದಳದ ಕಾರ್ಯದರ್ಶಿ ಮಲ್ಲಿಕಾರ್ಜುನ ಡೊಣಗಾಪೂರೆ, ವೀರಶೈವ ಲಿಂಗಾಯತ ವೇದಿಕೆಯ ಮನ್ಮಥ ಸ್ವಾಮಿ, ಶರಣ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಪ್ರೊ। ಶಂಭುಲಿಂಗ ಕಾಮಣ್ಣ ಇದ್ದರು.

ಜಾತಿ ಜನಗಣತಿಯಲ್ಲಿ ಲಿಂಗಾಯತ ಸಮಾಜವನ್ನು ಅಲ್ಪಸಂಖ್ಯಾತ ಎಂದು ಬಿಂಬಿಸುತ್ತಿರುವ ಸರ್ಕಾರ, ಮುಸ್ಲೀಮರಿಗೆ ನೀಡುತ್ತಿರುವ ಅಲ್ಪಸಂಖ್ಯಾತ ಸೌಲಭ್ಯ ಲಿಂಗಾಯತರಿಗೆ ನೀಡಲಿ, ರಾಜ್ಯದಲ್ಲಿ ಬಹುಸಂಖ್ಯಾತರಾಗಿರುವ ಮುಸ್ಲೀಮರ ಸರ್ಕಾರಿ ಸೌಲಭ್ಯಗಳನ್ನು ನಿಲ್ಲಿಸಲಿ.

**-ಕಿರಣಕುಮಾರ ಖಂಡ್ರೆ, ರಾಜ್ಯ ಕಾರ್ಯದರ್ಶಿಗಳು, ಜಾಗತಿಕಲಿಂಗಾಯತಮಹಾಸಭೆ ಬೆಂಗಳೂರು.**

# 24 ಗಂಟೆಯೊಳಗೆ ವರದಿ ಸಲ್ಲಿಸಲು ಸಚಿವರು ಸೂಚನೆ


ಮಲ್ಲಮ್ಮ ನುಡಿ ವಾರ್ತೆ

ಬೀದರ :ಏ.18: ಬೀದರ ನಗರದ ಚೌಬಾರ ನಿವಾಸಿ ಸುಚಿವ್ರತ್ ಅವರು ಕೆ.ಸಿ.ಇಟಿ ಗಣಿತ ವಿಷಯದ ಪರೀ-ಕ್ಷೆ ಬರೆಯಲು ಗುಂಪಾ ಸಮೀಪದ ಸಾಯಿ ಸ್ಫೂರ್ತಿ ಕಾಲೇಜು ಪರೀಕ್ಷಾ ಕೇಂದ್ರ-ಕ್ಕೆ ಹೋಗಿದ್ದಾಗ, ಜನಿವಾರ ತೆಗೆದಿಡದ ಹೊರತು ಪರೀಕ್ಷಾ ಕೊಠಡಿಗೆ ಬಿಡುವುದಿಲ್ಲ ಎಂದು ಸಿಬ್ಬಂದಿ ತಡೆ ಒಡ್ಡಿದ್ದು, ಆ ವಿದ್ಯಾರ್ಥಿ ಪರೀಕ್ಷೆ ಬರೆ-ಯದೆ ಮನನೊಂದು ಮನೆಗೆ ತೆರಳಿದ್ದಾನೆ. ಆ ವಿದ್ಯಾರ್ಥಿಯ ಶೈಕ್ಷಣಿಕ ಭವಿಷ್ಯವೇ ನಾಶವಾಗಿದೆ ಎಂದು ಮಾಧ್ಯಮಗಳಲ್ಲಿ ವರದಿಯಾಗಿದ್ದು ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಿದೆ. ಈ ಕೂಡಲೇ ಘಟನೆಯ ಕುರಿತಂತೆ ಉಪವಿಭಾಗಾಧಿಕಾರಿ ದರ್ಜೆಯ ಅಧಿಕಾರಿಯಿಂದ ತನಿಖೆ ನಡೆಸಿ ನಿಯಮಾನುಸಾರ ಶಿಸ್ತು ಕ್ರಮವಹಿಸಲು ಮತ್ತು 24 ಗಂಟೆಗಳ ಒಳಗಾಗಿ ವರದಿ ಸಲ್ಲಿಸಲು ಅರಣ್ಯ, ಜೀವಿಶಾತ್ರ ಮತ್ತು ಪರಿಸರ ಸಚಿವರು ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರು ಜಿಲ್ಲಾಧಿಕಾರಿಗಳಿಗೆ ಸೂಚಸಿದ್ದಾರೆ.



ಬಾಗಲಕೋಟೆ ಜಿಲ್ಲೆಯ ಹುನಗುಂದ ತಾಲೂಕಿನ ಸುಕ್ಷೇತ್ರ ಕೂಡಲಸಂಗಮದ ಸಂಗಮೇಶ್ವರ ದೇವರ ರಥೋತ್ಸವ ಶುಕ್ರವಾರ ವೈಭವದಿಂದ ಜರುಗಿತು. ಅಪಾರ ಸಂಖ್ಯೆಯ ಭಕ್ತರು ಪಾಲ್ಗೊಂಡಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಹಿರಿಯರ ಹೆಸರಿನ ಮಹಾಪೂಜೆ ಮತ್ತು ಸತ್ಸಂಗ ಸಮಾರಂಭ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಚಿಂಚೋಳಿ ತಾಲೂಕಿನ ಗಡಿ ನಿಂಗದಳಿ ಥಾಂಡಾದಲ್ಲಿ ಹಿರಿಯ ಹೆಸರಿನಲ್ಲಿ ಮಹಾ ಪೂಜೆ ಮತ್ತು ಸತ್ಸಂಗ ಸಮಾರಂಭವು ಮುಗಳನಾಗಾಂವ ಪುಣ್ಯ ಆಶ್ರಮದ ಜೇಮಸಿಂಗ್ ಮಹಾರಾಜರ ದಿವ್ಯ ಸಾನಿಧ್ಯದಲ್ಲಿ ಈ ಕಾರ್ಯಕ್ರಮ ಜರುಗುವುದು. ಐನಾಪುರದ ಮಲ್ಲಯ್ಯಾ ಶಾಸ್ತ್ರಿ ಶಿವರಾಮ ನಾಯಕ ಥಾಂಡಾದ ಸಾಧ್ವಿ ಮಾತೆ ರಾಮದೇವಿ ಇವರ ಉಪಸ್ಥಿತಿಯಲ್ಲಿ ಕಾರ್ಯಕ್ರಮ ಜರುಗುವುದು. ಮುಖ್ಯಥಿತಿಗಳಾಗಿ ಲೋಕಸಭಾ ಮಾಜಿ ಸದಸ್ಯ ಡಾ. ಉಮೇಶ್ ಜಾಧವ್, ಚಿಂಚೋಳಿ ಶಾಸಕ ಡಾ. ಅವಿನಾಶ ಜಾಧವ್, ಅತಿಥಿಗಳಾಗಿ ಶೈಲೇಂದ್ರ ಕಾವಡಿ ಅಧ್ಯಕ್ಷರು ಪರಿಸರವಾಹಿನಿ ಬೀದರ್, ಲಮಾಣಿ ಸಮಾಜದ ಜಿಲ್ಲಾಧ್ಯಕ್ಷ ಬಿ.ಬಿ. ನಾಯಕ, ಕಲಬುರ್ಗಿ ಹಾಲು ಒಕ್ಕೂಟ ನಿರ್ದೇಶಕ ಅಶೋಕ ಪಡಶೆಟ್ಟಿ, ಥಾಂಡಾ ಅಭಿವೃದ್ಧಿ ನಿಗಮದ ರಾಜ್ಯ ಮಾಜಿ ನಿರ್ದೇಶಕ ಮನೋಹರ್ ಪವಾರ್, ಬಿಸಿಎಂ ತಾಲೂಕ ಕಲ್ಯಾಣಾಧಿಕಾರಿ ರಮೇಶ್ ರಾಠೋಡ, ಗ್ರಾಮ ಪಂಚಾಯತ್ ಅಧ್ಯಕ್ಷೆ ಮೀನಾಕ್ಷಿ ರಾಠೋಡ, ಸುಭಾಷ್ ಚವ್ಹಾಣ ಬಂಜಾರ ಸಂದೇಶ್ ಟಿವಿ ಬೆಂಗಳೂರು. ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಯಶಸ್ವಿಗೊಳಿಸಬೇಕೆಂದು ಗೋಪಾಲ ಸಿಂಗ್ ರಾಠೋಡ ಮನವಿ ಮಾಡಿದ್ದಾರೆ.

# ಬೆಲೆ ಏರಿಕೆ ಖಂಡಿಸಿ ಕೇಂದ್ರ ಸರ್ಕಾರ ವಿರುದ್ಧ ಯುವ ಕಾಂಗ್ರೆಸ್ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಔರಾದ್:ಏ.18: ಅಗತ್ಯವಸ್ತುಗಳ ಬೆಲೆ ಏರಿಕೆ ಮಾಡಿರುವ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರದ ವಿರುದ್ಧ ಬ್ಲಾಕ್ ಯುವ ಕಾಂಗ್ರೆಸ್ ಸಮಿತಿ ಪದಾಧಿಕಾರಿಗಳು ಬುಧುವಾರ ಪ್ರತಿಭಟನೆ ನಡೆಸಿದರು.

ಪಟ್ಟಣ ಕನ್ನಡಾಂಬೆ ವೃತ್ತದ ಬಳಿಯಲ್ಲಿ ಜಮಾಯಿಸಿದ ಕಾಂಗ್ರೆಸ್ ಕಾರ್ಯಕರ್ತರು ಮುಖ್ಯರಸ್ತೆಯಲ್ಲಿ ಮೆರವಣಿಗೆ ನಡೆಸಿದರು. ಮೆರವಣಿಗೆಯುದ್ದಕ್ಕೂ ಕೇಂದ್ರ ಸರ್ಕಾರಕ್ಕೆ ಧಿಕ್ಕಾರ ಕೂಗಿದರು. ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡಿ, ಜನಸಾಮಾನ್ಯರ ಮೇಲೆ ಗದಾಪ್ರಹಾರ ನಡೆಸುತ್ತಿರುವ ಬಿಜೆಪಿ ಸರ್ಕಾರವನ್ನು ವಜಾಗೊಳಿಸಬೇಕು. ಕೇಂದ್ರ ಸರ್ಕಾರದ ಜನವಿರೋಧಿ ನೀತಿಯನ್ನು ಔರಾದ್ ಯುವ ಕಾಂಗ್ರೆಸ್ ಖಂಡಿಸುತ್ತದೆ. ಬಿಜೆಪಿ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದ ದಿನದಿಂದಲೂ ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡುತ್ತಾ, ಜನಸಮಾನ್ಯರ ಮೇಲೆ ಅಧಿಕ ತೆರಿಗೆ ಹೊರೆ ಹೊರಿಸುತ್ತಿದೆ. ಇದರಿಂದಾಗಿ ಜನರು ಜೀವನ ದಿನದಿಂದ ದಿನಕ್ಕೆ ದುಸ್ತರವಾಗುತ್ತಿದೆ ಕೇಂದ್ರ ಸರ್ಕಾರದ ವಿರುದ್ಧ ಕಿಡಿಕಾರಿದರು.

ಯುವ ಕಾಂಗ್ರೆಸ್ ತಾಲೂಕು ಅಧ್ಯಕ್ಷ ಅನಿಲ ಬೇಲೂರೆ ಮಾತನಾಡಿ, ಪೆಟ್ರೋಲ್, ಡೀಸೆಲ್ ಮೇಲೆ ಲೀಟರ್‌ಗೆ ರೂ. 2 ಅಬಕಾರಿ ಶುಲ್ಕ ಹೆಚ್ಚಿಸಿದೆ. ಎಲ್‌ಪಿಜಿ ಗ್ಯಾಸ್ ಸಿಲಿಂಡರ್ ಬೆಲೆಯನ್ನು ರೂ. 50 ಹೆಚ್ಚಿಸಿದೆ. ಸಿಎನ್‌ಜಿ ದರವನ್ನು ಪ್ರತಿ ಕೆ.ಜಿಗೆ ರೂ. 1 ಹೆಚ್ಚಿಸಿದೆ. ಬಿಜೆಪಿ ಉದ್ಯೋಗ ಸೃಷ್ಟಿ ಮಾಡುವುದಾಗಲೀ, ಜನಸಾಮಾನ್ಯರ ಜೀವನ ಸರಳಗೊಳಿಸುವ ಕೆಲಸವನ್ನಾಗಲೀ ಮಾಡುತ್ತಿಲ್ಲ. ಬದಲಿಗೆ ಜನರಿಂದ ಮಿತಿಮೀರಿ ತೆರಿಗೆ ವಸೂಲು ಮಾಡುವ ಮೂಲಕ ಜನರನ್ನು ಸುಲಿಗೆ ಮಾಡಲು ಹೊರಟಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬೀದರ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಫರೀದ್ ಉಲ್ಲಾ ಖಾನ್ ಮಾತನಾಡಿ, ಕೇಂದ್ರ ಸರಕಾರ ಬಡವರ ಬದುಕಿನ ಮೇಲೆ ಚೆಲ್ಲಾಟವಾಡುತ್ತಿದೆ' ಎಂದು ಆಕ್ರೋಶ ವ್ಯಕ್ತಪಡಿಸಿದರು. ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಪಂಚಗ್ಯಾಂರಟಿಗಳು ಜಾರಿಗೆತರುವ ಮೂಲಕ ಬಡವರ ಬದುಕಿಗೆ ಬೆಳಕಾಗಿದ್ದಾರೆ. ಆದರೆ ಇದನ್ನು ಸಹಿಸದ ಬಿಜೆಪಿ ಇಲ್ಲ ಸಲ್ಲದ ಸುಳ್ಳು ಆರೋಪಗಳು ಮಾಡುತ್ತಿದೆ ಎಂದು ದೂರಿದರು. ರಾಷ್ಟ್ರಪತಿಗೆ ಅವರಿಗೆ ಬರೆದ ಮನವಿಪತ್ರವನ್ನು ತಹಶೀಲ್ದಾರ್ ಮಹೇಶ ಪಾಟೀಲ್ ಅವರಿಗೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಪ್ರಮುಖರಾದ ರಾಜ್ಯ ಯುವ ಕಾಂಗ್ರೆಸ್ ಕಾರ್ಯದರ್ಶಿ ಅಲಿಷಾನ್ ಖಾದ್ರಿ, ಮಾಜಿ ಯುವ ಕಾಂಗ್ರೆಸ್ ಅಧ್ಯಕ್ಷ ದತ್ತಾತ್ರಿ ಬಾಪೂರೆ, ಬ್ಲಾಕ್ ಯುವ ಕಾಂಗ್ರೆಸ್ ಅಧ್ಯಕ್ಷ ಹರಿದೇವ ಸಂಗನಾಳ, ಬ್ಲಾಕ್ ನಗರ ಯುವ ಕಾಂಗ್ರೆಸ್ ಅಧ್ಯಕ್ಷ ರಮೇಶ್ ಚೌವ್ಹಾಣ್, ಎನ್ ಎಸ್ ಯುಐ ಅಧ್ಯಕ್ಷ ಚಂದು ಡಿಕೆ, ಶಂಕು ನಿಸ್ಪತೆ, ವಿವೇಕ ನಿರ್ಮಳೆ, ಸತೀಶ್ ಪುಲಾರಿ, ಅನೀಲ ನಿರ್ಮಳೆ, ರತ್ನದೀಪ ಕಸ್ತೂರೆ, ರಾಜು ಮುದಾಳೆ, ಪಪ್ಪು ದೇವಕತ್ತೆ, ಸಂದೀಪ ಮಾನೆ, ಮಹದೇವ ಠಾಕೂರ್, ಇರ್ಷಾದ್, ವಿಶಾಲ್ ಸೇಳಕೆ, ಮಹೇಶ ಸ್ವಾಮಿ, ಸಂತೋಷ ಚೌವ್ಹಾಣ, ರಜನೀಕಾಂತ ದಾಮ, ವಿಶಾಲ ಕೋಳಿ, ಶಿವು ಹಳೆಂಬುರೆ ಸೇರಿದಂತೆ ಅನೇಕರಿದ್ದರು.

# ಆರೋಗ್ಯ ಶಿಕ್ಷಣ ಮಾಹಿತಿ ಹಾಗೂ ಉಚಿತ ಆರೋಗ್ಯ ತಪಾಸಣೆ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ ಏ.18-ಅಂತಾರಾಷ್ಟ್ರೀಯ ಲೈಂಗಿಕ ಅಲ್ಪಸಂಖ್ಯಾತರ ಲಿಂಗ ದಿನಾಚರಣೆ ಅಂಗವಾಗಿ ಭಾರತೀಯ ಕುಟುಂಬ ಯೋಜನೆ, ಬಳ್ಳಾ-ರಿಯ ಯು ಇನ್ನರ್ ವೀಲ್ ಇವರ ಜೊತೆಗೂಡಿ ಆರೋಗ್ಯ ಶಿಕ್ಷಣ ಮಾಹಿತಿ ಹಾಗೂ ಉಚಿತ ಆರೋಗ್ಯ ತಪಾಸಣೆಯನ್ನು ಎಪ್ರಿಲ್ 16 2025 ರಂದು ಏರ್ಪಡಿಸಲಾಗಿತ್ತು

ಕಾರ್ಯಕ್ರಮದಲ್ಲಿ ಎಫ್.ಪಿ.ಎ.ಐ ಶಾಖಾವ್ಯವಸ್ಥಾಪಕಿ ಎಸ್ ವಿಜಯಲಕ್ಷ್ಮಿ ಮಾತನಾಡುತ್ತಾ, ನೀವು ಯಾವುದೇ ಕೀಳ ಸಮುದಾಯದವರಲ್ಲ ನಮ್ಮೆಲ್ಲರಂತೆ ನೀವು ಸಮಾನ ಬದುಕುವ ಹಕ್ಕು ಉಳ್ಳವರು ನಿಮಗೆಲ್ಲರಿಗೂ ಉತ್ತಮ ಭವಿಷ್ಯವಿದೆ ಸಮಾಜದಲ್ಲಿ ನಿಮಗೆ ಒಂದು ಒಳ್ಳೆ ನೆಲೆಯನ್ನು ಕೊಡಿಸುವ ಹೋರಾಟಕ್ಕೆ ಎಫ್.ಪಿ.ಎ.ಐ ಬೆಂಬಲ ಯಾವಾಗಲೂ ಇರುತ್ತೆ ಎಂದು ಹೇಳಿದರು.

ಮುಂದುವರೆದು ಇನ್ನರ್ ವೀಲ್ ಅರ್ಚನಾ ಅವರು ಮಾತನಾಡುತ್ತಾ ನೀವೆಲ್ಲ ದಯವಿಟ್ಟು ಶಿಕ್ಷಣ ಪಡೆದುಕೊಳ್ಳಿ ನಿಮ್ಮ ಹಕ್ಕುಮತ್ತು ಜವಾಬ್ದಾರಿಗಳನ್ನು ತಿಳಿದುಕೊಳ್ಳಿ ನಿಮ್ಮಲ್ಲಿ ಉತ್ತಮ ಶಿಕ್ಷಣವಿದ್ದರೆ ನಿಮ್ಮನ್ನ ತಡೆಯೋರು ಯಾರೂ ಇಲ್ಲ ಆದ್ದರಿಂದ ಸರಿಯಾಗಿ ಶಿಕ್ಷಣ ಪಡೆದು ಒಳ್ಳೆ ದಾರಿಯಲ್ಲಿ ನಡೆದು ಉತ್ತಮ ಸಾಧನೆ ಮಾಡಿ ಭವಿಷ್ಯದ ಜನಾಂಗಕ್ಕೆ ಮಾದರಿಯಾಗಿ ಎಂದು ಹೇಳಿದರು.

ನಂತರ ಮಾತನಾಡಿದ ಡಾ॥ ಸಂಗೀತ ಸಮಾಜದಲ್ಲಿ ಎಷ್ಟೋ ವರ್ಷಗಳಿಂದ ಶೋಷಣೆಗೆ ಒಳಗಾಗಿದ್ದೀರಿ ಹಲವಾರು ಹೋರಾಟ ಮತ್ತು ಸಂಘಟನೆಗಳಿಂದ ನಿಮ್ಮ ಬದುಕಿಗೆ ಅಸ್ತಿತ್ವ ಬಂದಿದೆ ಸರ್ಕಾರ ಕೂಡ ನಿಮ್ಮ ಏಳ್ಗೆಗೆ ಹಲವರು ಅಭಿವೃದ್ಧಿ ಯೋಜನೆಗಳನ್ನು ತಂದಿದೆ ಅದರ ಸದುಪಯೋಗ ಪಡೆದುಕೊಂಡು ಉತ್ತಮ ಜೀವನ ರೂಪಿಸಿಕೊಳ್ಳಿ ಎಂದು ಹೇಳಿದರು.

ತದನಂತರ ಡಾ॥ ಪ್ರಣೀತಾ ಅಜಯ್ ಅವರು ಆರೋಗ್ಯದ ಕಾಳಜಿಯ ಬಗ್ಗೆ ,ತಿಳಿಸುತ್ತಾ ಅಸುರಕ್ಷಿತ ಲೈಂಗಿಕ ಸಂಪರ್ಕ ಮತ್ತು ಕೆಟ್ಟ ವ್ಯಸನ ಗಳಿಂದ ಆರೋಗ್ಯ ಅಡಗೆಡುತ್ತೆ ಆದ್ದ-ರಿಂದ ಆರೋಗ್ಯದ ಕ್ರಮಗಳನ್ನು ಪಾಲಿಸಿ ಆರೋಗ್ಯವಾಗಿರಿ ಮತ್ತು ಲೈಂಗಿಕ ಸಂಪರ್ಕದಿಂದ ಹರಡುವ ರೋಗಗಳಿಂದ ಕ್ಯಾನ್ಸರ್ ಸಂಭವಿಸುವ ಸಾಧ್ಯತೆಗಳು ಹೆಚ್ಚು ಆದ್ದರಿಂದ ಜವಾಬ್ದಾರಿ ವಹಿಸಿ ಆರೋಗ್ಯ ಕಾಪಾಡಿಕೊಳ್ಳಿ ಎಂದು ಹೇಳಿದರು.

ಕಾರ್ಯಕ್ರಮದ ನಂತರ ನೆರೆದಂತ 70 ಜನ ಲೈಂಗಿಕ ಅಲ್ಪ ಸಂಖ್ಯಾತರಿಗೆ ಲೈಂಗಿಕ ಮಾರ್ಗದಿಂದ ಹರಡುವ ರೋಗಗಳ ಉಚಿತ ರಕ್ತ ಪರೀಕ್ಷೆ ಮಾಡಲಾಯಿತು .

ಇನ್ನರ್ ವೀಲ್ ಅರ್ಚನಾ, ಭಾರತೀಯ ವೈದ್ಯಕೀಯ ಸಂಘದ ಅಧ್ಯಕ್ಷರಾದ ಡಾ॥. ಮಾಣಿಕ್ ರಾವ್, ಕಾರ್ಯದರ್ಶಿ ಪ್ರಣೀತಾ ಅಜಯ್ ಮತ್ತು ಮೇರಿ ಚರ್ಚಿನ ಪಾಸ್ಟರ್, ಮುಲ್ಲ ಅಜಾದಿ ಮತ್ತಿತರರು ಉಪಸ್ಥಿತರಿದ್ದರು.

# ರೈತರ ಜಮೀನುಗಳ ತೆರವು ಕಾರ್ಯಕ್ಕೆ ರೈತರ ಆಗ್ರಹ



ಕೋಲಾರ,ಏ,18- ಸಕಲ ದಾಖಲೆಗಳೊಂದಿಗೆ ದಶಕಗಳಿಂದ ರೈತರು ಉಳುಮೆ ಮಾಡಿ ಬೆಳೆ, ಗಿಡಮರಗಳನ್ನು ಬೆಳೆಸಿಕೊಂಡು ಜೀವನ ನಡೆಸುತ್ತಿದ್ದು, ಭೂಮಿಯನ್ನು ಏಕಾಏಕಿ ಅರಣ್ಯ ಇಲಾಖೆ ದೌರ್ಜನ್ಯದಿಂದ ತೆರವುಗೊಳಿಸಿದ್ದು, ಸರ್ಕಾರವೇ ರೈತರ ಜಮೀನಿಗೆ ನೀಡಿರುವ ದಾಖಲೆಗಳಿಗೆ ಬೆಲೆ ಇಲ್ಲದಂತಾಗಿದೆ ಎಂದು ಜಮೀನು ಕಳೆದುಕೊಂಡಿರುವ ನೊಂದ ರೈತ ಆರ್.ಶ್ರೀನಿವಾಸನ್ ಅಳಲು ತೊಡಿಕೊಂಡಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಸರ್ಕಾರಿ ಗೋಮಾಳ ಕಂದಾಯ ಇಲಾಖೆಯದು ನೂರಾರು ವರ್ಷಗಳಿಂದ ಅನುಭವದಲ್ಲಿ ಸಣ್ಣ ರೈತರು ಆ ಭೂಮಿಗಳನ್ನು ಸಮತಟ್ಟು ಮಾಡಿ ಬೆಳೆ ಬೆಳೆದು ತಮ್ಮ ಜೀವನೋಪಾಯವನ್ನು ಮಾಡಿಕೊಂಡು ಬಂದಿದ್ದಾರೆ.

ಈ ಹಿಂದೆ ಮಹಾರಾಜರು ಆ ಗ್ರಾಮಗಳಲ್ಲಿರುವ ಪಟೇಲರು ಶಾನುಭೋಗರ ನೇತೃತ್ವದಲ್ಲಿ ಸಂಬಂಧಿಸಿದ ದಾಖಲೆಗಳನ್ನು ನೀಡಿದ್ದಾರೆ ಮುಂದೆ ರೆವಿನ್ಯೂ ಇಲಾಖೆಯವರು ಸಹ ಸಂಬಂಧಿಸಿದ ಪಹಣಿ ಮುಟೇಶನ್ ಸರ್ವೆ ಸ್ಕೆಚ್ ಆಕಾರ ಬಂಧು ಮುಂತಾದ ದಾಖಲೆಗಳನ್ನು ನೀಡಿದ್ದಾ-ರೆ ಅದರಂತೆ ಸಣ್ಣ ರೈತರು ಇಂದು ನೀರಾವರಿಯನ್ನು ಸಹ ಅಭಿವೃದ್ಧಿಪಡಿಸಿಕೊಂಡು ಬ್ಯಾಂಕುಗಳಲ್ಲಿ ಸಾಲ ಪಡೆದು ರಾಗಿ ಜೋಳ ಬೆಳೆಯುವ ಬದಲು ತರಕಾರಿಗಳನ್ನು ಬೆಳೆದಿದ್ದಾರೆ, ಕೆಲವರು ಮಾವು, ತೆಂಗು ಮರಗಳನ್ನು ಬೆಳೆಸಿದ್ದಾರೆ.

ರೈತರು ಸಾಲಾ ಮಾಡಿ ಅತಿ ಹೆಚ್ಚು ಬಡ್ಡಿಯನ್ನು ಭರಿಸಿ ಬೆಳೆಯನ್ನು ಬೆಳೆದು ಸರಿಯಾದ ಬೆಲೆ ಸಿಗದಿದ್ದಾಗ ನೊಂದು ಪುನಃ ಬೆಳೆಗಳನ್ನು ಬೆಳೆಯುತ್ತಿರುವ ಸಂದರ್ಭದಲ್ಲಿ ಅರಣ್ಯ ಇಲಾಖೆಯವರು ಏಕಾಏಕಿ ಯಾವುದೇ ಮುನ್ಸೂಚನೆ ನೀಡದೆ ಅವರ ಜಮೀನುಗಳ ಮೇಲೆ ಅತಿಕ್ರಮಣ ಪ್ರವೇಶ ದೌರ್ಜನ್ಯ ನಡೆಸಿ ಅಧಿಕಾರ ದುರುಪಯೋಗಪಡಿಸಿಕೊಂಡು ರೈತರು ಬೆಳೆದ ಬೆಳೆಗಳನ್ನು ನಾಶಪಡಿಸುತ್ತಿರುವುದು ಎಷ್ಟು ಸರಿ ಎಂದು ಪ್ರಶ್ನಿಸಿದ್ದಾರೆ.

ನೊಂದ ರೈತರಿಗೆ ಇದು ಸರ್ಕಾರ ನೀಡುತ್ತಿರುವ ಕೊಡುಗೆಯೇ ಎಂಬುದು ಪ್ರತಿಯೊಬ್ಬ ಬಡ ರೈತನ ಅಳಲಾಗಿದೆ ಇವರು ರಾತ್ರಿ ಹಗಲೆನ್ನದೇ ಜಮೀನುಗಳನ್ನು ಈ ರೀತಿ ಸರ್ವನಾಶ ಮಾಡುವುದು ಸರಿಯೇ ಅರಣ್ಯ ಇಲಾಖೆಗೆ ನೀಡಿರುವ ಜಮೀನುಗಳ ಸರ್ವೆ ನಂಬರ್ ಪ್ರಕಾರ ಶಿಳ್ಳೆಂಗೆರೆ ಹರಟಿ ಮಲ್ಲಂಡಳ್ಳಿ ಕೋಟಿಗಾನಹಳ್ಳಿ ಅಬ್ಬಿಣಿಯಲ್ಲಿ ಮಹಾರಾಜರು ಅರಣ್ಯ ಇಲಾಖೆಗೆ ನೀಡಿರುವ ಜಮೀನುಗಳ ದಾಖಲೆಗಳ ಸಮೇತ ರುಜುವತು ಮಾಡದೆ ರೈತರಿಗೆ ತೋರಿಸದೆ ಗುಪ್ತವಾಗಿ ಈ ರೀತಿ ಮಾಡುವುದು ಎಷ್ಟು ಸರಿ ಎಂದು ತಿಳಿಸಿದ್ದಾರೆ.

ಎಷ್ಟು ಜನರ ನೋವು ಎಷ್ಟು ಗಿಡಗಳ ಸರ್ವನಾಶದ ಶಾಪ ನಿಮಗೆ ತಟ್ಟೆತಟ್ಟುತ್ತೆ ಏಕೆಂದರೆ ನಾಶ ಮಾಡುವುದು ಸುಲಭ ಪ್ರಾಣ ತೆಗೆಯುವುದು ಸುಲಭ ಆದರೆ ಬೆಳೆಸುವುದು ಅದಕ್ಕೆ ಪ್ರಾಣ ಕೊಡುವುದು ಎಷ್ಟು ಕಷ್ಟ ಎಂಬುದು ಕೆಲವರಿಗೆ ಮಾತ್ರ ಗೊತ್ತು ಎಂದು ಕಿಡಿಕಾರಿದ್ದಾರೆ.

ಈ ಸಂದರ್ಭದಲ್ಲಿ ಜನಪ್ರತಿನಿಧಿಗಳು ಕಂದಾಯ ಅಧಿಕಾರಿಗಳು ರಕ್ಷಣಾಧಿಕಾರಿಗಳು ಇದಕ್ಕೆ ಸಮಯ ವ್ಯರ್ಥ ಮಾಡದೆ ಶಿಳೆಂಗೆರೆ ಹರಟಿ ಮಲ್ಲಂಡಳ್ಳಿ, ಕೋಟಿಗಾನಹಳ್ಳಿ, ಅಬ್ಬಿಣಿಯಲ್ಲಿ ಸರ್ಕಾರಿ ಗೋಮಾಳ ಜಮೀನು ಮಹಾರಾಜರು ರೈತರಿಗೆ ಕೊಟ್ಟ ಜಮೀನು ಎಷ್ಟು? ಅರಣ್ಯ ಇಲಾಖೆಯವರಿಗೆ ಕೊಟ್ಟ ಜಮೀನು ಎಷ್ಟು ಎಂಬುದರ ಕುರಿತಾದ ದಾಖಲೆಗಳ ಪರಿಶೀಲನೆ ಮಾಡಿ ರೈತರಿಗೆ ನ್ಯಾಯ ಒದಗಿಸಬೇಕು.

ಎಲ್ಲಾ ದಾಖಲೆಗಳಿರುವ ರೈತರ ಜಮೀನುಗಳ ಮೇಲೆ ಅರಣ್ಯ ಇಲಾಖೆ ಅಧಿಕಾರಿಗಳು ಪೋಲಿಸ್ ರಕ್ಷಣೆಯೊಂದಿಗೆ ಯುದ್ಧ ಮಾಡುವ ರೀತಿಯಲ್ಲಿ ಜೆಸಿಬಿಗಳನ್ನು ತಂದು ಜಮೀನುಗಳ ಮೇಲೆ ಅತಿಕ್ರಮಣ ಮಾಡಿದ್ದಾರೆ, ರೈತರಿಗೆ ಅನ್ಯಾಯ ಎಸಗಿದವರ ಮೇಲೆ ಜಿಲ್ಲಾಧಿಕಾರಿಗಳು ಜಿಲ್ಲಾ ರಕ್ಷಣಾಧಿಕಾರಿಗಳು ಉಸ್ತುವಾರಿ ಸಚಿವರು ಈ ಭಾಗದ ಶಾಸಕರುಗಳು ಈ ತಕ್ಷಣ ಅವರ ದಾಖಲೆಗಳನ್ನು ಪರಿಶೀಲಿಸಿ ಕೇಸು ದಾಖಲಿಸಬೇಕು, ಬಡ ರೈತರಿಗೆ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದವರಿಗೆ ನ್ಯಾಯ ಒದಗಿಸಬೇಕು, ಬಡ ರೈತರಿಗೆ ಅನ್ಯಾಯ ಮಾಡಿದವರಿಗೆ ದೇವರೇ ಶಿಕ್ಷೆ ನೀಡುತ್ತಾನೆ ಎಂದು ಶ್ರೀನಿವಾಸನ್ ದುಃಖ ವ್ಯಕ್ತಪಡಿಸಿದ್ದಾರೆ.

# ರಂಗಭೂಮಿಗೆ ಸಮಾಜ ಬದಲಿಸುವ ಶಕ್ತಿ ಇದೆ



ಮಲ್ಲಮ್ಮ ನುಡಿ ವಾರ್ತೆ

ಧಾರವಾಡ,ಏ18: ರಂಗಭೂಮಿಗೆ ಸಮಾಜ ಬದಲಿಸುವ ದೊಡ್ಡ ಶಕ್ತಿ ಇದೆ. ವಿದ್ಯಾರ್ಥಿಗಳಲ್ಲಿ ಒಳ್ಳೆಯ ಜೀವನ ಮೌಲ್ಯ ಕಲ್ಪಿಸುವ ಪ್ರಬಲ ಮಾಧ್ಯಮವಾಗಿದೆ ಎಂದು ಮಾಜಿ ಸಚಿವರಾದ ಪಿ.ಸಿ.ಸಿದ್ದನಗೌಡರ ಅಭಿಪ್ರಾಯಪಟ್ಟರು.

ಅವರು ಕರ್ನಾಟಕ ವಿದ್ಯಾವರ್ಧಕ ಸಂಘದ ಶಿಕ್ಷಣ ಮಂಟಪವು ಆಯೋಜಿಸಿದ್ದ ನೂಲ್ವಿಯ ಜಗದ್ಗುರು ರೇಣುಕಾಚಾರ್ಯ ಶಿಕ್ಷಣ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ 'ಶಿಕ್ಷಣದಲ್ಲಿ ರಂಗಭೂಮಿ ಮಹತ್ವ' ಕುರಿತು ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮುಂದುವರೆದು ಮಾತನಾಡಿದ ಅವರು, ರಂಗಭೂಮಿಯಲ್ಲಿ ಜೀವಂತ ಕಲೆ ಇದೆ. ಶಾಲೆಯಲ್ಲಿ ಏರ್ಪಡಿಸುವ ಎಲ್ಲಾ ಸಹಪಠ್ಯ ಚಟುವಟಿಕೆಯಲ್ಲಿ ವಿದ್ಯಾರ್ಥಿಗಳು ಭಾಗವಹಿಸಬೇಕು. ಅಂದಾಗ ನಿಮ್ಮಲ್ಲಿ ನಾಯಕತ್ವದ ಗುಣ ಬೆಳೆದು ವಿದ್ಯಾಸಂಪನ್ನರಾಗಲು ಸಾಧ್ಯ. ದೇಶದ ಉಜ್ವಲ ಭವಿಷ್ಯದ ನಿರ್ಮಾತೃಗಳೆ ಶಿಕ್ಷಕರು ಎಂದು ಹೇಳಿದರು. ಅತಿಥಿ ಉಪನ್ಯಾಸಕ, ಜೀವಿ ಕಲಾಬಳಗದ ಅಧ್ಯಕ್ಷ ರಂಗಕಲಾವಿದ ಗದಿಗಯ್ಯ ಹಿರೇಮಠ ಉಪನ್ಯಾಸ ನೀಡಿ, ನಾಟಕಗಳಲ್ಲಿ ಭಾವನೆ ಪ್ರಧಾನ ಅಂಶ. ವಿದ್ಯಾರ್ಥಿಗಳಲ್ಲಿ ಅಡಗಿರುವ ಸೂಕ್ತ ಪ್ರತಿಭೆಅನಾವರಣಕ್ಕೆ ರಂಗಭೂಮಿಯೇ ಮೂಲವೇದಿಕೆ. ಕಲೆ ಕೇವಲ ಮನರಂಜನೆಗೆ ಮಾತ್ರವಲ್ಲ, ನಮ್ಮ ಬದುಕನ್ನು ತಿದ್ದಿ, ಸಂಸ್ಕಾರಗೊಳಿಸಿ ಆತ್ಮವಿಶ್ವಾಸ ಹಾಗೂ ಸಕಾರಾತ್ಮಕ ಚಿಂತನೆಗಳನ್ನು ರಂಗಭೂಮಿ ಕಲಿಸುತ್ತದೆ ಎಂದು ಅಭಿಪ್ರಾಯಪಟ್ಟರು. ಕರ್ನಾಟಕ ವಿದ್ಯಾವರ್ಧಕ ಸಂಘದ ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ ಮಾತನಾಡಿ, ಶಿಕ್ಷಕರಿಗೆ ಸಮಾಜದಲ್ಲಿ ಒಳ್ಳೆಯ ಗೌರವ ಸ್ಥಾನವಿದೆ. ನಿಮ್ಮ ವೃತ್ತಿಯ ಪಾವಿತ್ರತೆಯನ್ನು ಉಳಿಸಿಕೊಳ್ಳುವುದು ಅಗತ್ಯವಾಗಿದೆ. ಶಿಕ್ಷಕರು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ಕರ್ತವ್ಯದಿಂದ ವಿಮುಖರಾದರೆ ಸಮಸಮಾಜ ನಿರ್ಮಿಸಲು ಅಸಾಧ್ಯ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಹುಬ್ಬಳ್ಳಿಯ ಕನಕದಾಸ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷ ಶಾಂತಣ್ಣ ಕಡಿವಾಲ, ವ್ಹಿ.ಜಿ.ಪಾಟೀಲ, ಜಾನಪದ ವಿದ್ವಾಂಸರಾದ ಡಾ. ರಾಮು ಮೂಲಗಿ, ಬಸವರಾಜ ಶೆಲ್ಲಿಕೇರಿ ಇದ್ದು ಮಾತನಾಡಿದರು.

ಪ್ರಾಚಾರ್ಯ ಎ.ಬಿ.ಬಂಡಿವಾಡ ಸ್ವಾಗತಿಸಿದರು. ಕ.ವಿ.ವ. ಸಂಘದ ಶಿಕ್ಷಣ ಮಂಟಪದ ಸಂಚಾಲಕ ವೀರಣ್ಣ ಒಡ್ಡೀನ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾವ್ಯಾ ಬೇಗೂರ ನಿರ್ವಹಿಸಿದರು. ಅಶ್ವಿನಿ ನಾಯಕ ವಂದಿಸಿದರು. ವಿದ್ಯಾರ್ಥಿಗಳು, ಸಿಬ್ಬಂದಿಗಳು ಸೇರಿದಂತೆ ಮುಂತಾದವರಿದ್ದರು.

# ಮೃತ ಪೊಲೀಸ್ ಸಿಬ್ಬಂದಿ ಕುಟುಂಬಕ್ಕೆ 70 ಲಕ್ಷ ರೂ.ಪರಿಹಾರದ ಚೆಕ್ ಹಸ್ತಾಂತರ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.18- ನಗರದ ಸಿಎಆರ್ ಘಟಕದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಶಿವಕಾಂತ್ ತಂದೆ ತಿಮ್ಮಣ್ಣ ಅವರು ಸ್ನೇಹಿತನ ಮದುವೆ ಮುಗಿಸಿ ಮರಳಿ ಬರುವಾಗ ಕಾರು ಮತ್ತು ಲಾರಿ ಮಧ್ಯೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ದುರ್ಮರಣವನ್ನು ಹೊಂದಿದ್ದರು. ಬ್ಯಾಂಕ್ ಆಫ್ ಬರೋಡಾ ವತಿಯಿಂದ 70 ಲಕ್ಷ ರೂಪಾಯಿಗಳ ಚೆಕ್‌ನ್ನು ನಗರ ಪೊಲೀಸ್ ಆಯುಕ್ತರಾದ ಡಾ.ಶರಣಪ್ಪ ಎಸ್.ಡಿ.ಅವರ ಸಮ್ಮುಖದಲ್ಲಿ ಮೃತರ ಕುಟುಂಬಕ್ಕೆ ಹಸ್ತಾಂತರಿಸಲಾಯಿತು.

ಕೊಪ್ಪಳ ಜಿಲ್ಲೆಯ ಕನಕಗಿರಿ ತಾಲ್ಲೂಕಿನ ನವಲಗಿ ಗ್ರಾಮದ ಶಿವಕಾಂತ ಅವರು ಕಲಬುರಗಿ ನಗರ ಪೊಲೀಸ್ ಆಯುಕ್ತಾಲಯ ವ್ಯಾಪ್ತಿಯ ಸಿಎಆರ್ ಸಿಎಆರ್ ಘಟಕಕ್ಕೆ 2021ನೇ ಸಾಲಿನಲ್ಲಿ ನೇಮಕಾತಿ ಹೊಂದಿ ತರಬೇತಿ ನಂತರ ವಾಹನ ವಿಭಾಗದಲ್ಲಿ ಚಾಲಕರಾಗಿ ಸೇವೆ ಸಲ್ಲಿಸುತ್ತಿದ್ದರು. ಇವರು ಬ್ಯಾಂಕ್ ಆಫ್ ಬರೋಡಾದಲ್ಲಿ "ಪೊಲೀಸ್ ಸ್ಯಾಲರಿ ಪ್ಯಾಕೇಜ್" ಖಾತೆ ಹೊಂದಿದ್ದರು. ತಮ್ಮ ಸ್ನೇಹಿತನ ಮದುವೆಗೆ ತೆರಳಿದ್ದ ಸಂದರ್ಭದಲ್ಲಿ 10.12.2024 ರಂದು ಕಾರು-ಲಾರಿ ನಡುವೆ ಸಂಭವಿಸಿದ ಭೀಕರ ರಸ್ತೆ ಅಪಘಾಥದಲ್ಲಿ ದುರ್ಮರಣ ಹೊಂದಿದ್ದರು. ಅವರ ಕುಟುಂಬದ ಆರ್ಥಿಕ ಪರಿಸ್ಥಿತಿಯ ಮೇಲೆ ಪರಿಣಾಮ ಬೀರದಂತೆ ನಗರ ಪೊಲೀಸ್ ಆಯುಕ್ತರಾದ ಡಾ.ಶರಣಪ್ಪ ಎಸ್.ಡಿ.ಅವರು ವೈಯಕ್ತಿಕವಾಗಿ ಗಮನಹರಿಸಿ ಮೃತರ ಕುಟುಂಬಕ್ಕೆ ದೊರಕಬೇಕಾದ ಎಲ್ಲ ರೀತಿಯ ಸೌಲಭ್ಯ ದೊರೆಯುವಂತೆ ಸೂಚಿಸಿದ ಹಿನ್ನೆಲೆಯಲ್ಲಿ ಬ್ಯಾಂಕ್ ಆಫ್ ಬರೋಡಾ ವತಿಯಿಂದ ಮೃತರ ಕುಟುಂಬಕ್ಕೆ 70 ಲಕ್ಷ ರೂ.ಚೆಕ್‌ನ್ನು ಬ್ಯಾಂಕ್ ಆಫ್ ಬರೋಡಾ ಅಧಿಕಾರಿಗಳು ಹಾಗೂ ಪೊಲೀಸ್ ಆಯುಕ್ತರ ಸಮ್ಮುಖದಲ್ಲಿ ಮೃತರ ಕುಟುಂಬಕ್ಕೆ ಹಸ್ತಾಂತರಿಸಲಾಯಿತು.

# ಶುಲ್ಕ ಹೆಚ್ಚಳ: 10 ಶಾಲೆಗಳಿಗೆ ಷೋಕಾಸ್ ನೋಟಿಸ್



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ,ಏ.18- ದೆಹಲಿ ಸರ್ಕಾರದ ಶಿಕ್ಷಣ ನಿರ್ದೇಶನಾಲಯವು ಖಾಸಗಿ ಮಾನ್ಯತೆ ಪಡೆದ ಅನುದಾನರಹಿತ ಶಾಲೆಗಳಿಂದ ಅನಿಯಂತ್ರಿತ, ಅನಿಯಮಿತ ಮತ್ತು ಅತಿಯಾದ ಶುಲ್ಕ ಹೆಚ್ಚಳದ ಬಗ್ಗೆ ಹಲವಾರು ದೂರುಗಳನ್ನು ಸ್ವೀಕರಿಸಿದೆ. ಈ ದೂರುಗಳ ನಂತರ, ಪ್ರತಿ ಜಿಲ್ಲೆಯಲ್ಲಿ ಉಪ-ಜಿಲ್ಲಾ ಮ್ಯಾಜಿಸ್ಟ್ರೇಟ್ ಅಧ್ಯಕ್ಷತೆಯಲ್ಲಿ ಪರಿಶೀಲನಾ ಸಮಿತಿಗಳನ್ನು ರಚಿಸಲಾಗಿದೆ. ಇಲ್ಲಿಯವರೆಗೆ 600 ಕ್ಕೂ ಹೆಚ್ಚು ಶಾಲೆಗಳನ್ನು ಪರಿಶೀಲಿಸಲಾಗಿದ್ದು, ಉಳಿದ ಶಾಲೆಗಳ ಮೇಲೆ ಕ್ರಮ ಕೈಗೊಳ್ಳಲಾಗುತ್ತಿದೆ ನಿಯಮಗಳನ್ನು ಪಾಲಿಸದ 10 ಶಾಲೆಗಳಿಗೆ ಶೋಕಾಸ್ ನೋಟಿಸ್ ನೀಡಿದೆ.

ತಪಾಸಣೆಯ ಸಮಯದಲ್ಲಿ, ನಕಲಿ ಶಾಲಾ ಶಿಕ್ಷಣದ ಪ್ರಕರಣಗಳು ಸಹ ಬಹಿರಂಗಗೊಂಡಿ-ದ್ದು, ಅಂತಹ 20 ಶಾಲೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುತ್ತಿದೆ. ಇದರೊಂದಿಗೆ, ಆರ್‌ಟಿಇ ಕಾಯ್ದೆ, 2009 ರ ಅಡಿಯಲ್ಲಿ ಬಡ, ಅಂಗವಿಕಲ ಮತ್ತು ಹಿಂದುಳಿದ ವಿದ್ಯಾರ್ಥಿಗಳಿಗೆ ಉಚಿತ ಪುಸ್ತಕಗಳು, ಸಮವಸ್ತ್ರಗಳು ಮತ್ತು ಬರವಣಿಗೆ ಸಾಮಗ್ರಿಗಳನ್ನು ಒದಗಿಸದ ಶಾಲೆಗಳ ವಿರುದ್ಧ ಕಟ್ಟುನಿಟ್ಟಿನ ಮೇಲ್ವಿಚಾರಣೆ ಮತ್ತು ಕ್ರಮ ಕೈಗೊಳ್ಳಲಾಗುತ್ತಿದೆ..

ಅನಿಯಮಿತ ಶುಲ್ಕ ಹೆಚ್ಚಳ ಕಂಡುಬಂದಿರುವ ಶಾಲೆಗಳಿಗೆ ಶೋಕಾಸ್ ನೋಟಿಸ್ ನೀಡಲಾಗುತ್ತಿದೆ. ಅಂತಹ ಸಂದರ್ಭಗಳಲ್ಲಿ, ಮಾನ್ಯತೆಯನ್ನು ರದ್ದುಗೊಳಿಸಿ ಸರ್ಕಾರವು ನಿರ್ವಹಣೆಯನ್ನು ವಹಿಸಿಕೊಳ್ಳಲು ಕ್ರಮ ಕೈಗೊಳ್ಳಲಾಗುತ್ತಿದೆ. 1973 ರ ಡಿಎಸ್ ಇಎಆರ್ ನ ಸೆಕ್ಷನ್ 24(3) ರ ಅಡಿಯಲ್ಲಿ 10 ಕ್ಕೂ ಹೆಚ್ಚು ಶಾಲೆಗಳಿಗೆ ನೋಟಿಸ್ ನೀಡಲಾಗಿದೆ.

ಇದಲ್ಲದೆ, ಅಗತ್ಯವಿರುವ ಲೆಕ್ಕಪತ್ರ ವರದಿಗಳು ಮತ್ತು ಶುಲ್ಕದ ವಿವರಗಳನ್ನು ಸಲ್ಲಿಸದ ಹಲವು ಶಾಲೆಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ.

ದೆಹಲಿ ಸರ್ಕಾರವು ಶಿಕ್ಷಣ ವ್ಯವಸ್ಥೆಯನ್ನು ಪಾರದರ್ಶಕ ಮತ್ತು ನ್ಯಾಯಯುತವಾಗಿಡಲು ಮತ್ತು ಯಾವುದೇ ರೀತಿಯ ಅಕ್ರಮಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಮುಂದಾಗಿದೆ.

# ಪರಿಕ್ಷೆಗೆ ಅಡ್ಡಿ ಪಡಿಸಿದ ಅಧಿಕಾರಿ ವಿರುದ್ಧ ಕಠಿಣ ಕ್ರಮ ಜರುಗಿಸಿ: ಈಶ್ವರ ಠಾಕೂರ್



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 18 : ಜನಿವಾರ ಧರಿಸಿದಕ್ಕೆಸುಚಿವೃತ ಕುಲಕರ್ಣಿ ಎಂಬ ವಿದ್ಯಾರ್ಥಿಗೆ ಗಣಿತ ವಿಷಯದ ಸಿ.ಇ.ಟಿ ಪರಿಕ್ಷೆ ಬರೆಯಲು ಅವಕಶ ನೀಡದ ಅಧಿಕಾರಿ ವಿರುದ್ಧ ರಾಜ್ಯ ಉನ್ನತ ಶಿಕ್ಷಣ ಇಲಾಖೆ ಕಠಿಣ ಕ್ರಮ ಜರುಗಿಸಬೇಕೆಂದು ಸ್ಥಳಿಯ ಹಿರಿಯ ಬಿಜೆಪಿ ಮುಖಂಡರಾದ ಈಶ್ವರ ಸಿಂಗ್ ಠಾಕೂರ್ ಆಗ್ರಹಿಸಿದ್ದಾರೆ.

ಶುಕ್ರವಾರ ನಗರದ ವಛಬಾರಾ ಹತ್ತಿರವಿರುವ ವಿದ್ಯರ್ತಿಯ ಮನೆಗೆ ಭೇಟಿ ನೀಡಿದ ಬಳಿಕ ಪ್ರಕಟಣೆ ಹೊರಡಿಸಿರುವ ಈಶ್ವರ ಠಾಕೂರ ಅವರು, ಜನಿವಾರ ಧರಿಸುವುದು ನಮ್ಮ ಸಂಪ್ರದಾಯ ಹಾಗೂ ಸಂಸ್ಕೃತಿ. ಅದಕ್ಕೆ ಅಡ್ಡಿಪಡಿಸುವ ಅಧಿಕಾರ ಯಾರಿಗೂ ಇಲ್ಲ. ಸಿ.ಇ.ಟಿ ಪರಿಕ್ಷೆ ಬರೆದು ವಿದ್ಯಾರ್ಥಿ ಭವಿಷ್ಯ ಉಜ್ವಲ ಮಾಡಿಕೊಳ್ಳಬೇಕೆಂದರೆ ಪರಿಕ್ಷೆ ಬರೆಯದಂತೆ ಅವರನ್ನು ಜನಿವಾರದ ನೆಪವೊಡ್ಡಿ ತಡೆಯುವ ಮೂಲಕ ಒಂದು ದೊಡ್ಡ ಷಡ್ಯಂತ್ರ ನಡೆದಿದೆ. ಇದರ ಹಿಂದೆ ಯಾವ ಉದ್ದೇಸವಿದೆ ಗೊತ್ತಾಗುತ್ತಿಲ್ಲ. ಅದು ಏನೇ ಇದ್ದರೂ ಪರಿಕ್ಷೆಯಿಂದ ವಂಚಿತನಾದ ಈ ವಿದ್ಯಾರ್ಥಿಗೆ ಪರಿಕ್ಷೆಗೆ ಅವಕಾಶ ನೀಡಬೇಕು, ಅಥವಾ ಉಚಿತ ಸೀಟ್ ಕೊಡಬೇಕು. ಇಂತಹ ಓದುವ ಮಕ್ಕಳ ಭವಿಷ್ಯ ಹಾಳಾದರೆ ಸರ್ಕಾರವೇ ನೇರ ಹೊಣೆ ಹೊತ್ತು ಆತನಿಗಾದ ಅನ್ಯಾಯವನ್ನು ಸರಿಪಡಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲಾಧಿಕಾರಿಗಳನ್ನು ಒತ್ತಾಯಿಸುತ್ತೇನೆಂದು ಈಶ್ವರ ಠಾಕೂರ ಹೇಳಿದ್ದಾರೆ.

# ಬಾವಗಿ ಗುರು ಭದ್ರೇಶ್ವರ ಜಾತ್ರೆ: ಅದ್ದೂರಿ ರಥೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 18 : ಬೀದರ್ ತಾಲೂಕಿನ ಬಾವಗಿ ಗ್ರಾಮದ ಆರಾಧ್ಯದೈವ ಪವಾಡ ಪುರುಷ ಶ್ರೀ ಗುರು ಭದ್ರೇಶ್ವರ ರ ಜಾತ್ರಾ ಮಹೋತ್ಸವ ಹಾಗೂ ರಥೋತ್ಸವು ಶ್ರೀ ಪತಿ ಪಂಡಿತಾರಾಧ್ಯಶಿವಾಚಾರ್ಯರು ಹಳ್ಳಿಖೇಡ ರವರ ನೇತೃತ್ವದಲ್ಲಿ ಅದ್ದೂರಿಯಾಗಿ ಜರುಗಿತು.

ಕಾರ್ಯಕ್ರಮಕ್ಕೆ ಬೀದರ್ ಜಿಲ್ಲೆಯ ಸಮಸ್ತ ಭಕ್ತಾದಿಗಳು ಸಾಗರೋಪಾದಿಯಲಿ ಬಂದು ಗುರು ಭದ್ರೇಶ್ವರ ರ ರಥೋತ್ಸವ ದಲಿ ಭಾಗಿಯಾಗಿದ್ದರು. ರಥೋತ್ಸವ ಕ್ಕಿಂತ ಮುಂಚೆ ಶ್ರೇಯಾ ಮೆಲೋಡಿಸ್ ಕಾಳಗಿ ವತಿಯಿಂದ ಸಂಗೀತ ರಸದೌತಣ ನಡೆಯಿತು.

ಜಾತ್ರೆಯಲ್ಲಿ ಭಾಗವಹಿಸಿದ್ದ ಬೀದರ್ ಲೋಕಸಭಾ ಕ್ಷೇತ್ರದ ಯುವ ಸಂಸದ ಸಾಗರ ಖಂಡ್ರೆ ಯವರು ಮಾತನಾಡಿ ನಮ್ಮ ನಾಡು ಅನೇಕ ಸತ್ ಪುರುಷರು ಜನ್ಮ ತಾಳಿದ ಪುಣ್ಯ ಭೂಮಿ ಯಾಗಿದೆ. ಅದರಲ್ಲಿ ಬಾವಗಿಯ ಗುರು ಭದ್ರೇಶ್ವರು ಕೂಡ ತನ್ನ ಲೀಲೆಗಳನ್ನು ತೋರಿಸುವ ಮೂಲಕ ಭೂಲೋಕದಲಿ ಎಷ್ಟೋ ಜನರ ಬಾಳಿಗೆ ಬೆಳಕಾಗಿ ಜನ ಮನದಲ್ಲಿ ನಿತ್ಯ ಪೂಜೆ ಗೊಳ್ಳುವ ಗುರುವಿನ ಜಾತ್ರಾ ಮಹೋತ್ಸವು ಅತ್ಯಂತ ವಿಜೃಂಭಣೆಯಿಂದ ಪ್ರತಿ ವರುಷ ನಡೆಸಿಕೊಂಡು ಬರುತ್ತಿರುವುದು ನೋಡಿದರೆ ತಾವುಗಳು ಗುರುವಿನ ಮೇಲಿಟ್ಟ ಭಕ್ತಿ ನಂಬಿಕೆ ಅಪಾರ ಇದೆ ಎಂದು ತಿಳಿಯುತ್ತದೆ ಇನ್ನೂ ಉನ್ನತ ಮಟ್ಟದಲ್ಲಿ ಈ ಮಂದಿರದ ಕೀರ್ತಿ ಬೆಳಗಲಿ ಇಂತಹ ವೈಭವದ ಜಾತ್ರಾ ಮಹೋತ್ಸವ ಹಾಗೂ ರಥೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಧನ್ಯನಾದೆ ಎಂದು ನುಡಿದರು.

ವಿಧಾನ ಪರಿಷತ್ ಸದಸ್ಯರಾದ ಭಿಮರಾವ ಪಾಟೀಲ್ ರವರು ಮಾತನಾಡಿ ಭದ್ರೇಶ್ವರ ಲೀಲೆ ಅಪಾರ ಜಾತ್ರೆಯಲ್ಲಿ ಭಾಗವಹಿಸಿದ್ದು ಸಂತೋಷ ವಾಗುತ್ತಿದೆ ಎಂದು ನುಡಿದರು.

ಜಾತ್ರೆಯಲ್ಲಿ ಶಾಸಕರಾದ ಡಾ: ಶೈಲೇಂದ್ರ ಬೆಲ್ದಾಳೆ ರವರು ವೇದಿಕೆ ಉದ್ದೇಶಿಸಿ ಮಾತನಾಡಿದ

ಶ್ರೀ ಭದ್ರೇಶ್ವರ ಸಂಸ್ಥಾನದ ವೇದಮೂರ್ತಿ ಭದ್ರಯ್ಯ ಸ್ವಾಮಿಯವರು ಮಾತನಾಡಿ ಗುರು ಭದ್ರೇಶ್ವರ ರ ಜಾತ್ರಾ ಮಹೋತ್ಸವ ಹಾಗೂ ರಥೋತ್ಸವ ದಲಿ ಭಾಗಿಯಾಗಿರುವ ಎಲ್ಲಾ ಭಕ್ತರಿಗೂ ಶೀ ಗುರು ಭದ್ರೇಶ್ವರ ರ ಕೃಪೆ ಆಶೀರ್ವಾದ ಸದಾ ಇರಲೆಂದು ಆಶಿರವದಿಸಿದರು. ಕೊನೆಯಲ್ಲಿ ಗುರು ಭದ್ರೇಶ್ವರ ರ ರಥೋತ್ಸವ ನಡೆಯಿತು. ಅನೇಕ ಭಕ್ತಾದಿಗಳು ರಥೋತ್ಸವ ಕಾರ್ಯಕ್ರಮ ದಲ್ಲಿ ಭಾಗವಹಿಸಿ ಗುರು ಭದ್ರೇಶ್ವರ ರಥಕ್ಕೆ ಅನೇಕ ರೀತಿಯ ಭೇಂಡು ಬಾತಾಸ ಹಣ್ಣು ಎಸೇದರು ಭಕ್ತಿ ಭಾವದಿಂದ ಗುರು ಭದ್ರೇಶ್ವರ ರ ಜೈಕಾರ ಕೂಗುವುದರೊಂದಿಗೆ ಚೆಲ್ಲಿ ಸಂತಸಗೊಂಡರೆ ಯುವಕರು ಭಕ್ತಿ ಗೀತೆಗಳ ಡಿಜೆ ಹಾಡುಗಳಿಗೆ ಹೆಜ್ಜೆ ಹಾಕಿದರು. ಅನೇಕ ಭಕ್ತಾದಿಗಳು ಸಂತಸದಿಂದ ಗುರು ಭದ್ರೇಶ್ವರ ರಥೋತ್ಸವದಲ್ಲಿ ಭಾಗವಹಿಸಿ ಗುರು ಭದ್ರೇಶ್ವರ ಜಾತ್ರಾ ಮಹೋತ್ಸವ ಯಶಸ್ವಿ ಯಾಗಿಸಿದರು.

ಈ ಸಂದರ್ಭದಲ್ಲಿ ಗುರು ಭದ್ರೇಶ್ವರ ಸಂಸ್ಥಾನದ ಶಾಂತಕುಮಾರ್ ಸ್ವಾಮಿ, ಬಾಲಸಂಗಯ್ಯ ಸ್ವಾಮಿ ಶಿವಕುಮಾರ ಸ್ವಾಮಿ, ಕಂಟಯ್ಯ, ಮುಖಂಡರಾದ ಚನ್ನಮಲ್ಲಪ್ಪಾ ಹಜ್ಜರಗಿ, ಲೋಕೇಶ ಕನಶಟ್ಟಿ, ಸತ್ಯನಾರಾಯಣ ಬಚ್ಚ, ಬಸವರಾಜ ಖೌದಿ, ನಾಗಶೇಟ್ಟಿ ಅಳ್ಳೀ, ಸಂಗಮೇಶ ಹಜರಿಗಿ, ಮಡೆಪ್ಪ ಹಜರಗಿ, ಸಂತೋಷ ಜಗದಾಳೆ, ರಾಜಕುಮಾರ್ ಮಡಿವಾಳ, ರಾಜಕುಮಾರ್ ಪಾಟೀಲ್,, ಕಾಶಿನಾಥ್ ಪಕ್ಕಾ, ಸುನೀಲ್ ಚಿದ್ರಿ, ಶಿವುಕುಮಾರ ರೆಶೇಟ್ಟಿ, ಮಾರುತಿ ಹೂಗಾರ, ನಾಗೇಶ್ ಕೊಳಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ನಾಳೆ ಕೆ.ಯು.ಡ.ಬ್ಲು.ಜೆ ಸಾಮಾನ್ಯ ಸಭೆ ಹಾಗೂ ಐಡಿ ಕಾರ್ಡ್ ವಿತರಣೆ

ಬೀದರ. ಏ. 18 : ನಾಳೆ ಭಾನುವಾರ ಮಧ್ಯಾಹ್ನ 12 ಗಂಟೆಗೆ ಜಿಲ್ಲಾ ಪತ್ರಿಕಾ ಭವನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಅಧ್ಯಕ್ಷ ಡಿ.ಕೆ ಗಣಪತಿ ಅವರ ಅಧ್ಯಕ್ಷತೆಯಲ್ಲಿ ಸಂಘದ ಜಿಲ್ಲಾ ಕಾರ್ಯಕಾರಿಣಿ ಸಮಿತಿ ಸಭೆ ಜೊತೆಗೆ ವಾರ್ಷಿಕ ಸಾಮಾನ್ಯ ಸಭೆ ಹಮ್ಮಿಕೊಳ್ಳಲಾಗಿದೆ. ಇದಲ್ಲದೆ 2025–26ನೇ ಸಾಲಿನ ಸಂಘದ ಗುರುತಿನ ಚೀಟಿಗಳನ್ನು ಸಹ ವಿತರಿಸಲಾಗುತ್ತಿದೆ ಎಂದು ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ನಾನಾ ಕಾರಣಗಳಿಂದಾಗಿ ಕಳೆದ ಎರಡು ವರ್ಷಗಳಿಂದ ಸಾಮಾನ್ಯ ಸಭೆ ನಡೆದಿರಲಿಲ್ಲ. ಸಂಘದ ಸದಸ್ಯತ್ವ ಹೊಂದಿರುವ ಪತ್ರಕರ್ತರು ಅಂದು ಮಧ್ಯಾಹ್ನ ಸಾಮಾನ್ಯ ಸಭೆಯಲ್ಲಿ ಭಾಗವಹಿಸಿ ತಮ್ಮ ಮುಕ್ತ ವಿಚಾರಗಳನ್ನು, ಸಲಹೆಗಳನ್ನು ನೀಡಬಹುದಾಗಿದೆ. ಅದೇ ರೀತಿ 2025–26ನೇ ಸಾಲಿನ ಗುರುತಿನ ಚೀಟಿಗಳನ್ನು ವಿತರಿಸಲಾಗುತ್ತಿದೆ. ಯಾರು ಸದಸ್ಯರಿದ್ದಾರೆಯೋ ಅವರೆ ಕಾರ್ಡ್ ಪಡೆಯಬಹುದಾಗಿದೆ. ಬೇರೆಯವರ ಕೈಯಲ್ಲಿ ಕೊಡುವುದಿಲ್ಲ. ಈ ವರ್ಷ ಚುನಾವಣೆ ಇರುವ ಕಾರಣ ಎಲ್ಲರು ಐಡಿ ಕಾರ್ಡ್ ಪಡೆಯುವ ಭಾವಚಿತ್ರವನ್ನು ರಾಜ್ಯ ಘಟಕಕ್ಕೆ ಹಾಗೂ ಕಾರ್ಮಿಕ ಇಲಾಖೆಗೆ ಕಳುಹಿಸಲಾಗುತ್ತಿದೆ.

ಆದ ಕಾರಣ ಕರ್ನಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಪದಧಿಕಾರಿಗಳು, ರಾಜ್ಯ ಕಾರ್ಯಕಾರಿಣಿ ಸಮಿತಿ ಸದಸ್ಯರು, ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟದ ರಾಷ್ಟ್ರೀಯ ಮಂಡಳಿ ಸದಸ್ಯರು, ಜಿಲ್ಲಾ ಕಾರ್ಯಕಾರಿಣಿ ಸಮಿತಿ ಸದಸ್ಯರು, ಎಲ್ಲ ತಾಲೂಕುಗಳ ಅಧ್ಯಕ್ಷ–ಪ್ರಧಾನ ಕಾರ್ಯದರ್ಶಿ ಮತ್ತು ಇತರೆ ಪದಧಿಕಾರಿಗಳು, ಸದಸ್ಯರು ಸೇರಿದಂತೆ ಜಿಲ್ಲೆಯ ಎಲ್ಲ ಹಿರಿಯ ಹಾಗೂ ಕಿರಿಯ ಸದಸ್ಯರು ಸಭೆಯಲ್ಲಿ ಪಾಲ್ಗೊಳ್ಳಬೇಕೆಂದು ಅವರು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಹೊಸ ಮಾದರಿ ಮಾರುಕಟ್ಟೆ ನಿರ್ಮಾಣಕ್ಕೆ ಆಗ್ರಹಿಸಿ ಸಿಎಂಗೆ ಮನವಿ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 18 : ಬೀದರನಲ್ಲಿ ಹೊಸ ಮಾದರಿ ಮಾರುಕಟ್ಟೆ ನಿರ್ಮಿಸಬೇಕು ಎಂದು ಗಾಂಧಿಗಂಜ್‌ನ ದಿ ಗ್ರೇನ್ ಆಯಿಂಡ್ ಸೀಡ್ಸ್ ಮರ್ಚಂಟ್ಸ್ ಅಸೋಸಿಯೇಷನ್ ರಾಜ್ಯ ಸರ್ಕಾರವನ್ನು ಆಗ್ರಹಿಸಿದೆ.

ಅಸೋಸಿಯೇಷನ್ ಪದಾಧಿಕಾರಿಗಳು ನಗರದಲ್ಲಿ ಬುಧವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರಿಗೆ ಈ ಕುರಿತು ಪ್ರತ್ಯೇಕ ಮನವಿ ಪತ್ರ ಸಲ್ಲಿಸಿದರು.

ಸದ್ಯದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಮಾರುಕಟ್ಟೆ ಪ್ರಾಂಗಣ ಕಿರಿದಾಗಿದೆ. ಸುಗ್ಗಿ ಕಾಲದಲ್ಲಿ ಕೆಲವೊಮ್ಮೆ ನಡೆಯಲು ಸಹ ಜಾಗ ಇಲ್ಲದಂಥ ಪರಿಸ್ಥಿತಿ ಎದುರಾಗುತ್ತಿದೆ ಎಂದು ಅಸೋಸಿಯೇಷನ್ ಅಧ್ಯಕ್ಷ ಬಸವರಾಜ ಧನ್ನೂರ ಗಮನ ಸೆಳೆದರು.

30 ಎಕರೆಯಲ್ಲಿ ಇರುವ ಮಾರುಕಟ್ಟೆ ಬೀದರನ ವಾಣಿಜ್ಯ ಚಟುವಟಿಕೆಗಳಿಗೆ ಬೆನ್ನೆಲುಬಾಗಿದೆ. ಅಂದು ಕೃಷಿ ಉತ್ಪನ್ನಗಳ ಆವಕ ಹಾಗೂ ವ್ಯಾಪಾರಿಗಳ ಸಂಖ್ಯೆಗೆ ಅನುಗುಣವಾಗಿ ಮಾರುಕಟ್ಟೆ ಸ್ಥಾಪಿಸಲಾಗಿದೆ. ಈಗ ವ್ಯಾಪಾರ ಚಟುವಟಿಕೆ ಹೆಚ್ಚಾಗಿದ್ದು, ಮಾರುಕಟ್ಟೆ ಸಾಕಾಗುತ್ತಿಲ್ಲ ಎಂದು ಹೇಳಿದರು.

ಕನಿಷ್ಠ 100 ಎಕರೆಯ ಹೊಸ ಮಾರುಕಟ್ಟೆ ಸ್ಥಾಪನೆ ತೀರಾ ಅವಶ್ಯಕವಾಗಿದೆ. ಒಂದು ದಶಕದಿಂದ ಇದಕ್ಕಾಗಿ ನಿರಂತರ ಪ್ರಯತ್ನ ಮಾಡುತ್ತ ಬರಲಾಗುತ್ತಿದೆ. ಸರ್ಕಾರಕ್ಕೆ ಅನೇಕ ಬಾರಿ ಮನವಿ ಪತ್ರ ಸಲ್ಲಿಸಲಾಗಿದೆ ಎಂದು ತಿಳಿಸಿದರು.

ಈಗಲಾದರೂ ನೂತನ ಹಾಗೂ ಸುಸಜ್ಜಿತ ಮಾರುಕಟ್ಟೆಯ ಬಹು ದಿನಗಳ ಕನಸು ನನಸಾಗಿಸಬೇಕು. ಬೀದರನ ರೈತರು ಹಾಗೂ ವ್ಯಾಪಾರಿಗಳಿಗೆ ಅನುಕೂಲ ಮಾಡಿಕೊಡಬೇಕು ಎಂದು ಬೇಡಿಕೆ ಮಂಡಿಸಿದರು.

ಅಸೋಸಿಯೇಷನ್ ಉಪಾಧ್ಯಕ್ಷ ನಾಗಶೆಟ್ಟೆಪ್ಪ ದಾಡಗಿ, ಕಾರ್ಯದರ್ಶಿ ಭಗವಂತ ಔದತ್ತಪುರ, ಸಹ ಕಾರ್ಯದರ್ಶಿ ನಾಗಶೆಟ್ಟಿ ಕಾರಾಮುಂಗಿ, ಖಜಾಂಚಿ ಬಂಡೆಪ್ಪ ಗಡ್ಡೆ, ಹಿರಿಯ ವ್ಯಾಪಾರಿಗಳಾದ ಅಣ್ಣಾರಾವ್ ಮೊಗಶೆಟ್ಟಿ, ಮಲ್ಲಿಕಾರ್ಜುನ ಹತ್ತಿ, ಚಂದ್ರಪ್ಪ ಹಳ್ಳಿ, ವೀರಭದ್ರಪ್ಪ ಪಾಟೀಲ ಕನ್ನಳ್ಳಿ, ಗೋವಿಂದರಾವ್ ನೀಲಮನಳ್ಳಿ, ವಿವೇಕಾನಂದ ಧನ್ನೂರ, ಗುಂಡಪ್ಪ ಎಮ್ಮೆ, ನಾಗರಾಜ ನಂದಗಾಂವ್, ಪ್ರಶಾಂತ ಉದಗಿರೆ, ಗಿರೀಶ್ ಪಾಟೀಲ, ರಾಜಕುಮಾರ ಹಜ್ಜರಗಿ, ಪ್ರಕಾಶಗೌಡಪ್ಪನೋರ್ ಇದ್ದರು.

# ಪತ್ರಕರ್ತರ ಮೇಲೆ ಹಲ್ಲೆ ಮಾಡಿದ ಇನ್ನುಳಿದ ಮೂವರನ್ನು ಸಹ ಅಮಾನತು ಮಾಡಿ: ಬಂಗ್ಲೆ ಮಲ್ಲಿಕಾರ್ಜುನ್



ಮಲ್ಲಮ್ಮ ನುಡಿ ವಾರ್ತೆ

ಬೀದರ್: ಏ.18 : 15ರ ರಾತ್ರಿ ಪತ್ರಕರ್ತ ರವಿ ಭೂಸಂಡೆ ಅವರ ಮೇಲೆ ಹಲ್ಲೆ ಮಾಡಿರುವ ಅರಣ್ಯ ಸಿಬ್ಬಂದಿ ದಸ್ತಗೀರ ಸೇರಿ ನಾಲ್ಕು ಜನ ಹಲ್ಲೆ ಮಾಡಿದ್ದರು. ಇಂದು ದಸ್ತಗೀರರನ್ನು ಇಲ್ಲಿಯ ಪ್ರಾದೇಶಿಕ ಅರಣ್ಯ ಇಲಾಖೆಯ ಉಪ ಅರಣ್ಯ ಸಂರಕ್ಷಣಾಧಿಕಾರಿ ವಾನತಿ ಅಮಾನತ್ತು ಆದೇಶ ಹೊರಡಿಸಿದ್ದಾರೆ. ಆದರೆ ಇನ್ನುಳಿದ ಮೂವರಾದ ಸಂಗಮೇಶ, ಗಜಾನಂದ ಹಾಗೂ ಶಾಂತಕುಮಾರ ಈ ಮೂವರನ್ನು ಸಹ ಅಮಾನತ್ತು ಮಾಡಬೇಕು. ಇನ್ನು ಮೂವರನ್ನು ಸಹ ಪತ್ತೆ ಹಚ್ಚಿ ಅವರಿಗೂ ಶಿಕ್ಷೆ ವಿಧಿಸಬೇಕೆಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆ ರಾಜ್ಯಾಧ್ಯಕ್ಷ ಬಂಗ್ಲೆ ಮಲ್ಲಿಕಾರ್ಜುನ್ ಒತ್ತಾಯಿಸಿದ್ದಾರೆ. ಶುಕ್ರವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಆದೇಶ ನೀಡಿದ್ದಾರೆಂದ ಮಾತ್ರಕ್ಕೆ ರಾತ್ರಿ ಸಸಿ ನೆಡುವುದು ಪ್ರಕೃತಿಗೆ ಒಳ್ಳೆಯದಲ್ಲ. ರಾತ್ರಿ ಆದ ಮೇಲೆ ಮರಗಳನ್ನು ಕಡಿಯಬಾರದು, ಹೂ ಕೀಳಬಾರದೆಂದು ನಮ್ಮ ಹಿರಿಯರು ಹೇಳುತ್ತಾರೆ. ಅಂಥದರಲ್ಲಿ ಇವರು ರಾತ್ರಿ ಸಸಿಗಳನ್ನು ನೆಡಲು ಹೇಳಿ ಯಾರಿಗೆ ಮೆಚ್ಚಿಸಲು ಸಚಿವರು ಹೊರಟಿದ್ದಾರೆ? ಎಂದು ಪ್ರಶ್ನೆ ಮಾಡಿರುವ ಬಂಗ್ಲೆ ಅವರು, ಇದ್ದ ಸಸಿಗೆ ನೀರು ಹಾಕಿದರೆ ಸಾಕೆಂದು ಹೇಳಿದರು.

ಪತ್ರಕರ್ತನಾದವನಿಗೆ ತನ್ನ ವೃತ್ತಿ ಧರ್ಮ ಪಾಲಿಸಲು ಸಂಪೂರ್ಣ ಅಧಿಕಾರವಿದೆ. ನಮ್ಮ ಅಧಿಕಾರ ಹನನ ಮಾಡುವ ಹಕ್ಕು ಯಾರಿಗೂ ಇಲ್ಲ. ಅಂಥದರಲ್ಲಿ ಪತ್ರಕರ್ತ ರವಿ ಸುದ್ದಿ ಮಾಡಲು ಮುಂದಾದರೆ ಮನಬಂದಂತೆ ಅವನ ಮೇಲೆ ಹಲ್ಲೆ ಮಾಡುವುದು, ಜಾತಿ ನಿಂದನೆ ಮಾಡುವ ಮೂಲಕ ಇಡೀ ಅಧಿಕಾರಿ ವರ್ಗದ ಮಾನ ಹರಾಜು ಮಡಿರುವ ತಪ್ಪಿತಸ್ತ ಎಲ್ಲರ ಮೇಲೂ 307 ಹಾಗೂ ಕಿಡ್ನಾ ??ಪಿಂಗ್ ಕೆಸ್ ದಾಖಲಿಸಬೇಕಿತ್ತು. ಆದರೆ ಪೋಲಿಸ್ ಅಧಿಕಾರಿಗಳು ನಾಮಕೆ ವಾಸ್ತೆ ಕೇಸ್ ದಾಖಲಿಸಿರುವುದಕ್ಕೆ ಯಾರ ಒತ್ತಡವಿದೆ? ಎಂದು ಪ್ರಶ್ನೆ ಮಾಡಿರುವ ಅವರು, ಕೂಡಲೇ ಹಲ್ಲೆ ಎಸಗಿದ ಇನ್ನುಳಿದ ಮೂವರ ಮೇಲು ಅಮಾನತ್ತು ಶಿಕ್ಷೆ ಆಗಬೇಕು ಜೊತೆಗೆ ಇನ್ನು ಮೂವರ ಪತ್ತೆ ಹಚ್ಚಿ ಅವರ ಮೇಲೂ ಕ್ರಮ ಜರುಗಿಸಬೇಕೆಂದು ಆಗ್ರಹಿಸಿದರು.

ಕಾನಿಪ ಧ್ವನಿ ಸಂಘಟನೆ ವಿಭಾಗೀಯ ಅಧ್ಯಕ್ಷ ಮಲ್ಲಿಕಾರ್ಜುನ್ ಪಗಡೆ ಮಾತನಾಡಿ, ಹಲ್ಲೆ ಮಾಡುವ ಸಂದರ್ಭದಲ್ಲಿ ಹಲ್ಲೆಗೈದ ಅರಣ್ಯ ಸಿಬ್ಬಂದಿಗಳು ಸಚಿವ ಈಶ್ವರ ಖಂಡ್ರೆಯವರಿಗೆ ಹೋಗಿ ಹೇಳು ಎಂದು ಗದರಿಸುವ ಮೂಲಕ ಖಂಡ್ರೆಯವರನ್ನು ಹಿಯಾಳಿಸಲು ಅವರ ಇಲಾಖೆಯ ಸಿಬ್ಬಂದಿಗಳೆ ಹೋರಟಿದ್ದಾರೆ ಎನ್ನುವಂಗಾಯ್ತು. ಪತ್ರಕರ್ತ ರವಿ ಕುಡಿದಿದ್ದಾನೆ ಎಂದು ಮೇಲಾಧಿಕಾರಿಗಳಿಗೆ ಸುಳ್ಳು ಮಾಹಿತಿ ನೀಡಿದ್ದಾರೆ. ಈಗಾಗಲೇ ರವಿ ಕುಡಿದಿಲ್ಲ ಎಂಬ ವೈದ್ಯಕೀಯ ವರದಿ ಬಂದಿದೆ. ಆದರೆ ಅರಣ್ಯ ಸಿಬ್ಬಂದಿಗಳು ಕುಡಿದಿರುವ ಬಗ್ಗೆ ಸಹ ಟೆಸ್ಟ್ ಆಗಬೇಕು, ತಪ್ಪಿತಸ್ತ ಎಲ್ಲರ ಮೇಲೂ ಶಿಸ್ತು ಕ್ರಮ ಜರುಗಿಸಬೇಕೆಂದು ಆಗ್ರಹಿಸಿದರು.

ಸಂಘಟನೆಯ ರಾಜ್ಯ ಕಾರ್ಯದರ್ಶಿ ಜಾನಸನ್ ಘೋಡೆ, ಕಲಬುರಗಿ ಜಿಲ್ಲಾಧ್ಯಕ್ಷ ರಾಜಶೇಖರ ಮಾತೋಳಿ, ಪದಾಧಿಕಾರಿಗಳಾದ ಶ್ರೈಶೈಲ ಪಗಡೆ, ಪ್ರವಿಣ ಮತ್ತು ಶ್ರೀಕಾಂತ ಪತ್ರಿಕಾಗೋಷ್ಠಿಯಲ್ಲಿದ್ದರು.

# ಪತ್ರಕರ್ತರು ಒಗ್ಗಾಟಾಗದಿದ್ದರೆ ಉಳಿಗಾಲವಿಲ್ಲ: ಬಾಬುವಾಲಿ



ಮಲ್ಲಮ್ಮನುಡಿವಾರ್ತೆ ಬೀದರ. ಏ. 18 :ಪತ್ರಕರ್ತರು ಯಾರೆ ಆಗಿರಲಿ ಅವರು ನಮ್ಮವರು. ಅವರ ಮೇಲೆ ಹಲ್ಲೆಯಾದರೆ ಇಡೀ ಪತ್ರಕರ್ತ ಸಮೂಹದ ಮೇಲೆ ಹಲ್ಲೆಯಾದಂತೆ. ನಾವು ನಮ್ಮಲ್ಲಿರುವ ಕಚ್ಚಾಟ ಬಿಟ್ಟು ಒಗ್ಗಟ್ಟು ಪ್ರದರ್ಶಿಸಬೇಕೆಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ನಿಕಟಪೂರ್ವ ಅಧ್ಯಕ್ಷರು ಹಾಗೂ ಹಾಲಿ ಹಿರಿಯ ಸದಸ್ಯರು ಆದ ಬಾಬು ವಾಲಿ ತಿಳಿಸಿದರು. ಗುರುವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಮೊನ್ನೆಯಷ್ಟೆ ಪತ್ರಕರ್ತ ರವಿ ಭೂಸಂಡೆಯವರ ಮೇಲೆ ಹಲ್ಲೆಗೈದ ಅರಣ್ಯ ಇಲಾಖೆಯ ಸಿಬ್ಬಂದಿಗಳನ್ನು ಅಮಾನತು ಮಾಡುವಂತೆ ಒತ್ತಾಯಿಸಲು ಹಮ್ಮಿಕೊಂಡ ಪ್ರತಿಭಟನಾ ಸಭೆ ಉದ್ದೇಸಿಸಿ ಮಾತನಡಿದರು. ಪತ್ರಕರ್ತರೆಂದರೆ ಬೀದರ್‌ನಲ್ಲಿ ಅಧಿಕಾರಿಗಳಿಗೆ ಹಾಗೂ ಜನ ಪ್ರತಿನಿಧಿಗಳಿಗೆ ಭಯವೇ ಇಲ್ಲದಂತಾಗಿದೆ. ನಾವು ನಮ್ಮ ಸ್ವಾಭಿಮಾನ ಕಾಪಾಡಿಕೊಂಡು ವೃತ್ತಿ ಧರ್ಮ ಪಾಲಿಸಬೇಕು. ಯಾರ ಮೇಲು ಹಗೆತನ ಸಾಧಿಸದೆ ನಮ್ಮೊಳಗೆ ಏನೆ ಮತಭೇದವಿದ್ದರೂ ಪರಸ್ಪರ ಬಗೆ ಹರಿಸಿಕೊಳ್ಳಬೇಕು. ಹೊರಗಿನವರಿಗೆ ಆಸ್ಪದ ನೀಡಬಾರದೆಂದು ಕಿವಿಮಾತು ಹೇಳಿದ ಬಾಬು ವಾಲಿ, ಹಲ್ಲೆ ಮಾಡಿರುವ ಅರಣ್ಯ ಇಲಾಖೆಯ ಸಿಬ್ಬಂದಿಗಳನ್ನು ಬಮಧಿಸಿ ಅವರನ್ನು ಸೇವೆಯಿಂದ ಅಮಾನತು ಆಗುವ ವರೆಗೆ ಹೋರಾಟ ನಿಲ್ಲದು ಎಂದು ತಿಳಿಸಿದರು. ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟದ ರಾಷ್ಟ್ರೀಯ ಮಂಡಳಿ ಸದಸ್ಯ ಅಪ್ಪಾರಾವ ಸೌದಿ ಮಾತನಾಡಿ, ರವಿ ಮೇಲೆ ಹಲ್ಲೆ ಮಾಡಿರುವ ಅರಣ್ಯ ಸಿಬ್ಬಂದಿಗಳ ಕ್ರಮ ಅತ್ಯಂತ ಖಂಡನಿಯ. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಕೂಡಲೇ ಹಲ್ಲೆ ಮಾಡಿದ ನಾಲ್ಕು ಜನ ಸಿಬ್ಬಂದಿಗಳನ್ನು ಅಮಾನತು ಮಾಡುವಂತೆ ಒತ್ತಾಯಿಸಿದರು. ಸಂಘದ ಹಿರಿಯ ಸದಸ್ಯ ಆನಂದ ದೇವಪ್ಪ ಮಾತನಾಡಿ, ಪತ್ರಕರ್ತರ ಮೇಲೆ ಹಲ್ಲೆ ಆದರೆ ಒಂದು ಮನವಿ ಕೊಡುವಷ್ಟೆ ನಮ್ಮ ಚಟುವಟಿಕೆಯಾಗದೇ ಅದನ್ನು ಫಾಲೋ ಮಾಡಿ ತಪ್ಪಿತಸ್ತರಿಗೆ ಕ್ರಮ ಆಗುವ ವರೆಗೆ ಹೋರಾಟ ಮುಂದುವರೆಸಬೇಕೆಂದು ಕರೆ ನೀಡಿದರು. ಸಂಘದ ಜಿಲ್ಲಾ ಅಧ್ಯಕ್ಷ ಡಿ.ಕೆ ಗಣಪತಿ ಮಾತನಾಡಿ, ಪತ್ರಕರ್ತ ರವಿ ಮೇಲೆ ಹಲ್ಲೆ ಮಾಡಿರುವ ಅರಣ್ಯ ಇಲಾಖೆ ಸಿಬ್ಬಂದಿಗಳ ವಿರೂಧ್ಧ ಇಂದು ಇಡೀ ಜಿಲ್ಲೆಯಾದ್ಯಂತ ಹೋರಾಟ ನಡೆಸಲಾಗುತ್ತಿದೆ. ತಪ್ಪಿತಸ್ತರಿಗೆ ಶಿಕ್ಷೆ ಆಗುವ ವರೆಗೆ ನಮ್ಮ ಹೋರಾಟ ಮುಂದುವರೆಯುತ್ತದೆ ಎಂದರು. ಶಶಿಕಾಂತ ಶೆಂಬೆಳ್ಳಿ ಮಾತನಾಡಿದರು. ಹಲ್ಲೆಗೊಳಗಾದ ರವಿ ಭೂಸಂಡೆ ತಮ್ಮ ಮೇಲಿನ ಹಲ್ಲೆ ಬಗ್ಗೆ ವಿವರಿಸಿದರು. ಪತ್ರಕರ್ತರಾದ ಸಿದ್ರಾಮಯ್ಯ ಸ್ವಾಮಿ, ರವಿಂದ್ರ ಸ್ವಾಮಿ ಹಾಗೂ ಇತರರು ವೇದಿಕೆಯಲ್ಲಿದ್ದರು. ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಪತ್ರಕರ್ತರಾದ ಶಶಿಕಾಂತ ಬಂಬುಳಗಿ, ವಿಜಯಕುಮಾರ ಸೋನಾರೆ, ಪ್ರವಿಣ ಮೇತ್ರೆ, ಶಕ್ತಿಕಾಂತ, ಮಹಮ್ಮದ್ ಆಸಿಫ್, ಜಯಕುಮಾರ, ನಂದುಕುಮಾರ ಕರಂಜೆ, ಸುನಿಲ ಚಿಲ್ಲರ್ಗಿ ಹಾಗೂ ಇತರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು. ಭವನದ ಮುಂಭಾಗದಲ್ಲಿ ಸೇರಿ ಎಲ್ಲರು ತಪ್ಪಿತಸ್ತರ ವಿರೂಧ್ಧ ಕ್ರಮ ಜರುಗಿಸುವಂತೆ ಒತ್ತಾಯಿಸಿದರು. ನಂತರ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳಿಗೆ ಪ್ರತ್ಯೇಕ ಮನವಿ ಪತ್ರ ಸಲ್ಲಿಸಿದರು.

# ಏ.19 ಹಾಗೂ 21 ರಂದು ಲೋಕಾಯುಕ್ತ ಅಹವಾಲು ಸಭೆ

ಬೀದರ : ಏ.18: ಕರ್ನಾಟಕ ಲೋಕಾಯುಕ್ತ ಬೀದರ ಪೊಲೀಸ್ ಠಾಣೆ ವತಿಯಿಂದ ಸಾರ್ವಜನಿಕ ಕುಂದುಕೊರತೆ/ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಭಾಲ್ಕಿ, ಕಮಲನಗರ, ಬಸವಕಲ್ಯಾಣ ಹಾಗೂ ಹುಲಸೂರ ಪಟ್ಟಣಗಳ ಪ್ರವಾಸಿ ಮಂದಿರಗಳಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಬೀದರ ಲೋಕಾಯುಕ್ತ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸಾರ್ವಜನಿಕರಿಗೆ ಸರ್ಕಾರಿ ಅಧಿಕಾರಿಗಳಿಂದ ತಮಗೆ ಆಗಬೇಕಾದ ಕೆಲಸಗಳಲ್ಲಿ ವಿಳಂಬವಾಗಿದ್ದರೆ ಅಥವಾ ಅಧಿಕಾರಿಗಳು ನ್ಯಾಯ ಸಮ್ಮತವಾಗಿ ಮಾಡಿಕೊಡಬೇಕಾದ ಕೆಲಸಗಳಲ್ಲಿ ವೃಥಾ ತೊಂದರೆ ಕೊಡುತ್ತಿದ್ದರೆ ಅಥವಾ ಭ್ರಷ್ಟಾಚಾರಕ್ಕೆ ಸಂಬಂಧಿಸಿದ ದೂರುಗಳಿದ್ದಲ್ಲಿ, ಸದರಿ ಸಭೆಯಲ್ಲಿ ಸಾರ್ವಜನಿಕರು ಭಾಗವಹಿಸಿ ಸಭೆಯ ಸದುಪಯೋಗ ಪಡೆದುಕೊಳ್ಳಲು ಅವರು ತಿಳಿಸಿದ್ದಾರೆ. ಸಭೆಗಳ ವಿವರ : ಏಪ್ರಿಲ್19 ರಂದು ಬೆಳಿಗ್ಗೆ 9 ರಿಂದ 11 ಗಂಟೆಯವರೆಗೆ ಪ್ರವಾಸಿ ಮಂದಿರ ಭಾಲ್ಕಿ, ಮಧ್ಯಾಹ್ನ 12 ರಿಂದ 14 :00 ಗಂಟೆಯವರೆಗೆ ಪ್ರವಾಸಿ ಮಂದಿರ ಕಮಲನಗರದಲ್ಲಿ, ಏಪ್ರಿಲ್.21 ರಂದು ಬೆಳಿಗ್ಗೆ 9 ರಿಂದ 11 ಗಂಟೆಯವರೆಗೆ ಪ್ರವಾಸಿ ಮಂದಿರ ಬಸವಕಲ್ಯಾಣದಲ್ಲಿ ಹಾಗೂ ಮಧ್ಯಾಹ್ನ 12 ರಿಂದ 14:00 ಗಂಟೆಯವರೆಗೆ ಪ್ರವಾಸಿ ಮಂದಿರ ಹುಲಸೂರದಲ್ಲಿ ಸಭೆಗಳು ಜರುಗಲಿವೆ.

ಕಾರಣ ಸಾರ್ವಜನಿಕರು ತಮ್ಮ ಕುಂದುಕೊರತೆಗಳನ್ನು ನೇರವಾಗಿ ಬಂದು ಸಲ್ಲಿಸಲು ಅಥವಾ ಸ್ಥಳದಲ್ಲಿಯೇ ದೂರು ಅರ್ಜಿಯ ಫಾರಂ ನಂ: 1 ಮತ್ತು 2 ತೆಗೆದುಕೊಂಡು ದೂರು ನೀಡಲು ಅನುಕೂಲ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಡಿಎಸ್‌ಪಿ ಅವರ ಮೊಬೈಲ್ : 9364062571, ಪಿಐ–1 ಅವರ ಮೊಬೈಲ್ : 9364062672, ಪಿಐ–1 ಅವರ ಮೊಬೈಲ್ : 9364062675, ಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

## ವಿಜಯನಗರ ಸಾಮ್ರಾಜ್ಯ ಸಂಸ್ಥಾಪನಾ ಹಾಗೂ ಹರಿಹರ ದೇವರಾಯರ ಪಟ್ಟಾಭಿಷೇಕ ದಿನಾಚರಣೆ..!



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಗಂಗಾವತಿ ನಗರದ ಶ್ರೀ ಕೃಷ್ಣದೇವರಾಯ ವೃತ್ತದಲ್ಲಿ ಗಂಡುಗಲಿಕುಮಾರರಾಮಹೋರಾಟ ಸಮಿತಿ,ಮತ್ತುಅಖಿಲ ಕರ್ನಾಟಕ ಹರಿಹರಹಕ್ಕ – ಬುಕ್ಕನಾಯಕ ವೇದಿಕೆಯಿಂದ 689 ನೇ ಕರ್ನಾಟಕ (ವಿಜಯನಗರ) ಸಾಮ್ರಾಜ್ಯಸಂಸ್ಥಾಪನಾ ದಿನವನ್ನು. ಮತ್ತು ವಿಜಯನಗರದ ಮೊದಲ ಅರಸ ಹರಿಹರ ದೇವರಾಯರ ಪಟ್ಟಾಭಿಷೇಕ ದಿನವನ್ನು ಆಚರಿಸಿಲಾಯಿತು.

ಈ ಸಂಧರ್ಭದಲಿ ಕುಮಾರರಾಮನ ವಂಶಸ್ಥರಾದ ಹೆಚ್ ರಾಜೇಶ್ ನಾಯಕ ದೊರೆ ಮಾತನಾಡಿ,

ವೀರ ಕಂಪಿಲರಾಯ ಮತ್ತು ಗಂಡುಗಲಿ ಕುಮಾರರಾಮರ ಆಡಳಿತದ ಮುಂದುವರೆದ ಭಾಗವೇ ಸಂಗಮ ಮನೆತನದ ಹರಿಹರ,ಬುಕ್ಕರಾಯರ ಆಡಳಿತವಾಗಿದೆ ಕ್ರಿ.ಶ 1336 ರಲ್ಲಿ ಆನೆಗೊಂದಿಯಲ್ಲಿ ಕುಮಾರರಾಮನ ಕನಸಿನ ಯೋಜನೆಯಂತೆ ಇವರುಗಳು ಆಳ್ವಿಕೆಯನ್ನು ನಡೆಸಿ ನಾಡು ನುಡಿ ಧರ್ಮ ಕಲೆ ಸಾಹಿತ್ಯ ಸಂಸ್ಕೃತಿಗೆ ಭದ್ರವಾದ ಅಡಿಪಾಯವನ್ನು ಹಾಕಿಕೊಟ್ಟರು ಇವರನ್ನೆ ಅನುಸರಿಸಿದ ಸಾಳುವ ತಳವಾರ,ತುಳುವ, ಅರವೀಡು,ಮನೆತನಗಳು ಸುಭದ್ರ ಸುಸ್ಥಿರವಾದ ಸಾಮ್ರಾಜ್ಯದ ಆಡಳಿತವನ್ನು ನಡೆಸಿದ್ದಾರೆ ಎಂದರು. ಕರವೇ ಜಿಲ್ಲಾಧ್ಯಕ್ಷ ಪಂಪಣ್ಣ ನಾಯಕ,ಮಾತನಾಡಿ ಕರ್ನಾಟಕ ವಿಜಯನಗರ ಸಾಮ್ರಾಜ್ಯ ಸಂಸ್ಥಾಪನಾ ಹಾಗೂ ಹರಿಹರ ದೇವರಾಯರ ಪಟ್ಟಾಭಿಷೇಕ ದಿನಾಚರಣೆಯನ್ನು ರಾಜ್ಯ ಸರ್ಕಾರ ರಜೆಯನ್ನು ಘೋಷಿಸಿ ಆಚರಣೆಯನ್ನು ಮಾಡಬೇಕೆಂದು ಒತ್ತಾಯಿಸಿದರು.

ಇದೇ ಸಂದರ್ಭದಲ್ಲಿ ಯುವ ಸಂಶೋಧಕರಾದ ಹರನಾಯಕ ಮಾತನಾಡಿ ರಾಜ್ಯದಲ್ಲಿ ನಮ್ಮ ರಾಜರ ಸ್ಮರಣೆಯನ್ನೆ ನಾವುಗಳು ಮರೆತು ಬೇರೆ ರಾಜರನ್ನು ಹೊತ್ತು ಮೆರೆಸುತ್ತಿದ್ದೆವೆ ಇನ್ನಾದರು ಕನ್ನಡಿಗರು ಬದಲಾಗಬೇಕು ವಿಜಯನಗರ ಅರಸ ಸ್ಮರಣೆ ತುಂಬಾ ಅವಶ್ಯಕವಾಗಿದ್ದು ನಮ್ಮ ಸ್ವಾಭಿಮಾನವನ್ನು ನಾವು ಮರೆಯಬಾರದು ವಿಜಯನಗರ ಸಂಸ್ಥಾಪನಾ ದಿನಾಚರಣೆಯನ್ನು ಸರ್ಕಾರ ರಾಜ್ಯಾದ್ಯಂತ ಸರ್ಕಾರಿ ಕಾರ್ಯಕ್ರಮವಾಗಿ ಆಚರಣೆ ಮಾಡಬೇಕುಎಂದರು.ಈಸಂದರ್ಭದಲ್ಲಿ ಭೀಮರಾಯಪ್ಪ ಸಿಂಗಾಪುರ, ಪ್ರಹ್ಲಾದ ಕುಲಕರ್ಣಿ,ದೇವಪ್ಪ ವಾಲಿಕಾರ, ರವಿ ದೋತರ, ಗುಡ್ಡೆಕಲ್ಲ ಶರಣಪ್ಪ, ಕುಮಾರಿ ಸಿಂಧು, ಹತ್ತಿಮರದ ರಾಜು ನಾಯಕ, ಹೆಚ್ ,ಆರ್ ,ಕುಮಾರರಾಮ, ರಾಮಣ್ಣ ದಫೇದಾರ್,ಅರ್ಜುನ್ ಜಿ,ಆರ್, ದೇವರಾಜ್ ಹೇಮಗುಡ್ಡ,ನರಸಿಂಹ, ಅಭಿನವ ಸೂರ್ಯ ನಾಯಕ, ಇತರರು ಭಾಗವಹಿಸಿದ್ದರು.

## ಏಳನೇ ಸುತ್ತಿನ ಜಾನುವಾರು ಕಾಲುಬಾಯಿ ರೋಗ ಲಸಿಕಾ ಅಭಿಯಾನ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಏ.18: ಜಿಲ್ಲಾ ಪಂಚಾಯತ್ ಹಾಗೂ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ,ಯಾದಗಿರಿ ಇವರ ಸಹಯೋಗದಲ್ಲಿ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ 7ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಅಭಿಯಾನ ಇದೇ ಏಪ್ರಿಲ್ 21ರಿಂದ ಜೂನ್ 4 ರವರೆಗೆ ಯಶಸ್ವಿಯಾಗಿ ಹಮ್ಮಿಕೊಳ್ಳುವಂತೆ ಅಪರ್ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು 7ನೇ ಸುತ್ತಿನ ಜಾನುವಾರು ಕಾಲುಬಾಯಿ ಲಸಿಕಾ ಅಭಿಯಾನ ಕುರಿತು ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ರೈತರಿಗೆ ಆರ್ಥಿಕ ಸಂಕಷ್ಟ ಉಂಟುಮಾಡುವ ಜಾನುವಾರು ಕಾಲುಬಾಯಿ ರೋಗದಿಂದ ರಾಜ್ಯ ಹಾಗೂ ಜಿಲ್ಲೆಯನ್ನು ಮುಕ್ತ ಮಾಡುವಲ್ಲಿ ಸಹಕರಿಸಬೇಕು. ಕಾಲುಬಾಯಿ ರೋಗವು ವೈರಾಣುವಿನಿಂದ ಬರುವ ಅಂಟು ಜಾಡ್ಯವಾಗಿದ್ದು,ಲಸಿಕೆ ಹಾಕುವದೊಂದೇರೋಗನಿಯಂತ್ರಿಸಲು ಏಕೈಕ ಮಾರ್ಗವಾಗಿರುವದರಿಂದ ರೈತರು ಹಾಗೂ ಹೈನುಗಾರರು ಸಹಕರಿಸುವಂತೆ ಸಲಹೆ ನೀಡಿದರು. ಕಾಲುಬಾಯಿ ರೋಗವು ಎತ್ತು ಹೋರಿ, ಹಸು,ಎಮ್ಮೆ ಮತ್ತು ಹಂದಿಗಳಿಗೆ ತಗಲುವ ಮಾರಕ ರೋಗವಾಗಿದೆ.ಈ ಹಿನ್ನೆಲೆಯಲ್ಲಿ ಲಸಿಕೆ ಹಾಕಲು ಪಶುವೈದ್ಯರು,ಪಶು ಸಖಿಯರು, ಡಿಪ್ಲೊಮಾ ವಿದ್ಯಾರ್ಥಿಗಳು ಆಗಮಿಸಿದ ಸಂದರ್ಭದಲ್ಲಿ ಸಹಕರಿಸುವಂತೆ ತಿಳಿಸಿರುವ ಅವರು ನಿಗದಿತ ಯಾವುದೇ ಜಾನುವಾರು ಈ ಲಸಿಕೆಯಿಂದ ವಂಚಿತರಾಗದಂತೆ ಎಚ್ಚರಿಕೆ ವಹಿಸಲು ಅವರು. ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಉಪನಿರ್ದೇಶಕ ರಾಜು ದೇಶಮುಖ್ ಅವರು ಮಾತನಾಡಿ, ವರ್ಷದಲ್ಲಿ ಕನಿಷ್ಠ ಎರಡು ಬಾರಿ ಲಸಿಕೆ ಹಾಕುವದರಿಂದ ರೋಗ ತಡೆಗಟ್ಟಲು ಸಾಧ್ಯ. ಮೂರು ತಿಂಗಳ ಮೇಲ್ಪಟ್ಟ ಎಲ್ಲ ಕರುಗಳಿಗೆ ತಪ್ಪದೇ ಲಸಿಕೆ ಹಾಕಿಸಿದ ನಂತರ ಮತ್ತೊಮ್ಮೆ 3 ರಿಂದ 5 ವಾರದೊಳಗೆ ಬೂಸ್ಟರ್ ಲಸಿಕೆ ಹಾಕಿಸಲಾಗುತ್ತದೆ.ಅದರಂತೆ ದನ ಮತ್ತು ಎಮ್ಮೆ ಗಳಿಗೂ ಲಸಿಕೆ ಹಾಕಲಾಗುತ್ತಿದೆ.ಗರ್ಭಧರಿಸಿದ ಹಸು ಎಮ್ಮೆ ಗಳಿಗೂ ಲಸಿಕೆ ಹಾಕಲಾಗುತ್ತಿದ್ದು,ಹಿಂದೆ ಎಷ್ಟೇ ಬಾರಿ ಲಸಿಕೆ ಹಾಕಿಸಿದ್ದರೂ ಸಹ ಪ್ರತಿ ಆರು ತಿಂಗಳಿಗೊಮ್ಮೆ ಕೈಗೊಳ್ಳುವ ಈ ಸಾಮೂಹಿಕ ಲಸಿಕಾ ಕಾರ್ಯಕ್ರಮದಲ್ಲಿ ತಪ್ಪದೇ, ಲಸಿಕೆ ಹಾಕಿಸುವಂತೆ ಅವರು ತಿಳಿಸಿದರು. ಜಿಲ್ಲೆಯಲ್ಲಿ 20ನೇ ಜಾನುವಾರು ಗಣತಿ ಅನ್ವಯ ಒಟ್ಟು 2,90,774 ದನ , ಎಮ್ಮೆ,ಹಂದಿ ಗುರುತಿಸಿದೆ. ಈ ಲಸಿಕೆ ಕಾರ್ಯಕ್ರಮದ ಅಂಗವಾಗಿ 2,84,400 ಲಸಿಕೆ (ಡೋಜ್ಗಳಲ್ಲಿ) ಸರಬರಾಜು ಆಗಿವೆ. ಜಿಲ್ಲೆಯ 19 ಪಶು ಚಿಕಿತ್ಸಾಲಯ ಹಾಗೂ ಪಶು ಆಸ್ಪತ್ರೆ ಗಳಲಿ 178 ವ್ಯಾಕ್ಸಿನ್ ಕ್ಯಾರಿಯರ್ಸ ಲಭ್ಯ ಇವೆ.193 ಲಸಿಕೆದಾರರ ವ್ಯವಸ್ಥೆ ಮಾಡಲಾಗಿದೆ. ತುರ್ತು ಔಷಧಿಗಳು ಲಭ್ಯ ಇವೆ ಎಂದು ಸಭೆಗೆ ತಿಳಿಸಿದರು.ಸಭೆಯಲ್ಲಿ ಅಪರ್ ಜಿಲ್ಲಾಧಿಕಾರಿಗಳು ಪ್ರಚಾರ ಸಾಮಗ್ರಿಗಳನ್ನು ಬಿಡುಗಡೆ ಮಾಡಿದರು.

ಪಶುವೈದ್ಯಾಧಿಕಾರಿಗಳು ಹಾಗೂ ಇತರ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಬಸವ ಜಯಂತ್ಯೋತ್ಸವ ಅರ್ಥಪೂರ್ಣವಾಗಿ ಆಚರಣೆಗೆ ನಿರ್ಧಾರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ ಏ.18: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್,ಕನ್ನಡ ಮತ್ತು ಸಂಸ್ಕೃತಿ ಇಲಾಖೆ ,ನಗರಸಭೆ, ವೀರಶೈವ ಮಹಾಸಭಾ,ವಿವಿಧ ಸಂಘ ಸಂಸ್ಥೆಗಳು ಹಾಗೂ ಇಲಾಖೆಗಳ ಸಹಯೋಗದಲ್ಲಿ

ಜಿಲ್ಲೆಯಲ್ಲಿ ಏ.30ರಂದು ಶ್ರೀ ಬಸವ ಜಯಂತ್ಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ.

ಜಿಲ್ಲಾಧಿಕಾರಿ ಡಾ.ಸುಶೀಲ.ಬಿ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಶ್ರೀ ಬಸವಜಯಂತ್ಯೋತ್ಸವ ಆಚರಣೆ ಕುರಿತು ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು.

ಬರುವ ಏಪ್ರೀಲ್ 30 ರ ಬೆಳಿಗ್ಗೆ 10–30 ಗಂಟೆಗೆ ಈ ಜಯಂತ್ಯೋತ್ಸವವನ್ನು ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಆಚರಿಸಲು ನಿರ್ಧರಿಸಲಾಗಿದ್ದು,ಅವಶ್ಯಕ ಸಿದ್ಧತೆ ಮಾಡಿಕೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಅಂದುವೇದಿಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು,ಶಿಷ್ಟಾಚಾರದಂತೆ ಅತಿಥಿ ಗಣ್ಯರನ್ನು ಆಹ್ವಾನಿಸಲು, ವೇದಿಕೆ, ಆಹ್ವಾನ ಪತ್ರಿಕೆ, ವೇದಿಕೆ ಸಿದ್ದತೆ ಮಾಡಿಕೊಳ್ಳುವಂತೆ ಹಾಗೂ ನುರಿತ ಉಪನ್ಯಾಸಕರನ್ನು ಆಹ್ವಾನಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಸಂಜೆ ವೀರಶೈವ ಕಲ್ಯಾಣ ಮಂಟಪದಿಂದ ಆರಂಭಿಸುವ ಮೆರವಣಿಗೆ ಮಾರ್ಗದ ಕುರಿತು ಮುಂಚಿತವಾಗಿ ತಿಳಿಸಬೇಕು. ಜಿಲ್ಲಾ ,ಗ್ರಾಮ ಪಂಚಾಯತ್, ತಾಲೂಕ ಮಟ್ಟ ಹಾಗೂ ಶಾಲಾ,ಕಾಲೇಜು, ಕಚೇರಿಯಲ್ಲಿ ಜಯಂತಿ ಆಚರಣೆಗೆ ಕ್ರಮ ಕೈಗೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಕಳೆದ ಎರಡು ವರ್ಷಗಳಲ್ಲಿ ಲೋಕಸಭಾ, ವಿಧಾನ ಸಭಾ ಚುನಾವಣೆ ಗಳ ಹಿನ್ನೆಲೆಯಲ್ಲಿ ಮಹನೀಯರಜಯಂತಿ ಸರಳವಾಗಿ ಆಚರಿಸಲಾಗಿದೆ.ಈ ಬಾರಿ ಕಾರ್ಯಕ್ರಮವು ಶಿಸ್ತುಬದ್ಧವಾಗಿ ನಡೆಯಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ವಿವಿಧ ಇಲಾಖೆಯ ಅಧಿಕಾರಿಗಳು ಕಡ್ಡಾಯವಾಗಿ ಕಾರ್ಯಕ್ರಮದಲ್ಲಿ ಹಾಜರಿರಬೇಕು.ಜಯಂತಿಯಂದು ಸೂಕ್ತ ಪೊಲೀಸ್ ಬಂದೋಬಸ್ತ್, ಕುಡಿಯುವ ನೀರಿನ ವ್ಯವಸ್ಥೆ ಸೇರಿದಂತೆ ಇನ್ನಿತರ ವ್ಯವಸ್ಥೆ ಗೋಳನ್ನು ಅಚ್ಚುಕಟ್ಟಾಗಿ

ಮಾಡಲು ಅವರು ಸೂಚಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್, ಅಪರ್ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ವಿಜಯಕುಮಾರ್ ಮಡ್ಡೆ,ಸರ್ಕಾರಿ ಪದವಿ ಮಹಾವಿದ್ಯಾಲಯದ ಪ್ರಾಂಶುಪಾಲರು ಸುಭಾಷ್ ಚಂದ್ರ ಕೌಲಗಿ, ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷ ಚನ್ನಪ್ಪಗೌಡ, ಪ್ರಧಾನ ಕಾರ್ಯದರ್ಶಿ ಡಾ.ಸಿದ್ದರಾಜ ರೆಡ್ಡಿ,ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಸಿದ್ದಪ್ಪ ಹೊಟ್ಟಿ,ವೀರಶೈವ ಸಮಾಜದ ಅಧ್ಯಕ್ಷ ಅಯ್ಯಣ್ಣ ಹುಂಡೆಕಾರ್,ರೈತ ಮುಖಂಡ ಚನ್ನಾರೆಡ್ಡಿಗೌಡ,ವೀರಶೈವ ಮಹಾಸಭಾ ಯುವ ಅಧ್ಯಕ್ಷ ಸುರೇಶ್ ಜಾಕಾ,

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ, ಸಮಾಜದ ಮುಖಂಡರು, ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಏ. 30 ರೊಳಗಾಗಿ ತೆರಿಗೆ ಕಟ್ಟಿ, ಶೇ 5 ರಷ್ಟು ರಿಯಾಯಿತಿ ಪಡೆಯಿರಿ: ಲಲಿತಾ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಏ.18:ಬರುವ ಏ.30ರೊಳಗಾಗಿ ಆಸ್ತಿ ತೆರಿಗೆ ಪಾವತಿಸುವ ನಗರದ ಆಸ್ತಿಗಳ ಮಾಲಿಕರಿಗೆ ಶೇ.5ರಷ್ಟು ರಿಯಾಯಿತಿ ನೀಡಲಾಗುವುದೆಂದು.ನಗರಸಭೆ ಅಧ್ಯಕ್ಷರಾದ ಲಲಿತಾ ಅನಪೂರ್ ಹೇಳಿದರು.ನಗರಸಭೆ ಆವರಣದಲ್ಲಿ ಈ ಕುರಿತು ಮಂಗಳವಾರ ಅಭಿಮಾಯನಕ್ಕೆ ಅಧ್ಯಕ್ಷರು,ಪೌರಾಯುಕ್ತರು,ಸದಸ್ಯರು ಮುನ್ನಡಿ ಬರೆದರು.ನಗರದ ಅಭಿವೃದ್ಧಿಗೆ ಸಾರ್ವಜನಿಕರು ಕೈಜೊಡಿಸಬೇಕು, ಅಂದಾಗಲೇ ಎಲ್ಲವೂ ಸಾಧ್ಯವೆಂದು ಅಧ್ಯಕ್ಷರು ಹೇಳಿದರು.ಈಗಾಗಲೇ ವಿವಿಧ ರೀತಿಯಿಂದ ಜನರಲ್ಲಿ ಮನವರಿಕೆ ಮಾಡಲಾಗಿದ್ದು, ಕೂಡಲೇ ತೆರಿಗೆ ಕಟ್ಟುವತ್ತ ಜನರು ಮನಸ್ಸು ಮಾಡಬೇಕೆಂದರು.ನಗರಸಭೆ ಆಯುಕ್ತ ರಾದ ಉಮೇಶ ಚವ್ಹಾಣ ಮಾತನಾಡಿ. ನಗರದ ಅಭಿವೃದ್ಧಿಗೆ ಎಲ್ಲರೂ ಸಾಕಷ್ಟು ಶ್ರಮ ಹಾಕುತ್ತಿದ್ದೆವೆ. ಈಗ ಜನರು ತೆರಿಗೆ ಕಟ್ಟಿದರೇ ಅನುಕೂಲವಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ನಗರಸಭೆ ಸದಸ್ಯರಾದ ಮಂಜುನಾಥ ದಾಸನಕೇರಿ,ಕಛೇರಿ ವ್ಯವಸ್ಥಾಕರಾದ ಅಶ್ವನಿ ಚವ್ಹಾಣ, ಕಂದಾಯ ಅಧಿಕಾರಿ ಜಗದೇವಿ, ಕಂದಾಯ ನಿರಿಕ್ಷಕರಾದ ಮಾನಪ್ಪ, ಕರ ವಸುಲಿಗಾರರಾದ ನರಸಪ್ಪ, ಬೋಜಲಿಂಗ್, ಕಂಪ್ಯೂಟರ್ ಅಪರೇಟರ್ ಅಶೋಕ ಯಾದವ್ ಸೇರಿದಂತೆ ಕಛೇರಿ ಸಿಬ್ಬಂದಿಗಳು ಇದ್ದರು.

## ಪತ್ರಕರ್ತರ ಒಕ್ಕೂಟದ ಅಧ್ಯಕ್ಷರಾಗಿ ಹಾದಿಮನಿ ಪ್ರಧಾನ ಕಾರ್ಯದರ್ಶಿಗಳಾಗಿ ರಫೀಕ್ ನೇಮಕ





ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ; ಕರ್ನಾಟಕ ಪತ್ರಕರ್ತರ ಯಾದಗಿರಿ ಅಧ್ಯಕ್ಷರಾಗಿ ಕಾರ್ಯನಿರತ ಒಕ್ಕೂಟ (ರಿ) ಜಿಲ್ಲಾ ನೂತನ ಶಹಾಪುರ ವಾಣಿ ಸಂಪಾದಕ ಈರಣ್ಣ ಹಾದಿಮನಿ ಹಾಗೂ ಜಿಲ್ಲಾ ಕಾರ್ಯದರ್ಶಿಯಾಗಿ ಮಲ್ಲಮ್ಮ ನುಡಿ ಪತ್ರಿಕೆಯ ಜಿಲ್ಲಾ ವರದಿಗಾರರಾದ ಮಹ್ಮದ ರಫೀಕ್ ಅವರನ್ನು ನೇಮಕ ಮಾಡಿ ಆದೇಶಿಸಲಾಗಿದೆ ಎಂದು ಒಕ್ಕೂಟದ ರಾಜ್ಯ ಪ್ರದಾನ ಕಾರ್ಯದರ್ಶಿ ನಾರಾಯಣ ವೈದ್ಯ ತಿಳಿಸಿದ್ದಾರೆ.

ರಾಜ್ಯಧ್ಯಕ್ಷರ ನಿರ್ದೇಶನದಂತೆ ನೇಮಕಾತಿ ಆದೇಶ ನೀಡಿದ್ದು, ಮುಂಬರುವ ದಿನಗಳಲ್ಲಿ ಜಿಲ್ಲೆಯಲ್ಲಿ ಒಕ್ಕೂಟದ ಸದಸ್ಯತ್ವವನ್ನು ವೃದ್ಧಿಸುವುದು, ಜಿಲ್ಲಾ ತಾಲೂಕು ಪದಾಧಿಕಾರಿಗಳ ನೇಮಕದೊಂದಿಗೆ ಗ್ರಾಮೀಣ ಪತ್ರಕರ್ತರ ಸಮಸ್ಯಗಳಿಗೆ ಸ್ಪಂದಿಸುತ್ತಾ, ಒಕ್ಕೂಟದ ತತ್ವ ಸಿದ್ಧಾಂತವನ್ನು ಪಾಲಿಸುತ್ತಾ ಸಂಘಟನೆಯನ್ನು ಬಲಪಡಿಸುವಂತೆ ಆದೇಶದಲ್ಲಿ ತಿಳಿಸಲಾಗಿದೆ.

## ಯುವತಿ ಕಾಣೆ ಪತ್ತೆಗೆ ಪೊಲೀಸರ ಮನವಿ

ರಾಯಚೂರು ಏಪ್ರಿಲ್ 18–ಇಲ್ಲಿನ ಪಶ್ಚಿಮ ಪೊಲೀಸ್ ಠಾಣೆ ವ್ಯಾಪ್ತಿಯ ನಿವಾಸಿಯಾದ ತನಿಷ ತಂದೆ ಕಿರಣ್ ಸೋನ (18) ಎಂಬ ಯುವತಿಯು ಡಿಪ್ಲೊಮಾ ಅಂತಿಮ ವರ್ಷದಲ್ಲಿ ವಿದ್ಯಾಬ್ಯಾಸ ಮಾಡುತ್ತಿದ್ದು,ಏಪ್ರಿಲ್ 4ರ ಬೆಳಿಗ್ಗೆ 10ಗಂಟೆಗೆ ಕಾಲೇಜಿಗೆ ಹೋಗಿ ಬರುವುದಾಗಿ ಹೇಳಿ ಹೋದವಳು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಈ ಕುರಿತು ಪಶ್ಚಿಮ ಪೊಲೀಸ್ ಠಾಣೆಯಲ್ಲಿ 39/2025 ಕಲಂ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

## ಜಿಲ್ಲಾ ಉಸ್ತುವಾರಿ ಸಚಿವ ಶ್ರೀ ಶರಣಬಸಪ್ಪ ದರ್ಶನಾಪೂರ ಅವರ ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಏಪ್ರಿಲ್ 18: ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರು ಏಪ್ರಿಲ್ 19 ಹಾಗೂ ಏಪ್ರಿಲ್ 21 ಮತ್ತು 22 ರಂದು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ ಪ್ರವಾಸವು ಕೆಳಗಿನಂತಿದೆ ಎಂದು ಸಚಿವರ ಆಪ್ತ ಕಾರ್ಯದರ್ಶಿ ಡಾ.ಶ್ರೀಶೈಲ ಜಿ.ಬಿದರಕುಂದಿ ಅವರು ತಿಳಿಸಿದ್ದಾರೆ.

2025ರ ಏಪ್ರಿಲ್ 19ರ ಶನಿವಾರ ರಂದು ಬೆಳಿಗ್ಗೆ 9 ಗಂಟೆ ಕಲಬುರಗಿದಿಂದ ನಿರ್ಗಮಿಸಿ ಬೆಳಿಗ್ಗೆ 10 ಗಂ–ಟೆಗೆ ಶಹಾಪೂರ ಆಗಮಿಸಿ, ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸುವರು. ನಂತರ ಸಾರ್ವಜನಿಕರ ಕುಂದುಕೊರತೆ ವಿಚಾರಣೆ ಆಲಿಸುವರು.ತದನಂತರ ಸಂಜೆ 5 ಗಂಟೆಗೆ ಕಲಬುರಗಿ ಪ್ರಯಾಣ ಬೆಳೆಸುವರು.

2025ರ ಏಪ್ರಿಲ್ 21ರ ಸೋಮವಾರ ರಂದು ಬೆಳಿಗ್ಗೆ 9 ಗಂಟೆ ಕಲಬುರಗಿದಿಂದ ನಿರ್ಗಮಿಸಿ ಬೆಳಿಗ್ಗೆ 10.30 ಗಂಟೆಗೆ ಕೆಂಭಾವಿ ಆಗಮಿಸಿ, ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸುವರು. ನಂತರ ಸಾರ್ವಜನಿಕ ಕುಂದುಕೊರತೆಗಳ ವಿಚಾರಣೆ ಆಲಿಸುವರು.ತದನಂತರ ಸಂಜೆ 5 ಗಂಟೆಗೆ ಕಲಬುರಗಿ ಪ್ರಯಾಣ ಬೆಳೆಸುವರು.

2025ರ ಏಪ್ರಿಲ್ 22ರ ಮಂಗಳವಾರ ರಂದು ಬೆಳಿಗ್ಗೆ 10 ಗಂಟೆ ಕಲಬುರಗಿದಿಂದ ನಿರ್ಗಮಿಸಿ ಬೆಳಿಗ್ಗೆ 11 ಗಂಟೆಗೆ ಶಹಾಪೂರ ಆಗಮಿಸಿ, ಶಹಾಪೂರ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಶಹಾಪೂರ ತಾಲ್ಲೂಕು ಮಟ್ಟದ ಕೆಡಿಪಿ ಸಭೆಯಲ್ಲಿ ಭಾಗವಹಿಸುವರು. ನಂತರ ಸಂಜೆ 5 ಗಂಟೆಗೆ ಕಲಬುರಗಿ ಪ್ರಯಾಣ ಬೆಳೆಸುವರು. ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕ್ರಿಕೆಟ್ ಬೆಟ್ಟಿಂಗ್:ಆರೋಪಿ ಬಂಧನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.16–ನಗರದ ಖಾದ್ರಿ ಚೌಕ್‌ನ ಫೈನಾನ್ಸ್ ಹಿಂದುಗಡೆ ಇರುವ ಖುಲ್ಲಾ ಜಾಗದಲ್ಲಿ ಕ್ರಿಕೆಟ್ ಬೆಟ್ಟಿಂಗ್ ನಡೆಯುತ್ತಿದೆ ಎಂಬ ಮಾಹಿತಿ ಮೇಲೆ ಆರ್.ಜಿ.ನಗರ ಪೊಲೀಸ್ ಠಾಣೆಯ ಮುಖ್ಯಪೇದೆ ಸಿಕ್ರೇಶ್ವರ, ಸಿಬ್ಬಂದಿಗಳಾದ ಮಲ್ಲನಗೌಡ, ಉಮೇಶ, ಆರೇಶ, ಆತ್ಮಕುಮಾರ ಅವರು ದಾಳಿ ನಡೆಸಿ ಖಾದ್ರಿ ಚೌಕ್ ನಿವಾಸಿ ಯೂನುಸ್ ಪಾಷಾ ತಂದೆ ಎಕ್ಬಾಲ್ ಪಾಷಾ (30) ಎಂಬಾತನನ್ನು ಬಂಧಿಸಿ 2500 ರೂ.ನಗದು, ಓಪ್ಪೋ ಕಂಪನಿಯ ಅಂಡ್ರೇಡ್ ಮೊಬೈಲ್ ಜಪ್ತಿ ಮಾಡಿದ್ದಾರೆ. ಈ ಸಂಬಂಧ ಆರ್.ಜಿ.ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಅಂಬೇಡ್ಕರ ಜಯಂತಿಗೆ ಅಧಿಕಾರಿ ಗೈರು : ಅಮಾನತಿಗೆ ಸಂಘಟನೆಗಳ ಆಗ್ರಹ..

## ಸಂವಿಧಾನ ಶಿಲ್ಪಿ ಜಯಂತಿಗೆ ಹಾಜರಾಗದೆ ದರ್ಪ ಮರೆದೆ ಅಧಿಕಾರಿ



ಗ್ರಾಮಸ್ಥ..

ಶ್ರೀದೇವಿ ಗುಂಡಾಪುರ ಅವರು ಸರಿಯಾರಿ ಕರ್ತವ್ಯಕ್ಕೆ ಹಾಜರಾಗುತ್ತಿಲ್ಲ. ಒಂದು ದಿನ ಬಂದ್ರೆ ಒಂದು ವಾರ ಬಿಡ್ತಾರೆ..ಈಗಾಗಿ ಇವರನ್ನ ತೆಗೆದು ಬೇರೆಯವರನ್ನ ನಿಯೋಜಿಸಬೇಕು..



ಮೂಕಿಹಾಳ ಗ್ರಾಮ ಪಂಚಾಯತ್ ಸಭಾಂಗಣದಲ್ಲಿ ನಾಮಕವಾಸ್ತೆ ಅಂಬೇಡ್ಕರ್ ಜಯಂತಿ ಸಿಬ್ಬಂದಿಗಳಿಂದ ಆಚರಿಸಿರುವುದು..



ಮಲ್ಲಮ್ಮ ನುಡಿ ವಾರ್ತೆ

ವಿಜಯಪುರ/ತಾಳಿಕೋಟಿ : ಬಿಜಾಪುರ ಜಿಲ್ಲೆಯ ತಾಳಿಕೋಟಿ ತಾಲ್ಲೂಕಿನ ಮೂಕಿಹಾಳ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಸಂವಿಧಾನ ಶಿಲ್ಪಿ ಬಾಬಾ ಸಾಹೇಬ ಅಂಬೇಡ್ಕರ ಜಯಂತಿಗೆ ಗೈರಹಾಜರಾಗಿ ದರ್ಪ ಮರೆದಿರುವ ಘಟನೆ ತಡವಾಗಿ ಬೆಳಕಿಗೆ ಬಂದಿದೆ..

ಜಗತ್ತಿನಾದ್ಯಂತ ಸಂವಿಧಾನ ಶಿಲ್ಪಿ ಡಾ.ಬಿ ಅರ್ ಅಂಬೇಡ್ಕರ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಿದ್ರೆ ಇತ್ತ ಕಡೆ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ಶ್ರೀದೇವಿ ಗುಂಡಾಪುರ ಜಯಂತಿಗೆ ಗೈರಾಗಿ ತಮ್ಮ ಮೊಂಡತನವನ್ನು ಪ್ರದರ್ಶಿಸಿದ್ದಾರೆ ಎಂದು ಸಂಘಟನೆಗಳ ಮುಖಂಡರು ಕಿಡಿಕಾರಿದ್ದಾರೆ...

ಈಡಿ ಜಗತ್ತೆ ಎಪ್ರಿಲ್ 14 ರಂದು ಕೇಂದ್ರ ಸರ್ಕಾರದಿಂದ ಹಿಡಿದು ರಾಜ್ಯ ಸರಕಾರ ವ್ಯಾಪ್ತಿಯ ಆಡಳಿತ ಕಚೇರಿಗಳು, ಸರಕಾರ ಸ್ವಾಯತ್ತ ಸಂಸ್ಥೆಗಳು, ಸ್ಥಳೀಯ ಸಂಘ ಸಂಸ್ಥೆಗಳು, ಶಾಲಾ ಕಾಲೇಜುಗಳು ಸೇರಿದಂತೆ ಈಡಿ ರಾಷ್ಟವೆ ಸಂವಿಧಾನ ಶಿಲ್ಪಿ ಬಾಬಾ ಸಾಹೇಬರ ಜಯಂತಿಯನ್ನು ವಿಜೃಂಭನೆಯಿಂದ ಆಚರಿಸುತ್ತಾರೆ.

ಅದರಂತೆ ರಾಜ್ಯ ಸರಕಾರ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಕೂಡ ಆಯಾ ಆಯಾ ವಿಭಾಗದ ಕಚೇರಿಯ ಆಡಳಿತ ಮುಖ್ಯಸ್ಥರಿಗೆ ಅಂಬೇಡ್ಕರ್ ಜಯಂತಿಯನ್ನು ಕಡ್ಡಾಯವಾಗಿ ಆಚರಿಸುವಂತೆ ನಿರ್ದೇಶನ ಕೂಡ ನೀಡಲಾಗಿರುತ್ತದೆ.

ಅದರೆ ಮೂಕಿಹಾಳ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ಶ್ರೀದೇವಿ ಗುಂಡಾಪುರ ಜಯಂತಿಗೆ ಹಾಜರಾಗದೆ ನಾಮಕವಾಸ್ಥೆ ಜಯಂತಿಯನ್ನು ಆಚರಿಸಿ ಸಂವಿಧಾನ ಶಿಲ್ಪಿ ಬಾಬಾ ಸಾಹೇಬ್ ಅಂಬೇಡ್ಕರಗೆ ಅವಾಮಾನಿಸಿದ್ದಾರೆ ಎಂದು ಪರಿಶಿಷ್ಟ ಜಾತಿಯ ಸಮುದಾಯದ ಮುಖಂಡರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

### ಹೆಸರು ಹೇಳಲು ಬಯಸದ ಸದಸ್ಯ ಮೂಕಿಹಾಳ ಗ್ರಾಮ ಪಂಚಾಯತಿ

ಪಂಚಾಯತ್ ಅಭಿವೃದ್ಧಿ ಅಧಿಕಾರಿ ಶ್ರೀದೇವಿಯವರು ಅಂಬೇಡ್ಕರ್ ಜಯಂತಿ ಆಚರಣೆಗೆ ಬಂದಿಲ್ಲ..ನಾವು ಕೂಡ ಸಿಬ್ಬಂದಿಗಳಿಗೆ ಕೇಳಿದಿವಿ. ಆದ್ರೆ ಸಬೂಬು ಉತ್ತರ ನೀಡಿ ಜಾರಿಕೊಂಡರು. ಈ ರೀತಿ ಅಧಿಕಾರ ದುರ್ಬಳಕೆ ಮಾಡಿಕೊಂಡು ಅಂಬೇಡ್ಕರ ಜಯಂತಿಗೆ ಗೈರಾಗಿರುವುದು ಸರಿಯಲ್ಲ.. ಸರಿಯಾಗಿ ಫೋನ್ ಮಾಡಿದ್ರೂ ಫೋನ ರಿಸೀವ ಮಾಡುವುದಿಲ್ಲ. ಎಲ್ಲಾ ಅಭಿವೃದ್ಧಿ ಕೆಲಸಗಳು ಸ್ಥಗಿತಗೊಂಡಿವೆ..

–ಹುಲಗಪ್ಪ ನಾಗೂರ ಸಾಮಾಜಿಕ ಹೋರಾಟಗಾರ..

ಪಂಚಾಯತ ಅಭಿವೃದ್ಧಿ ಅಧಿಕಾರಿ ಶ್ರೀದೇವಿ ಗುಂಡಾಪುರ ಅವರು ಸರಿಯಾರಿ ಕರ್ತವ್ಯಕ್ಕೆ ಹಾಜರಾಗುತ್ತಿಲ್ಲ. ಒಂದು ದಿನ ಬಂದ್ರೆ ಒಂದು ವಾರ ಬಿಡ್ತಾರೆ..ಆದ್ರೆ ಅಂಬೇಡ್ಕರ ಜಯಂತಿಗೆ ಹಾಜರಾಗದೆ ತಮ್ಮ ಕರ್ತವ್ಯವನ್ನು ನಿರ್ಲಕ್ಷಿಸಿದ್ದಾರೆ. ಈಗಾಗಿ ಇವರನ್ನ ತೆಗೆದು ಬೇರೆಯವರನ್ನ ನಿಯೋಜಿಸಬೇಕು..

ಕರ್ನಾಟಕ ಗ್ರಾಮ ಸ್ವ–ರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 8 (3) ರನ್ವಯ ಗ್ರಾಮ ಆಡಳಿತಾಧಿಕಾರಿ ಶ್ರೀದೇವಿ ಗುಂಡಾಪುರ ಕರ್ತವ್ಯ,ಅಧಿಕಾರವನ್ನು ದುರ್ಬಳಕೆ ಮಾಡಕೊಂಡು ನಾಮಕವಾಸ್ತೆ ಅಂಬೇಡ್ಕರ್ ಜಯಂತಿ ಆಚರಣೆ ಮಾಡಿ ಕೈತೊಳೆದುಕೊಂಡಿದ್ದಾರೆ ಎಂದು ಗ್ರಾಮಸ್ಥರು ಗರಂ ಆಗಿದ್ದಾರೆ..

ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಶ್ರೀದೆವಿ ಗುಂಡಾಪುರ ಮೇಲೆ ಕರ್ನಾಟಕ ನಾಗರಿಕ ಸೇವಾ ನಿಯಮ 1957ನಿಯಮ 10(1)( ಡಿ) ಅಡಿ ಹಾಗೂ ಕರ್ನಾಟಕ ನಾಗರಿಕ ಸೇವಾ ನಡತೆ ನಿಮಯಾವಳಿ 2021ರಡಿಯಲ್ಲಿ ಇಲಾಖೆ ವಿಚಾರಣೆಯಲ್ಲಿಟ್ಟು ಕೂಡಲೇ ಅಮಾನತು ಮಾಡಬೇಕೆಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ..

# 6ನೇ ತರಗತಿಗೆ ಪ್ರತಿಷ್ಠಿತ ಖಾಸಗಿ ಶಾಲೆಗಳಲ್ಲಿ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.18–ಪರಿಶಿಷ್ಟವರ್ಗಗಳ ಕಲ್ಯಾಣ ಇಲಾಖಾವತಿಯಿಂದ 2025–26ನೇ ಸಾಲಿಗೆ 5ನೇ ತರಗತಿಯಲ್ಲಿ ಶೇ.60 ಕ್ಕಿಂತ ಹೆಚ್ಚು ಅಂಕ ಪಡೆದಿರುವ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ 6ನೇ ತರಗತಿಗೆ ಪ್ರತಿಷ್ಠಿತ ಖಾಸಗಿ ಶಾಲೆಗಳಲ್ಲಿ ಅರ್ಹತಾ ಪರೀಕ್ಷೆಯ ಮೂಲಕ ಆಯ್ಕೆ ಮಾಡಲು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಏ.19 ರಿಂದ ಅರ್ಜಿಗಳನ್ನು ಜಿಲ್ಲಾ ಹಾಗೂ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗಳಲ್ಲಿ ನೀಡಲಾಗುವುದು. ಭರ್ತಿ ಮಾಡಿದ ಅರ್ಜಿಗಳನ್ನು ಮೇ 03 ರೊಳಗೆ ಇದೇ ಕಚೇರಿಗಳಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ನಗರದ ವಾಲ್ಮೀಕಿ ಭವನದ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಹಾಗೂ ಆಯಾ ತಾಲ್ಲೂಕಿನ ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಅಥವಾ ದೂ.08392–242453, ಮೊ.9986302091 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

# ಸಿಡಿಲು ಬಡಿತಕ್ಕೆ14 ಕುರಿ ಬಲಿ



ಮಲ್ಲಮ್ಮ ನುಡಿ ವಾರ್ತೆ

ಶಹಪುರ (ಗ್ರಾ) : ಮೊನ್ನೆ ರಾತ್ರಿ ಸುರಿದ ಧಾರಾಕಾರ ಮಳೆ, ಗುಡುಗು, ಸಿಡಿಲಿಗೆ 14 ಕುರಿಗಳು ಮೃತಪಟ್ಟಿರುವ ಘಟನೆ ತಾಲೂಕಿನ ಶಾರದಳ್ಳಿ ಗ್ರಾಮದ ಹೊರವಲಯದಲ್ಲಿ ಸಂಭವಿಸಿದೆ. ಸಂಚಾರಿ ಕುರಿಗಾಯಿಗಳಾದ ಸುರಪುರ ತಾಲೂಕಿನ ದೇವಿಕೆರಿ ಗ್ರಾಮದ ಹಣಮಂತ ತಂದೆ ನಿಂಗಪ್ಪಗೆ ಸೇರಿದ 7 ಕುರಿಗಳು, ಲಕ್ಷ್ಮೀ ಗಂಡ ಯಂಕಪ್ಪ ಅವರಿಗೆ ಸೇರಿದ 7 ಕುರಿಗಳು ಬಲಿಯಾಗಿವೆ.

ತಡರಾತ್ರಿ ಎರಡು ಗಂಟೆಗಳ ಕಾಲ ಸುರಿದ ಜೋರಾದ ಮಳೆ ಹಾಗೂ ಬಿರುಗಾಳಿಗೆ ಮರಗಳು ನೆಲಕ್ಕುರುಳಿವೆ. ಘಟನೆಯಿಂದ ಕೆಲಕಾಲ ವಿದ್ಯುತ್ ಕಡಿತಗೊಂಡಿತ್ತು. ಕುರಿ ಕಾಯುತ್ತಿದ್ದೆ ರೈತರು ಸನಿಹದಲ್ಲೇ ಇದ್ದರೂ ಅದೃಷ್ಟವಶಾತ್ತಾಣಪಾಯದಿಂದ ಪಾರಾಗಿದ್ದಾರೆ. ಸ್ಥಳಕ್ಕೆ ಭೇಟಿ ನೀಡಿದ ಕುರಿ ಮತ್ತು ಮೇಕೆ ಸಾಕಾಣ–ಕೆದಾರರ ಮಹಾಮಂಡಲದ ನಿರ್ದೇಶಕರಾದ ಶಾಂತಗೌಡ ಪಾಟೀಲ್ನಾ ಗನಟಿಗಿ, ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದಿಂದ ಪರಿಹಾರ ಒದಗಿಸುವ ಭರವಸೆ ನೀಡಿದರು. ಘಟನೆ ಬಗ್ಗೆ ತಿಳಿಯುತ್ತಿದ್ದಂತೆ ಪಶು ಸಂಗೋಪನ ಇಲಾಖೆಯ ಅಧಿಕಾರಿಗಳಾದ ಡಾ.ಅಂಬರೀಶ್, ಗ್ರಾಮ ಆಡಳಿತ ಅಧಿಕಾರಿ ಸಂತೋಷ್, ತಾಲೂಕು ಪಂಚಾಯಿತಿ ಮಾಜಿ ಸದಸ್ಯ ಶರಬಣ್ಣ ರಸ್ತಾಪುರ ಸ್ಥಳಕ್ಕೆ ಭೇಟಿ ನೀಡಿದರು.

ಶರಣಬಸವ ಯಾದವ ನಾಗನಟಗಿ, ಎಲ್ಲಪ್ಪ ಕುರಿ ನಾಗನಟಗಿ, ತಿರ್ಲಪ್ಪ ಕುರಿ, ಯಲ್ಲಪ್ಪ ದೊಡ್ಡಮನಿ ಇತರರಿದ್ದರು.

# ಮಾನವಿತೆ ಮೆರೆದ ದೇವಿ ನಗರದ ಯುವಕರು



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ; ನಗರದ ಜೀವೇಶ್ವರ ಕಲ್ಯಾಣ ಮಂಟಪದ ಎದುರು ಬಸ್ ಡಿಕ್ಕಿ ಹೊಡೆದು ಸಾವನ್ನಪ್ಪಿದ ಮಂಗವೊಂದಕ್ಕೆ ದೇವಿ ನಗರ ಬಡವಣೆಯ ಯುವಕರು ಅಂತ್ಯಕ್ರಿಯೆ ನಡೆಸಿದ್ದು, ಮಾನವೀಯತೆ ಇನ್ನೂ ಜೀವಂತವಾಗಿದೆ ಎನ್ನುವುದಕ್ಕೆ ಈ ಘಟನೆ ನೈಜ ಸಾಕ್ಷಿಯಾಗಿದೆ.

ಕೆಲವೊಂದು ಸಮಯದಲ್ಲಿ ಮನುಷ್ಯರು ಸತ್ತರು ತಿರುಗಿ ನೋಡುವವರು ಇರೊದಿಲ್ಲ. ಶವಗಳಿಗೆ ವಿಧಿಪೂರ್ವಕ ಹಾಗಿರಲಿ, ಸರಿಯಾಗಿ ಮಣ್ಣು ಮಾಡೋರು ಇರಲ್ಲ. ಅದೆಷ್ಟೋ ಅನಾಥ ಶವವಗಳನ್ನು ಪೊಲೀಸರು, ನಗರಸಭೆಯವರು ಮಣ್ಣು ಮಾಡಿ ಬಿಡ್ತಾರೆ. ಇಂತಹದರಲ್ಲಿ ಅಪಘಾತದಲ್ಲಿ ಸತ್ತ ಮಂಗವೊಂದಕ್ಕೆ ಯುವಕರೆಲ್ಲ ಕೂಡಿ ಹಣ ಸೇರಿ ಮಂಗನನ್ನು ಅಲಂಕರಿಸಿ, ಪೂಜಿಸಿದರು. ಮಂಗನ ಸಾವಿಗೆ ಜನರು ಮರುಗಿದರು. ಮಂಗ ದೇವರು, ಹನುಮ ಎಂದು ನಂಬಿಕೆ ಹಿನ್ನಲೆಯಲ್ಲಿ ಬಡವಣೆಯ ಯುವಕರೆಲ್ಲರೂ ಸೇರಿ ನಗರದ ಪ್ರಮುಖ ಬೀದಿಗಳಲ್ಲಿ ಕೇಸರಿ ಧ್ವಜ, ಡಿಜೆ ಅಳವಡಿಸಿ ಆಂಜನೇಯ ಹಾಡುಗಳನ್ನು ಹಾಕಿ ಭರ್ಜರಿ ಮೆರವಣಿಗೆ ಮಾಡಿದರು. ಯುವಕರೆಲ್ಲರೂ ಮೃತಪಟ್ಟ ಕೋತಿಯ ಮೃತದೇಹವನ್ನು ಪೂಜೆ ಮಾಡಿ ವಿಧಿ ವಿಧಾನಗಳ ಮೂಲಕ ಅಂತ್ಯಕ್ರಿಯೆ ನೇರವೇರಿಸಿದ್ದಾರೆ.

ಪ್ರತಿನಿತ್ಯ ಬಡಾವಣೆಯಲ್ಲಿಯೇ ಓಡಾಡಿಕೊಂಡಿದ್ದ ಮಂಗ, ಜನರೊಂದಿಗೆ ಉತ್ತಮ ಒಡನಾಟ ಹೊಂದಿತ್ತು. ಈ ಹಿನ್ನಲೇ ಈ ಮಂಗನ ಸಾವಿನಿಂದ ಬಡಾವಣೆಯ ಜನರು ಮನನೊಂದಿದ್ದರು. ಬಡಾವಣೆಯ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸುವ ಮೂಲಕ ಕೋತಿಯನ್ನು ಸಮೀಪದ ಸರ್ಕಾರಿ ಜಾಗದಲ್ಲಿ ಅಂತ್ಯಕ್ರಿಯೆ ನಡೆಸಲಾಯಿತು. ಈ ಸಂದರ್ಭದಲ್ಲಿ ಮಲ್ಲಪ್ಪ ದೊಡ್ಮನಿ, ಮಾನಪ್ಪ ಗುಡೇನೂರ, ಬಸವರಾಜ ಕಣೆಕಲ್, ಗುರು ದೊಡ್ಮನಿ, ನಾಗಪ್ಪ ಹುಲಿಮನಿ ಸೇರಿದಂತೆ ಬಡವಣೆಯ ಯುವಕರು ಇದ್ದರು.

ಮಾನವೀಯ ಗುಣಕ್ಕೆ ಶ್ಲಾಘನೆ;

ಮೆರವಣಿಗೆ ವೇಳೆ ವಿಡಿಯೋವನ್ನು ಸೆರೆಹಿಡಿದ ಕೇಲ ಯುವಕರು ಸೊಶಿಯಲ್ ಮೀಡಿಯಾಗಳಲ್ಲಿ ಹರಿಬಿಟ್ಟಿದ್ದು ಸದ್ಯ ಫೋ–ಟೊ ಮತ್ತು ವಿಡಿಯೋಕ್ಕೆ ಯುವಕರ ಮಾನವೀಯತೆ ಗುಣಕ್ಕೆ ನಗರದ ಜನತೆ ಶ್ಲಾಘನೆ ವ್ಯಕ್ತಪಡಿಸುತ್ತಿದ್ದಾರೆ.

# ಈಜಲು ಹೋದ ಯುವಕನ ಸಾವು

ಮಲ್ಲಮ್ಮ ನುಡಿ ವಾರ್ತೆ

ಬೀದರ್:ಏ.18: ಈಜಲು ಹೋದ ಯುವಕನೋರ್ವ ಮುಳುಗಿ ನೀರು ಪಾಲಾದ ಘಟನೆ ನಗರದ ಝರಣಾ ಮಂದಿರದ ಹತ್ತಿರವಿರುವ ಈಜುಕೊಳದಲ್ಲಿ ಗುರುವಾರ ಸಾಯಂಕಾಲ ನಡೆದಿದೆ.

ನಗರದ ಅಬ್ದುಲ್ ಫೈಜ್ ದರ್ಗಾದ ನಿವಾಸಿ ಸಯ್ಯದ್



ಅಫಾನ್ (19) ಮೃತಪಟ್ಟ ಯುವಕ ಎಂದು ಗುರುತಿಸಲಾಗಿದೆ.

ಇಬ್ಬರು ಗೆಳೆಯರ ಜೊತೆ ಈಜುಕೊಳದಲ್ಲಿ ಸ್ನಾನಕ್ಕಿಳಿದ್ದು, ಈ ವೇಳೆ ನೀರಿನಲ್ಲಿ ಜಿಗಿಯುವ ವೇಳೆ ತಲೆಗೆ ಪೆಟ್ಟು ಬಿದ್ದು ಸಾವನಪ್ಪಿದ್ದಾನೆ.

ಈ ಘಟನೆಗೆ ಸಂಬಂಧಿಸಿದಂತೆ ಮಾರ್ಕೆಟ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರೆದಿದೆ.

# ಕಂಪ್ಲಿ: ಏ.19 ರಂದು ವಿದ್ಯುತ್ ಗ್ರಾಹಕರ ಕುಂದು ಕೊರತೆ ಸಭೆ

ಮಲ್ಲಮ್ಮ ನುಡಿ ವಾರ್ತೆ


ಬಳ್ಳಾರಿ,ಏ.18–ಕಂಪ್ಲಿ ಜೆಸ್ಕಾಂ ಕಾರ್ಯ ಮತ್ತು ಪಾಲನಾ ಉಪ ವಿಭಾಗ ಕಚೇರಿಯಲ್ಲಿ ಏ.19 ರಂದು ಮಧ್ಯಾಹ್ನ 12. ಗಂಟೆಗೆ ವಿದ್ಯುತ್ ಗ್ರಾಹಕರ ಕುಂದು ಕೊರತೆಗಳ ಸಭೆ ಆಯೋಜಿಸಲಾಗಿದ್ದು, ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರು ಭಾಗವಹಿಸಿ ತಮ್ಮ ದೂರುಗಳನ್ನು ಬಗೆಹರಿಸಿಕೊಳ್ಳಬಹುದು ಎಂದು ಕಂಪ್ಲಿ ಜೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಬೇವಿನಹಳ್ಳಿಯಲ್ಲಿ ಸಾಮೂಹಿಕ ವಿವಾಹ,ತುಲಾಭಾರ ಮತ್ತು ಧರ್ಮಸಭೆ.

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ತಾಲ್ಲೂಕಿನ ಬೇವಿನಹಳ್ಳಿಯಲ್ಲಿ ಶ್ರೀ ಬಸವನಗೌಡ್ರಪಾಟೀಲ್ ಅವರ ಕುಟುಂಬದ ವತಿಯಿಂದ ಚಿಕೇನಕೊಪ್ಪ ಶರಣರ ಸಾಮೂಹಿಕ ವಿವಾಹಗಳು ಜರುಗಲಿದ್ದು ಬಳಗಾನೂರ ಶ್ರೀ ಶಿವಶಾಂತವೀರ ಶರಣರು ಮತ್ತು ಶ್ರೀ ನಾಗಭೂಷಣ ಶಿವಾಚಾರ್ಯ ಮಹಾಸ್ವಾಮಿಗಳ ತುಲಾಭಾರ ಕಾರ್ಯಕ್ರಮ. ಸಾಧಕರಿಗೆ ಶರಣಶ್ರೀ ಪ್ರಶಸ್ತಿ, ಗುರು ಮಾತೆಯರಿಗೆ ಗೌರವ ಗುರುವಂದನಾ ಮತ್ತು ಜಾನಪದ ಕಲಾವಿದರಾದ ಗವಿಸಿದ್ದಯ್ಯ ಹಳ್ಳಿಕೇರಿಮಠ ಮತ್ತು ಮಹಿಳಾ ಧ್ವನಿ ಸಂಸ್ಥೆ ಕೊಪ್ಪಳ ಕಲಾ ಬಳಗದಿಂದ ಸಂಗೀತ ಕಾರ್ಯಕ್ರಮ ಜರುಗುವುದು ಎಂದು ತಿಳಿಸಿದ್ದಾರೆ.

# ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶೇಖರಗೌಡ ರಾಮತ್ನಾಳ ಭೇಟಿ:ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳ ತಾಲೂಕಿ ಟಣಕನಕಲ್ಲ ಗ್ರಾಮದಲ್ಲಿ ಮಕ್ಕಳ ನ್ಯಾಯ(ಮಕ್ಕಳ ಪೋಷಣೆ ಮತ್ತು ರಕ್ಷಣೆ) ಕಾಯ್ದೆ–2015 "ಮಿಷನ್ ವಾತ್ಸಲ್ಯ"ದಡಿಯಲ್ಲಿ ಜಿಲ್ಲೆಯಲ್ಲಿ ನಿರ್ಮಾಣವಾಗುತ್ತಿರುವ ಮಕ್ಕಳ ಪಾಲನಾ ಕೇಂದ್ರಗಳಾದ "ಸರಕಾರಿ ಬಾಲಕರ ಬಾಲಮಂದಿರ ಮತ್ತು ಬಾಲಕಿಯರ ಬಾಲಮಂದಿರ" ಕಟ್ಟಡ ನಿರ್ಮಾಣ ಸ್ಥಳಕ್ಕೆ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌಡ ಜಿ. ರಾಮತ್ನಾಳ ಅವರು ಮಂಗಳವಾರ ಭೇಟಿ ನೀಡಿ, ಕಾಮಗಾರಿಯನ್ನು ವೀಕ್ಷಿಸಿದರು.

ಮಕ್ಕಳ ಪಾಲನಾ ಕೇಂದ್ರಗಳಲ್ಲಿ "ಪೋಷಣೆ ಮತ್ತು ರಕ್ಷಣೆ ಅವಶ್ಯವಿರುವ ಮಕ್ಕಳ, ಆರೈಕೆ ಮತ್ತು ರಕ್ಷಣೆ ಕೈಗೊಳ್ಳುತ್ತಿದ್ದು, ಜಿಲ್ಲೆಯಲ್ಲಿ ಪೋಷಣೆ ಮತ್ತು ರಕ್ಷಣೆ ಅವಶ್ಯವಿರುವ ಬಹಳಷ್ಟು ಮಕ್ಕಳು ಇದ್ದು, ಈ ಬಾಲಮಂದಿರಗಳು ಜಿಲ್ಲೆಗೆ ಅತ್ಯವಶ್ಯಕವಾಗಿವೆ. ಸದ್ಯ ಬಾಲಮಂದಿರಗಳು ಬಾಡಿಗೆ ಕಟ್ಟದಲ್ಲಿ ಕಾರ್ಯನಿರ್ವಹಿಸುತ್ತಿವೆ. ಇದನ್ನು ಗಮನಿಸಿ ಸರಕಾರವು ಎರಡು ಬಾಲ ಮಂದಿರಗಳ ನಿರ್ಮಾಣಕ್ಕೆ ಅನುದಾನ ಬಿಡುಗಡೆಗೊಳಿಸಿ ಮಂಜುರಾತಿ ಆದೇಶ ನೀಡಿದೆ. ಬಾಲಮಂದಿರಗಳ ನಿರ್ಮಾಣಕ್ಕೆ ಶಿಲಾನ್ಯಾಸವಾಗಿ ವರ್ಷಗಳು ಕಳೆದಿದ್ದು, ಕೇವಲ ಬಾಲಕರ ಬಾಲಮಂದಿರ ಕಟ್ಟಡವು ಬುನಾದಿ ಹಂತದಲ್ಲಿದೆ. ಬಾಲಕಿಯರ ಬಾಲಮಂದಿರವು ನಿರ್ಮಾಣ ಕಾರ್ಯ ಆರಂಭಿಸದಿರುವ ಬಗ್ಗೆ ತೀವ್ರ ಅಸಮಾದಾನವನ್ನು ವ್ಯಕ್ತಪಡಿಸಿದ ಅವರು, ಈ ಕಟ್ಟಡಗಳ ನಿರ್ಮಾಣ ಕಾಮಗಾರಿಯನ್ನು ಶೀಘ್ರವಾಗಿ ಆರಂಭಿಸಿ, ಉತ್ತಮ ಗುಣಮಟ್ಟದ ಕಟ್ಟಡವನ್ನು ನಿರ್ಮಾಣ ಮಾಡುವಂತೆ ಕೊಪ್ಪಳ ನಿರ್ಮಿತಿ ಕೇಂದ್ರದ ಸಹಾಯಕ ಅಭಿಯಂತರರಿಗೆ ಸೂಚಿಸಿದರು. ತಪ್ಪಿದಲ್ಲಿ ನಿರ್ಮಾಣ ಕಾಮಗಾರಿಯ ಗುತ್ತಿಗೆಯನ್ನು ರದ್ದುಪಡಿಸಿ, ಬೇರೆ ಸಂಸ್ಥೆಗೆ ನೀಡುವಂತೆ ಕೊಪ್ಪಳ ಜಿಲ್ಲಾಧಿಕಾರಿಗಳಿಗೆ ವರದಿ ನೀಡುವುದಾಗಿ ಎಚ್ಚರಿಸಿದರು.

ಈ ಕಟ್ಟಡ ನಿರ್ಮಾಣ ಕಾಮಗಾರಿಗೆ ಮತ್ತು ಮುಂದಿನ ದಿನಗಳಲ್ಲಿ ಮಕ್ಕಳಿಗೆ ಅವಶ್ಯಕವಾಗಬಹುದಾದ ನೀರಿನ ಸೌಲಭ್ಯವನ್ನು ಒದಗಿಸುವಂತೆ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ತಿಳಿಸಿದರು. ಕಟ್ಟಡ ನಿರ್ಮಾಣ ಕಾಮಗಾರಿಗೆ ಜಿಲ್ಲಾಧಿಕಾರಿಗಳು ನೀಡಿರುವ ಭೂಮಿಯು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಹೆಸರಿನಲ್ಲಿದ್ದು, ಕೇಂದ್ರ ಕಛೇರಿಯ ಸುತ್ತೋಲೆಯಂತೆ ಈ ಜಮೀನನ್ನು ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ ಬೆಂಗಳೂರುರವರ ಹೆಸರಿನಲ್ಲಿ ವರ್ಗಾಯಿಸುವಂತೆ ತಹಶೀಲ್ದಾರರಿಗೆ ತಿಳಿಸಿದರು.

ಈ ಭೇಟಿ ಅವಧಿಯಲ್ಲಿ ಕೊಪ್ಪಳ ತಹಶೀಲ್ದಾರ ವಿಠ್ಠಲ ಚೌಗಲಾ, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಾಂತಸ್ವಾಮಿ ಪೂಜಾರ, ಓಜನಹಳ್ಳಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಹುಚ್ಚಪ್ಪ ಭೋವಿ, ಕೊಪ್ಪಳ ನಿರ್ಮಿತಿ ಕೇಂದ್ರದ ಸಹಾಯಕ ಅಭಿಯಂತರರು, ಓಜನಹಳ್ಳಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಶಿವಬಸಪ್ಪ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಹಂಪಿ ಉತ್ಸವದಲ್ಲಿ ಕರಾಟೆ ಪ್ರದರ್ಶಿಸಿದ ಅಗಸ್ತ್ಯನಿಗೆ

# 15 ಸಾವಿರ ರೂ. ಗೌರವ ಧನ ವಿತರಣೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ಗೌರಿ ಅಂಗಳದ ಬಾಲಕ ಅಗಸ್ತ್ಯನಿಗೆ ಹಂಪೆ ಉಸ್ತವದಲ್ಲಿ ಭಾಗವಹಿಸಿದ್ದಕ್ಕೆ ವಿಜಯನಗರ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಬುಧವಾರ 15 ಸಾವಿರ ರೂ. ಚೆಕ್ ವಿತರಿಸಲಾಯಿತು.

ಹಂಪಿ ಉತ್ಸವದಲ್ಲಿ ಸ್ವಯಂ ರಕ್ಷಣಾ ಕೌಶಲ್ಯ ತರಬೇತಿ ಉತ್ತಮ ಪ್ರದರ್ಶನ ನೀಡಿ ಸೈ ಎನ್ನಿಸಿಕೊಂಡಿರುವ ಅಗಸ್ತ್ಯ ಅರಕೇರಿಗೆ ಭಾಗ್ಯನಗರ ಪಪ ಉಪಾಧ್ಯಕ್ಷರಾದ ಹೊನ್ನೂರ ಸಾಬ ಬಯಾಪುರ, ಕಲಂ ಪಬ್ಲಿಕ್ ಸ್ಕೂಲ್ ಅಧ್ಯಕ್ಷರಾದ ಮೋಹಮ್ಮದ ಅಲಿಮುದ್ದಿನ ಹಾಗೂ ಪ್ರಾಚಾರ್ಯರಾದ ರೂಹಿ ಅವರು ಅಭಿನಂದಿಸಿದರು.

ರಾಯಚೂರ ಜಿಲ್ಲೆಯಲ್ಲಿ ಏಪ್ರೀಲ್ 21 ರಿಂದ ಮೇ 4ರವರೆಗೆ ಲಸಿಕಾ ಕಾರ್ಯಕ್ರಮ

# ಉಚಿತ ಸಾಮೂಹಿಕ ಲಸಿಕಾ ಕಾರ್ಯದ ಸದುಪಯೋಗಕ್ಕೆ ಸಚಿವರ ಸಲಹೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರಿಲ್ 17: ಪಶುಪಾಲನೆ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯಿಂದ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ 7ನೇ ಸುತ್ತಿನ ಕಾಲು ಬಾಯಿ ರೋಗದ ಉಚಿತ ಸಾಮೂಹಿಕ ಲಸಿಕಾ ಹಾಗೂ ಚರ್ಮಗಂಟು ರೋಗದ ಲಸಿಕಾ ಕಾರ್ಯಕ್ರಮವನ್ನು ಜಿಲ್ಲೆಯಲ್ಲಿ ಏಪ್ರಿಲ್ 21ರಿಂದ ಮೇ 04ರವರೆಗೆ ಹಮ್ಮಿಕೊಳ್ಳಲಾಗಿದ್ದು, ರೈತರು ಕಾರ್ಯಕ್ರಮಕ್ಕೆ ಸಹಕರಿಸುವಂತೆ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣ ಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಹೇಳಿದರು.

ಇತ್ತಿಚೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ 7ನೇ ಸುತ್ತಿನ ಕಾಲು ಬಾಯಿ ರೋಗದ ಉಚಿತ ಸಾಮೂಹಿಕ ಲಸಿಕಾ ಹಾಗೂ ಚರ್ಮಗಂಟು ರೋಗದ ಲಸಿಕಾ ಕಾರ್ಯಕ್ರಮದ ಪೋಸ್ಟರ್ ಬಿಡುಗಡೆ ಮಾಡಿ ಅವರು ಮಾತನಾಡಿದರು.

ಕಾರ್ಯಕ್ರಮದಡಿ ಇಲಾಖಾ ಸಿಬ್ಬಂದಿ ತಮ್ಮ ಹಳ್ಳಿಗೆ ಲಸಿಕೆ ಹಾಕಲು ಬಂದಾಗ ಎಲ್ಲಾ ರೈತ ಬಾಂಧವರು ತಮ್ಮಲ್ಲಿರುವ ಎಲ್ಲಾ ದನ ಮತ್ತು ಎಮ್ಮೆ ಮತ್ತು 3 ತಿಂಗಳ ಮೇಲ್ಪಟ್ಟ ಕರುಗಳಿಗೆ ಲಸಿಕೆ ಹಾಕಿಸಿ ಸಾಂಕ್ರಾಮಿಕ ರೋಗದಿಂದಾಗುವ ಆರ್ಥಿಕ ನಷ್ಟವನ್ನು ತಪ್ಪಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ತುಕಾರಾಂ ಪಾಂಡ್ವೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ, ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ಆಯುಕ್ತರಾದ ಗಜಾನನ ಬಾಳೆ, ಬಸವಣೆಪ್ಪಾ ಕಲಶೆಟ್ಟಿ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಾಪಾತ್ರ, ಪಶುಪಾಲನಾ ಮತ್ತು ಪಶುವೈದ್ಯಸೇವಾ ಇಲಾಖೆಯ ಉಪ ನಿರ್ದೇಶಕರಾದ ಡಾ.ಅಶೋಕ ಕೋಲಾಕರ್ ಸೇರಿದಂತೆ ಇತರರು ಇದ್ದರು.

# ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಭತ್ತ & ಬಿಳಿಜೋಳ ಖರೀದಿ ಕೇಂದ್ರಗಳ ಪ್ರಾರಂಭ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : 2024–25ನೇ ಸಾಲಿನ ಹಿಂಗಾರು ಹಂಗಾಮಿನ ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಭತ್ತ ಮತ್ತು ಬಿಳಿಜೋಳ ಖರೀದಿ ಕೇಂದ್ರಗಳನ್ನು ಕೊಪ್ಪಳ ಜಿಲ್ಲೆಯಲ್ಲಿ ಪ್ರಾರಂಭಿಸಲಾಗಿದೆ.

ಪ್ರತಿ ಕ್ವಿಂಟಲ್‌ಗೆ ಸಾಮಾನ್ಯ ಭತ್ತಕ್ಕೆ ರೂ. 2,300 ಗಳು, ಗ್ರೇಡ್ 'ಎ' ಭತ್ತಕ್ಕೆ ರೂ. 2,320 ಹಾಗೂ ಹೈಬ್ರಿಡ್ ಬಿಳಿಜೋಳಕ್ಕೆ ರೂ. 3,371 ಮತ್ತು ಮಾಲ್ದಂಡಿ ಬಿಳಿಜೋಳಕ್ಕೆ ರೂ. 3,421 ರಂತೆ ದರ ನಿಗದಿಪಡಿಸಲಾಗಿದ್ದು, ಭತ್ತ ಖರೀದಿಗೆ ಮಾರ್ಚ್ 20 ರಿಂದ ಏಪ್ರಿಲ್ 25ರ ವರೆಗೆ ಹಾಗೂ ಬಿಳಿಜೋಳ ಖರೀದಿಗೆ ಮಾ. 25 ರಿಂದ ಮೇ. 31ರ ವರೆಗೆ ರೈತರ ನೋಂದಣಿ ಕಾರ್ಯವು ಇರುತ್ತದೆ. ಪ್ರತಿ ಎಕರೆಗೆ 25 ಕ್ವಿಂಟಲ್ ನಂತೆ ಪ್ರತಿ ರೈತರಿಂದ ಗರಿಷ್ಠ 50 ಕ್ವಿಂಟಲ್ ಭತ್ತ ಖರೀದಿಸಲಾಗುವುದು. ಬಿಳಿ ಜೋಳವನ್ನು ಪ್ರತಿ ರೈತ–ರಿಂದ ಎಕರೆಗೆ 20 ಕ್ವಿಂಟಲ್ ನಂತೆ ಗರಿಷ್ಠ 150 ಕ್ವಿಂಟಲ್ ಖರೀದಿಸಲಾಗುವುದು.


*ನೋಂದಣಿ/ಖರೀದಿ ಕೇಂದ್ರಗಳ ಹಾಗೂ ಅಧಿಕಾರಿಗಳ ವಿವರ:* ಕೊಪ್ಪಳ ಭತ್ತ ಮತ್ತು ಜೋಳ ಖರೀದಿ ಕೇಂದ್ರದ ಖರೀದಿ ಅಧಿಕಾರಿ ಎಂ.ವಿ.ಕೋನಾಪೂರ ಮೊ.ಸಂ: 9739228720 ಹಾಗೂ ಉಸ್ತುವಾರಿ ಅಧಿಕಾರಿ ಅಬ್ಬಾಸ್ ಅಲಿ ಮೊ.ಸಂ: 9482238556, ಗಂಗಾವತಿ ಭತ್ತ ಖರೀದಿ ಕೇಂದ್ರದ ಖರೀದಿ ಅಧಿಕಾರಿ ಸೋಮಶೇಖರ ಮೊ.ಸಂ:6361289585 ಮತ್ತು ಉಸ್ತುವಾರಿ ಅಧಿಕಾರಿ ಸುಹಾಸ ಮೊ.ಸಂ: 9886320360, ಕುಷ್ಟಗಿ ಜೋಳ ಖರೀದಿ ಕೇಂದ್ರದ ಖರೀದಿ ಅಧಿಕಾರಿ ಸೋಮಶೇಖರ ಮೊ.ಸಂ: 6361289585 ಹಾಗೂ ಉಸ್ತುವಾರಿ ಅಧಿಕಾರಿ ಚನ್ನಬಸಪ್ಪ, ಮೊ.ಸಂ: 9449464125, ಯಲಬುರ್ಗಾ ಜೋಳ ಖರೀದಿ ಕೇಂದ್ರದ ಖರೀದಿ ಅಧಿಕಾರಿ ಎಂ.ವಿ.ಕೋನಾಪೂರ ಮೊ.ಸಂ: 9739228720 ಮತ್ತು ಉಸ್ತುವಾರಿ ಅಧಿಕಾರಿ ಮಲ್ಲಿಕಾರ್ಜುನ ಮೊ.ಸಂ: 9844960399, ಕಾರಟಗಿ ಭತ್ತ ಖರೀದಿ ಕೇಂದ್ರದ ಖರೀದಿ ಅಧಿಕಾರಿ ಸೋಮಶೇಖರ ಮೊ.ಸಂ: 6361289585 ಹಾಗೂ ಉಸ್ತುವಾರಿ ಅಧಿಕಾರಿ ನವೀನ್ ಮಠದ್ ಮೊ.ಸಂ: 8123453419, ಕನಕಗಿರಿ ಜೋಳ ಖರೀದಿ ಕೇಂದ್ರದ ಸೋಮಶೇಖರ ಮೊ.ಸಂ: 6361289585 ಮತ್ತು ಉಸ್ತುವಾರಿ ಅಧಿಕಾರಿ ಚನ್ನಬಸಪ್ಪ ಮೊ.ಸಂ: 9449464125.

ರೈತರು ಸರ್ಕಾರ ನಿಗದಿಪಡಿಸಿದ ಗುಣಮಟ್ಟದ ಭತ್ತ, ಬಿಳಿಜೋಳ ನೀಡುವಂತೆ ಹಾಗೂ ತಮ್ಮ ಸಮೀಪದ ಖರೀದಿ ಕೇಂದ್ರಗಳಿಗೆ ಫ್ರೂಟ್ಸ್ ಐಡಿಯೊಂದಿಗೆ ಭೇಟಿ ನೀಡಿ ನಿಗದಿತ ದಿನಾಂಕದೊಳಗೆ ನೋಂದಣಿ ಮಾಡಿಸಿಕೊಳ್ಳುವಂತೆ ಕೊಪ್ಪಳ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏ. 29ರಂದು ಸಿದ್ಧಾರೂಢ ಮಠ ಜಾತ್ರೆ ಹಾಗೂ ಉಚಿತ ಸಾಮೂಹಿಕ ವಿವಾಹ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ತಾಲ್ಲೂಕಿನ ಐತಿಹಾಸಿಕ ಹಿನ್ನೆಲೆ ಹೊಂದಿದ ರಾಮಸಮುದ್ರ ಗ್ರಾಮದ ಸ್ವಾಮಿ ಹರಿಶ್ವರಾನಂದ ಸರಸ್ವತಿ ಸಂಸ್ಥಾನ ಶ್ರೀ ಸಿದ್ಧಾರೂಢ ಮಠದ 27ನೇ ವರ್ಷದ ಜಾತ್ರಾ ಮಹೋತ್ಸವ ಬರುವ ಏ. 29 ಮಂಗಳವಾರದಂದು ಜರುಗಲಿದೆ, ಅಂದು ಬೆಳಿಗ್ಗೆ ಶ್ರೀ ಮಠದ ಆವರಣದಲ್ಲಿ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ಮಠದ ಶ್ರೀಗಳು ತಿಳಿಸಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುವ ಸ್ವಾಮಿ ಹರಿಶ್ವರಾನಂದ ಸರಸ್ವತಿ ಸ್ವಾಮಿಜಿ, ಇದೇ ವರ್ಷ ಪ್ರಥಮವಾಗಿ ಸಿದ್ಧಾರೂಢರ ನೂತನ ರಥೋತ್ಸವ ಸಂಜೆ 5.30ಕ್ಕೆ ಜರುಗಲಿದೆ, ಅದರಂತೆ ವಿವಿಧ ಧಾರ್ಮಿಕ ಕಾರ್ಯಕ್ರಮ ನಡೆಯುವವು, ಏ.30 ಬುಧವಾರದಂದು ಬೆಳಿಗ್ಗೆ 11 ಹಮ್ಮಿಕೊಂಡಿರುವ ಕಾರಣ ಉಚಿತ ಸಾಮೂಹಿಕ ವಿವಾಹ ಮಾಡಿಕೊಳ್ಳುವ ವಧು–ವರರು ತಮ್ಮ ಅಗತ್ಯ ದಾಖಲಾತಿಗಳನ್ನು ಏ. 25ರ ಒಳಗಾಗಿ ಶ್ರೀ ಮಠದ ಸಂಪರ್ಕ ಮೊ. ನಂ. 9867988215 ಗೆ ಸಂಪರ್ಕಿಸಬೇಕು, ಜೊತೆಗೆ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಜಾತ್ರೆಗೆ ಆಗಮಿಸಿ, ಸಿದ್ಧಾರೂಢರ ಆಶೀರ್ವಾದ ಪಡೆಯಬೇಕೆಂದು ಮನವಿ ಮಾಡಿದ್ದಾರೆ.

## ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕದಿಂದ ಬೇಸಿಗೆ ಶಿಬಿರ
## ಶಿಬಿರಗಳು ವ್ಯಕ್ತಿತ್ವ ವಿಕಸನಕ್ಕೆ ಬುನಾದಿ: ದಳವಾಯಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.18–ಶಿಬಿರಗಳು ಯುವಸಮೂಹದವ್ಯಕ್ತಿತ್ವವಿಕಸನಕ್ಕೆ ಬುನಾದಿಯಾಗಿದ್ದು, ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ನಡೆಸುವ ಬೇಸಿಗೆ ಶಿಬಿರದಲ್ಲಿ ವಿದ್ಯಾರ್ಥಿಗಳು ಪಾಲ್ಗೊಳ್ಳುವದರಿಂದ ಉತ್ತಮ ವ್ಯಕ್ತಿತ್ವವನ್ನು ಬೆಳೆಸಿಕೊಳ್ಳಲು ಸಹಾಯಕವಾಗುತ್ತದೆ ಎಂದು ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಕಾರ್ಯದರ್ಶಿ ಎಸ್.ಎಸ್. ದಳವಾಯಿ ಹೇಳಿದರು.

ಶುಕ್ರವಾರ ಬಾಗಲಕೋಟೆ ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಭಾರತ ಸ್ಕೌಟ್ಸ್ ಮತ್ತುಗೈಡ್ಸ್ ಘಟಕಗಳ ಆಶ್ರಯದಲ್ಲಿ ಆರಂಭವಾದ ಮೂರು ದಿನಗಳ ಬೇಸಿಗೆ ಶಿಬಿರ ಉದ್ಘಾಟಿಸಿ ಮಾತನಾಡಿದ ಅವರು,ರೋವರ್ಸ್ ಮತ್ತು ರೇಂಜರ್ಸ್‌ಗಳು ಪರಿಸರ ಸಂರಕ್ಷಣೆ ಮಾಡುವ ಸಂಕಲ್ಪ ಮಾಡಿ, ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ನಿಯಮಗಳನ್ನು ತಪ್ಪದೇ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದರು. ಮುಖ್ಯ ಅತಿಥಿಗಳಾಗಿದ್ದ ಜಿಲ್ಲಾ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಸಂಚಾಲಕ ಪ್ರಮೋದ ಚೌಗಲೆ, ಪ್ರತಿ ವರ್ಷ ನಡೆಸುವ ಬೇಸಿಗೆ ಶಿಬಿರಗಳಿಂದ ವಿದ್ಯಾರ್ಥಿಗಳು ಹೊಸ ಹೊಸ ವಿಚಾರಗಳನ್ನು ತಿಳಿದುಕೊಳ್ಳಲು ಪೂರಕವಾಗಿದ್ದು. ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳಿಗೆ ಉನ್ನತ ವ್ಯಾಸಂಗದಲ್ಲಿ ಪ್ರತಿಶತ 5 ರಷ್ಟು ಮೀಸಲಾತಿಯನ್ನು ನೀಡಲಾಗುತ್ತಿದೆ. ರೇಂಜರ್ಸ್, ರೋವರ್ಸ್ ವಿದ್ಯಾರ್ಥಿಗಳು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಾ.ಅರುಣಕುಮಾರ ಗಾಳಿ ಮಾತನಾಡಿ, ಪದವಿ ವಿದ್ಯಾರ್ಥಿಗಳಿಗೆ ಶಿಬಿರಗಳು ನಡುವಳಿಕೆ ಕಲಿಸುತ್ತವೆ. ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಪ್ರತಿಜ್ಞಾ ವಿಧಿಯಂತೆ ವಿದ್ಯಾರ್ಥಿಗಳು ದೇವರು ಮತ್ತು ದೇಶ ಸೇವೆ ಮಾಡುವ ಮನೋಭಾವ ಬೆಳೆಸಿಕೊಂಡು, ಸಮಾಜ ಸೇವೆಯ ಮೂಲಕ ತಮ್ಮಲ್ಲಿ ನಂಬಿಕೆ ಮತ್ತು ವಿಶ್ವಾಸ ಗಳಿಸಲು ಸಾಧ್ಯವಿದೆ ಎಂದು ಹೇಳಿದರು. ಸಂಪನ್ಮೂಲ ವ್ಯಕ್ತಿ ರೋವರ್ಸ್ ಸ್ಕೌಟ್ಸ್ ಲೀಡರ್ ರವಿ ಗಡದನ್ನವರ, ಅಳತೆ ಮತ್ತು ಅಂದಾಜು ಮಹತ್ವ ಕುರಿತು ಉಪನ್ಯಾಸ ನೀಡಿದರು. ರೋವರ್ಸ್ ಲೀಡರ್ ಪ್ರೊ.ಪರಸಪ್ಪ ತಳವಾರ ಪ್ರಾಸ್ತಾವಿಕ ನುಡಿ ಹೇಳಿದರು. ರೇಂಜರ್ಸ್ ಲೀಡರ್ ಡಾ.ಸುಮಂಗಲಾ ಮೇಟಿ, ರೋವರ್ಸ್ ಲೀಡರ್ ಡಾ.ಚಂದ್ರಶೇಖರ ಕಾಳನ್ನವರ, ರೇಂಜರ್ಸ್ ಲೀಡರ್ ಪ್ರೊ.ಸವಿತಾ ಬದಾಮಿ, ಸುಮಿತ್ರಾ ಕಾಂಬೋಜಿ ಉಪಸ್ಥಿತರಿದ್ದರು. ಶಿಬಿರದಲ್ಲಿ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕಗಳ 60 ವಿದ್ಯಾರ್ಥಿಗಳು ಪಾಲ್ಗೊಂಡಿದ್ದಾರೆ.

## ಕಿತ್ತಲಿಯಲ್ಲಿ ನಾಳೆ ವಿರಕ್ತಮಠದ ಅಡಿಗಲ್ಲು ಸಮಾರಂಭ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.18–ಜಿಲ್ಲೆಯ ಬಾದಾಮಿ ತಾಲೂಕಿನ ಕಿತ್ತಲಿ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಲಾಗುವ ಶ್ರೀ ಸಿದ್ಧಲಿಂಗೇಶ್ವರ ವಿರಕ್ತಮಠ ಮತ್ತು ಪಂಚಮುಖಿ ಶಿವದೇವಾಲಯಗಳ ಅಡಿಗಲ್ಲು ಹಾಗೂ ಸಾಮೂಹಿಕ ವಿವಾಹ ಕಾರ್ಯಕ್ರಮ ಏ.20 ರವಿವಾರ ನಡೆಯಲಿದೆ ಎಂದು ಕಿತ್ತಲಿ–ಮನ್ನಿಕಟ್ಟಿ–ಹಿರೇಮಳಗಾವಿಯ ಸಿದ್ಧಲಿಂಗೇಶ್ವರ ವಿರಕ್ತಮಠದ ಪೀಠಾಧಿಪತಿಗಳಾದ ಶಿವಕುಮಾರ ಸ್ವಾಮಿಗಳು ಹೇಳಿದರು. ಶುಕ್ರವಾರ ನಗರದ ಪತ್ರಿಕಾಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮಾರಂಭದ ದಿವ್ಯ ಸಾನಿಧ್ಯವನ್ನು ಶಿರಹಟ್ಟಿ–ಬಾಳೇಹೊಸೂರಿನ ಭಾವೈಕ್ಯತಾ ಮಹಾಪೀಠದ ಜಗದ್ಗುರು ಫಕೀರೇಶ್ವರ ಮಠದ ಜಗದ್ಗುರು ಶ್ರೀ ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳು ವಹಿಸುವರು. ಸಕ್ಕರೆ ಸಚಿವ ಶಿವಾನಂದ ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಅಧ್ಯಕ್ಷತೆ ವಹಿಸಲಿದ್ದಾರೆ ಎಂದರು. ಬೆಳಿಗ್ಗೆ 9ಗಂಟೆಗೆ ಷಟಸ್ಥಳ ಧ್ವಜಾರೋಹಣ ಹಾಗೂ ಶೋಭಾಯಾತ್ರೆ ನಡೆಯಲಿದೆ. ಶ್ರೀ ಸಿದ್ಧಲಿಂಗ ಶಿವಯೋಗಿಗಳ ಮತ್ತು ಸಿದ್ಧರಾಮೇಶ್ವರರ ಭಾವಚಿತ್ರ ಮೆರವಣಿಗೆಯು ಪೂರ್ಣಕುಂಭದೊಂದಿಗೆ ಈಶ್ವರ ದೇವಸ್ಥಾನದಿಂದ ಸಭಾಮಂಟಪದವರೆಗೆ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ದೊರೆಸ್ವಾಮಿಮಠ ಬೈರನಮಟ್ಟಿ–ಶಿರೋಳದ ಶ್ರೀ ಶಾಂತಲಿಂಗ ಮಹಾಸ್ವಾಮೀಜಿ, ಹರನಾಳ–ನಿವಾಳಖೇಡ ಮಹಾಂತರಮಠದ ಸಂಗನಬಸವ ಮಹಾಸ್ವಾಮೀಜಿ,ಬೆಳ್ಳೇರಿ ಬಸವಾನಂದ ಮಹಾಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ. ಸಂಸದ ಪಿ.ಸಿ.ಗದ್ದಿಗೌಡ ಅಧ್ಯಕ್ಷತೆ ವಹಿಸಲಿದ್ದಾರೆ. ಜಿಪಂ ಮಾಜಿ ಅಧ್ಯಕ್ಷೆ ವೀಣಾ ಕಾಶಪ್ಪನವರ ಉದ್ಘಾಟನೆ ನೆರವೇರಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ನರಗುಂದ ತಾಪಂ ಮಾಜಿ ಅಧ್ಯಕ್ಷ ಪ್ರಕಾಶ ತಿರಕನಗೌಡ, ಉದ್ಯಮದಾರ ಫಕೀರಗೌಡ ಹಿರೇನಿಂಗನಗೌಡ್ರ, ಬಾದಾಮಿ ಖಾದಾ ಮಾಜಿ ಅಧ್ಯಕ್ಷ ಬಿ.ಪಿ.ಹಳ್ಳೂರ, ಜಿಪಂ ಮಾಜಿ ಸದಸ್ಯ ಎನ್.ಎಸ್.ಬೊಮ್ಮಣಗೌಡ, ಕೆಪಿಸಿಸಿ ವಕ್ತಾರ ಮಹಾಂತೇಶ ಹಟ್ಟಿ, ಬಿಜೆಪಿ ಧುರೀಣ ಸಿದ್ದಣ್ಣ ಶಿವನಗುತ್ತಿ, ಜಿಪಂ ಮಾಜಿ ಸದಸ್ಯ ಫಕೀರಗೌಡ ಪಾಟೀಲ, ಡಿಸಿಸಿ ಬ್ಯಾಂಕ ಮಾಜಿ ನಿರ್ದೇಶಕ ಸಿದ್ದನಗೌಡ ಪಾಟೀಲ ಸೇರಿದಂತೆ ಮತ್ತಿತರರು ಆಗಮಿಸಲಿದ್ದಾರೆ. ಪಂಚಮುಖಿ ಶಿವದೇವಾಲಯದ ಅಡಿಗಲ್ಲು ಸಮಾರಂಭವನ್ನು ಸಚಿವರಾದ ಶಿವಾನಂದ ಪಾಟೀಲ ಹಾಗೂ ಆರ್.ಬಿ.ತಿಮ್ಮಾಪುರ ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆಯನ್ನು ಬಾದಾಮಿ ಶಾಸಕ ಭೀಮಸೇನ ಚಿಮ್ಮನಕಟ್ಟಿ ವಹಿಸಲಿದ್ದಾರೆ. ಸಂಸದ ಪಿ.ಸಿ.ಗದ್ದಿಗೌಡರ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ಶಾಸಕ ಎಚ್.ವಾಯ್.ಮೇಟಿ, ವಿಪ ಸದಸ್ಯರಾದ ಪಿ.ಎಚ್.ಪೂಜಾರ, ಹನಮಂತ ನಿರಾಣಿ, ಸುನೀಲಗೌಡ ಪಾಟೀಲ, ಸುರೇಶಗೌಡ ಹಿರೇಮಠ ಸೇರಿದಂತೆ ಬಾದಾಮಿಯ ಸ್ಥಳೀಯ ಮುಖಂಡರು ಆಗಮಿಸಲಿದ್ದಾರೆ ಎಂದು ಸ್ವಾಮೀಜಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಅಶೋಕ ಲಾಗಲೋಟಿ, ರಂಗನಗೌಡ ದಂಡನ್ನವರ, ಶಿವಕುಮಾರ ನಂದಿಕೋಲಮಠ, ವಿರೇಶ ಹಿರೇಮಠ ಉಪಸ್ಥಿತರಿದ್ದರು.

## ಜನಿವಾರ ಬಿಚ್ಚಿಸಿದ ಘಟನೆ: ಬ್ರಾಹ್ಮಣ ಸಮುದಾಯ ಖಂಡನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.18–ಗುರುವಾರ ನಡೆದ ಸಿಇಟಿ ಪರೀಕ್ಷೆ ಸಂದರ್ಭದಲ್ಲಿ ಬ್ರಾಹ್ಮಣ ವಿದ್ಯಾರ್ಥಿಗಳ ಜನಿವಾರ ಬಿಚ್ಚಿಸಿದ ಘಟನೆಯನ್ನು ಬ್ರಾಹ್ಮಣ ಸಮಾಜ ತೀವ್ರವಾಗಿ ಖಂಡಿಸಿದೆ.

ಬೀದರನಲ್ಲಿ ಜನಿವಾರ ತೆಗೆಯಲು ನಿರಾಕರಿಸಿದ ವಿದ್ಯಾರ್ಥಿಗೆ ಪರೀಕ್ಷೆ ಅವಕಾಶ ನೀಡದೇ ಇರುವುದು ಅತ್ಯಂತ ಖಂಡನೀಯ ಎಂದಿರುವ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಜಿಲ್ಲಾ ಪ್ರತಿನಿಧಿ ಗುರುರಾಜ ಗೊಂಬಿ, ಜನಿವಾರ ಬಿಚ್ಚಿಸುವುದು ಒಂದು ಸಮಾಜದ ಧಾರ್ಮಿಕ ಭಾವನೆಗೆ ಅವಮಾನ ಮಾಡಿದಂತಾಗಿದ್ದು, ಪರೀಕ್ಷಾ ಸಿಬ್ಬಂದಿಯ ಈ ಕ್ರಮ ಅಕ್ಷಮ್ಯ ಅಪರಾಧವಾಗಿದೆ ಎಂದಿದ್ದಾರೆ.

ಬ್ರಾಹ್ಮಣ ಸಮಾಜದಲ್ಲಿ ಸೂಕ್ತ ಮುಹೂರ್ತದಲ್ಲಿ ಜನಿವಾರ ಧಾರಣೆ ಮಾಡಲಾಗುತ್ತಿದ್ದು, ಅದನ್ನು ಬಿಚ್ಚಿಸಿ ಕಸದ ಬುಟ್ಟಿಗೆ ಎಸೆಯುವ ಮೂಲಕ ಪರೀಕ್ಷಾ ಸಿಬ್ಬಂದಿ ಕ್ರೌರ್ಯವನ್ನು ಮೆರೆದಿದೆ ಎಂದಿರುವ ಗೊಂಬಿ, ಈ ಕೃತ್ಯವನ್ನು ಇಡೀ ಬ್ರಾಹ್ಮಣ ಸಮಾಜ ತೀವ್ರವಾಗಿ ಖಂಡಿಸುತ್ತದೆಯಲ್ಲದೇ, ಈ ತಪ್ಪೆಸಗಿದ ಸಿಬ್ಬಂದಿಯ ವಿರುದ್ಧ ಸರಕಾರ ಸೂಕ್ತ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ.

## ಜನಿವಾರಕ್ಕೆ ಅಡ್ಡಿ: ಬ್ರಾಹ್ಮಣ ಸಂಘಟನೆಗಳ ಖಂಡನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.18–ಶಿವಮೊಗ್ಗ ಹಾಗೂ ಬೀದರನಲ್ಲಿ ಜನಿವಾರ ಧರಿಸಿದ್ದಕ್ಕೆ ಸಿಇಟಿ ಪರೀಕ್ಷೆ ಬರೆಯಲು ಅನುವು ಮಾಡಿಕೊಡದಿರುವುದು ನಾಚಿಗೇಡಿನ ಸಂಗತಿಯಾಗಿದೆ. ಈ ವಿಚಾರದಲ್ಲಿ ತಪ್ಪು ಎಸೆಗಿದವರನ್ನು ಅಮಾನತುಗೊಳಿಸುವುದರೊಂದಿಗೆ ಅವರ ಮೇಲೆ ಧಾರ್ಮಿಕ ಭಾವನೆಗೆ ಧಕ್ಕೆ ತಂದಿರುವ ಪ್ರಕರಣ ದಾಖಲಿಸಿ ಬಂಧಿಸಬೇಕೆಂದು ಬ್ರಾಹ್ಮಣ ತರುಣ ಸಂಘದ ಅಧ್ಯಕ್ಷ ನಾರಾಯಣ ದೇಸಾಯಿ ಒತ್ತಾಯಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಪರೀಕ್ಷೆಯನ್ನು ಬಿಗಿಗೊಳಿಸುವ ನೆಪದಲ್ಲಿ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುವ ಪ್ರಯತ್ನಗಳು ಮೇಲಿಂದ ಮೇಲೆ ನಡೆಯುತ್ತಲೇ ಇದೆ. ಈಗ ಅದು ಅತಿರೇಕಕ್ಕೆ ತಲುಪಿದೆ. ಬೀದರನಲ್ಲಿ ಜನಿವಾರ ತೆಗೆಯಲು ಒಪ್ಪದ ವಿದ್ಯಾರ್ಥಿಗೆ ಪರೀಕ್ಷೆ ಬರೆಯಲು ಅವಕಾಶ ನೀಡಿಲ್ಲ. ಇದು ಅಕ್ಷಮ್ಯ ಅಪರಾಧ ಎಂದಿದ್ದಾರೆ.

ಧಾರ್ಮಿಕ ಆಚರಣೆಗೆ ಅಡ್ಡಿಪಡಿಸಲು ಯಾರಿಗೂ ಅಧಿಕಾರವಿಲ್ಲ. ಸರ್ಕಾರದ ಆದೇಶ ಇಲ್ಲದಿದ್ದರೂ ಅಧಿಕಾರಿಗಳು ಈ ರೀತಿ ತಪ್ಪು ಎಸೆಗಿರುವುದು ಯಾಕೆ. ಸಿಇಟಿ ಬರೆಯದೆ ಆ ವಿದ್ಯಾರ್ಥಿಯ ಇಂಜನಿಯರಿಂಗ್ ಕನಸು ಭಗ್ನಗೊಂಡಿದೆ. ಅಧಿಕಾರಿಗಳ ಎಡವಟ್ಟಿನಿಂದ ಆತ ಪರೀಕ್ಷೆ ಬರೆಯದ ಕಾರಣ ಸರ್ಕಾರ ಆತನ ವ್ಯಾಸಂಗಕ್ಕೆ ಸೂಕ್ತ ಅವಕಾಶ ಮಾಡಿಕೊಡಬೇಕು. ಅಲ್ಲದೇ ತಪ್ಪಿತಸ್ಥ ಅಧಿಕಾರಿಗಳು, ಸಿಬ್ಬಂದಿಯನ್ನು ಕೇವಲ ಅಮಾನತಿನಲ್ಲಿಟ್ಟರೆ ಸಾಲದು ಅವರನ್ನು ಜೈಲಿಗಟ್ಟುವ ಕೆಲಸವಾಗಬೇಕಂದು ಅವರು ಆಗ್ರಹಿಸಿದ್ದಾರೆ.

ಘಟನೆಯನ್ನು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭೆ ಹಾಗೂ ವಿಶ್ವ ಮಧ್ವ ಮಹಾಪರಿಷತ್ ಸಹ ಖಂಡಿಸಿದ್ದು, ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆ ಆಗ್ರಹಿಸಿವೆ.

## ಜ್ಞಾನದ ಊರು ಚಿತ್ತಾಪುರ, ಏಷ್ಯಾ ಖಂಡದ ದೊಡ್ಡ ಪ್ರಾಚೀನ ವಿಶ್ವವಿದ್ಯಾಲಯ ನಾಗಾವಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಏ.18: ಚಿತ್ತ ಎಂದರೆ ಜ್ಞಾನ, ಪುರ ಎಂದರೆ ಊರು. ಜ್ಞಾನದ ಊರು ಚಿತ್ತಾಪುರವಾಗಿದೆ. ನಾಗಾವಿ ವಿಶ್ವವಿದ್ಯಾಲಯ ವಿಶ್ವದ ಪ್ರಾಚೀನ ಮತ್ತುದೊಡ್ಡ ವಿಶ್ವವಿದ್ಯಾಲಯವಾಗಿತ್ತು. ಆಕ್ಸಫರ್ಡ ಮತ್ತು ಕೆಂಬ್ರಿಜ್ ವಿಶ್ವವಿದ್ಯಾಲಯದಂತೆ ಮೆರೆದ ನಮ್ಮ ನಾಗಾವಿ ವಿಶ್ವವಿದ್ಯಾಲಯ ಮತ್ತು ಗತ ವೈಭವ ಪುನಃ ಮರುಕಳಿಸಬೇಕಾಗಿದೆ ಎಂದು ಎಂದು ಸಂಶೋಧಕ–ಸಾಹಿತಿ ಮುಡಬಿ ಗುಂಡೇರಾವ ಆಶಯ ವ್ಯಕ್ತಪಡಿಸಿದರು. ಚಿತ್ತಾಪುರ ತಾಲೂಕಿನ ಐತಿಹಾಸಿಕ, ಪಾರಂಪರಿಕ ನಾಗಾವಿಯ ತ್ರೈಪುರುಷ ದೇವಾಲಯದಲ್ಲಿ ಕಲಬುರಗಿಯ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗುತ್ತಿರುವ ಜಿಲ್ಲೆಯ ಐತಿಹಾಸಿಕ ಸ್ಥಳಗಳ ಪರಿಚಯಾತ್ಮಕ ಸರಣಿ ಕಾರ್ಯಕ್ರಮ–11 ಮತ್ತು 'ವಿಶ್ವ ಪಾರಂಪರಿಕ ದಿನಾಚರಣೆ'ಯಲ್ಲಿ ಅವರು ಮಾತನಾಡುತ್ತಿದ್ದರು.

ನಾವಿಂದು ಕಾಣುವ ಬ್ರಹ್ಮ, ವಿಷ್ಣು ಮತ್ತು ಮಹೇಶ್ವರ ಎಂಬ ತ್ರೈಪುರುಷ ದೇವಾಲಯವು 60 ಕಂಬಗಳ ವಾಸ್ತುಶಿಲ್ಪವನ್ನು ಹೊಂದಿರುವ ದೇವಾಲಯವಾಗಿದೆ. ಈ ಸ್ಥಳ ಸೇರಿದಂತೆ ಇದರ ಸುತ್ತಲಿನ ಪ್ರದೇಶವು ಹಿಂದೆ ಪ್ರಸಿದ್ಧ ವಿಶ್ವವಿದ್ಯಾಲಯವಾಗಿತ್ತು. ದೇಶ, ವಿದೇಶಗಳಿಂದ ಅನೇಕರು ಅಧ್ಯಯನ ಮಾಡಿದ್ದಾರೆ. ಇಲ್ಲಿ ಮಾನವ ವಿಕಾಸಕ್ಕಾಗಿ ಅಗತ್ಯವಿರುವ 63 ಪ್ರಕಾರದ ಶಿಕ್ಷಣ, ಕಲೆಗಳ ಜ್ಞಾನವನ್ನು ಧಾರೆ ಎರೆಯಲಾಗಿದೆ ಎಂದು ಉಲ್ಲೇಖಿಸಲಾಗಿದೆ.

ಪ್ರಾಸ್ತಾವಿಕವಾಗಿ ಮಾತನಾಡಿದ ಬಳಗದ ಅಧ್ಯಕ್ಷ ಎಚ್.ಬಿ.ಪಾಟೀಲ, ವಿಶ್ವದಲ್ಲಿರುವ ಅಪರೂಪದ ವಾಸ್ತುಶಿಲ್ಪ ಹೊಂದಿರುವ ಐತಿಹಾಸಿಕ ಸ್ಮಾರಕಗಳು, ಸ್ಥಳಗಳ ಬಗ್ಗೆ ಜಾಗೃತಿ ಮೂಡಿಸಬೇಕು ಹಾಗೂ ಅವುಗಳನ್ನು ಸಂರಕ್ಷಿಸಬೇಕು ಎಂಬ ಉದ್ದೇಶದಿಂದ ಯೂನಿಸ್ಕೋ 1964ರಲ್ಲಿ ಈ ದಿನಾಚರಣೆ ಆಚರಿಸಲು ಪ್ರಾರಂಭಿಸಿದೆ. ನಮ್ಮ ಬಳಗದ ವತಿಯಿಂದ ಜಿಲ್ಲೆಯಲ್ಲಿರುವ ಐತಿಹಾಸಿಕ, ಪಾರಂಪರಿಕ ಸ್ಥಳಗಳ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. ಇದರಿಂದ ಮುಂದಿನ ಪೀಳಿಗೆಗೆ ನಮ್ಮ ದೇಶದ ಸಂಸ್ಕೃತಿ, ಇತಿಹಾಸ, ಪರಂಪರೆ ದೊರೆಯಲು ಸಾಧ್ಯವಾಗುತ್ತದೆ. ಐತಿಹಾಸಿಕ ಸ್ಮಾರಕಗಳ ಸಂರಕ್ಷಣೆ ಅಗತ್ಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಸಮಾಜ ಸೇವಕ ಶಿವಯೋಗೆಪ್ಪಾ ಎಸ್.ಬಿರಾದಾರ, ಪ್ರಮುಖರಾದ ವಿದ್ಯಾವತಿ ಬೊಮ್ಮನಳ್ಳಿ, ಸಕ್ರೆಪ್ಪ ಗುರಿಕಾರ, ಶಂಕ್ರೆಪ್ಪ ಹಯ್ಯಾಳ್, ರವಿ ಗುರಿಕಾರ, ಗಣಪತಿ ಮಸಾಲಿ, ಬಸವರಾಜ ಲೀಣಿ, ಶಂಕರಲಿಂಗ ಪೂಜಾರಿ, ದೇವಪ್ಪ ಪೂಜಾರಿ, ಮಲ್ಲು ಯಾಳವಾರ, ರವಿ ಜೇಳಜಿ, ರಾಜು, ಅಮೋಘ ಸಾಸಬಾಳ, ನಜೀರಸಾಬ್ ಮುಲ್ಲಾ, ದೇವೇಂದ್ರ ಜಮಾದಾರ ಸೇರಿದಂತೆ ಅನೇಕರು ಭಾಗವಹಿಸಿದ್ದರು.

## ವಿಜಯನಗರ ಸಾಮ್ರಾಜ್ಯ ಸಂಸ್ಥಾಪನಾ ಹಾಗೂ ಹರಿಹರ ದೇವರಾಯರ ಪಟ್ಟಾಭಿಷೇಕ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಗಂಗಾವತಿ ನಗರದ ಶ್ರೀ ಕೃಷ್ಣದೇವರಾಯ ವೃತ್ತದಲ್ಲಿ ಗಂಡುಗಲಿ ಕುಮಾರರಾಮ ಹೋರಾಟ ಸಮಿತಿ, ಮತ್ತು ಅಖಿಲ ಕರ್ನಾಟಕ ಹರಿಹರಹಕ್ಕ –– ಬುಕ್ಕನಾಯಕ ವೇದಿಕೆಯಿಂದ 689 ನೇ ಕರ್ನಾಟಕ (ವಿಜಯನಗರ) ಸಾಮ್ರಾಜ್ಯ ಸಂಸ್ಥಾಪನಾ ದಿನವನ್ನು. ಮತ್ತು ವಿಜಯನಗರದ ಮೊದಲ ಅರಸ ಹರಿಹರ ದೇವರಾಯರ ಪಟ್ಟಾಭಿಷೇಕ ದಿನವನ್ನು ಆಚರಿಸಿಲಾಯಿತು.

ಈ ಸಂಧರ್ಭದಲ್ಲಿ ಕುಮಾರರಾಮನ ವಂಶಸ್ಥರಾದ ಹೆಚ್ ರಾಜೇಶ್ ನಾಯಕ ದೊರೆ ಮಾತನಾಡಿ,

ವೀರ ಕಂಪಿಲರಾಯ ಮತ್ತು ಗಂಡುಗಲಿ ಕುಮಾರರಾಮರ ಆಡಳಿತದ ಮುಂದುವರೆದ ಭಾಗವೇ ಸಂಗಮ ಮನೆತನದ ಹರಿಹರ, ಬುಕ್ಕರಾಯರ ಆಡಳಿತವಾಗಿದೆ ಕ್ರಿ.ಶ 1336 ರಲ್ಲಿ ಆನೆಗೊಂದಿಯಲ್ಲಿ ಕುಮಾರರಾಮನ ಕನಸಿನ ಯೋಜನೆಯಂತೆ ಇವರುಗಳು ಆಳ್ವಿಕೆಯನ್ನು ನಡೆಸಿ ನಾಡು ನುಡಿ ಧರ್ಮ ಕಲೆ ಸಾಹಿತ್ಯ ಸಂಸ್ಕೃತಿಗೆ ಭದ್ರವಾದ ಅಡಿಪಾಯವನ್ನು ಹಾಕಿಕೊಟ್ಟರು ಇವರನ್ನೆ ಅನುಸರಿಸಿದ ಸಾಳುವ ತಳವಾರ,ತುಳುವ, ಅರವೀಡು,ಮನೆತನಗಳು ಸುಭದ್ರ ಸುಸ್ಥಿರವಾದ ಸಾಮ್ರಾಜ್ಯದ ಆಡಳಿತವನ್ನು ನಡೆಸಿದ್ದಾರೆ ಎಂದರು. ಕರವೇ ಜಿಲ್ಲಾಧ್ಯಕ್ಷ ಪಂಪಣ್ಣ ನಾಯಕ,ಮಾತನಾಡಿ ಕರ್ನಾಟಕ ವಿಜಯನಗರ ಸಾಮ್ರಾಜ್ಯ ಸಂಸ್ಥಾಪನಾ ಹಾಗೂ ಹರಿಹರ ದೇವರಾಯರ ಪಟ್ಟಾಭಿಷೇಕ ದಿನಾಚರಣೆಯನ್ನು ರಾಜ್ಯ ಸರ್ಕಾರ ರಜೆಯನ್ನು ಘೋಷಿಸಿ ಆಚರಣೆಯನ್ನು ಮಾಡಬೇಕೆಂದು ಒತ್ತಾಯಿಸಿದರು. ಇದೇ ಸಂದರ್ಭದಲ್ಲಿ ಯುವ ಸಂಶೋಧಕರಾದ ಹರನಾಯಕ ಮಾತನಾಡಿ ರಾಜ್ಯದಲ್ಲಿ ನಮ್ಮ ರಾಜರ ಸ್ಮರಣೆಯನ್ನೆ ನಾವುಗಳು ಮರೆತು ಬೇರೆ ರಾಜರನ್ನು ಹೊತ್ತು ಮೆರೆಸುತ್ತಿದ್ದೆವೆ ಇನ್ನಾದರು ಕನ್ನಡಿಗರು ಬದಲಾಗಬೇಕು ವಿಜಯನಗರ ಅರಸ ಸ್ಮರಣೆ ತುಂಬಾ ಅವಶ್ಯಕವಾಗಿದ್ದು ನಮ್ಮ ಸ್ವಾಭಿಮಾನವನ್ನು ನಾವು ಮರೆಯಬಾರದು ವಿಜಯನಗರ ಸಂಸ್ಥಾಪನಾ ದಿನಾಚರಣೆಯನ್ನು ಸರ್ಕಾರ ರಾಜ್ಯಾದ್ಯಂತ ಸರ್ಕಾರಿ ಕಾರ್ಯಕ್ರಮವಾಗಿ ಆಚರಣೆ ಮಾಡಬೇಕು ಎಂದರು. ಈ ಸಂದರ್ಭದಲ್ಲಿ ಭೀಮರಾಯಪ್ಪ ಸಿಂಗಾಪುರ, ಪ್ರಹ್ಲಾದ ಕುಲಕರ್ಣಿ, ದೇವಪ್ಪ ವಾಲಿಕಾರ, ರವಿ ದೋತರ, ಗುಡ್ಡೆಕಲ್ಲ ಶರಣಪ್ಪ, ಕುಮಾರಿ ಸಿಂಧು, ಹತ್ತಿಮರದ ರಾಜು ನಾಯಕ, ಹೆಚ್ ,ಆರ್ ,ಕುಮಾರರಾಮ, ರಾಮಣ್ಣ ದಫೇದಾರ್, ಅರ್ಜುನ್ ಜಿ,ಆರ್, ದೇವರಾಜ್ ಹೇಮಗುಡ್ಡ, ನರಸಿಂಹ, ಅಭಿನವ ಸೂರ್ಯ ನಾಯಕ, ಇತರರು ಭಾಗವಹಿಸಿದ್ದರು.

## ಮುಗಿಯದ ಲಾರಿ ಮುಷ್ಕರ, ಅಗತ್ಯ ವಸ್ತುಗಳ ಅಭಾವ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಏ.18– ಡೀಸೆಲ್ ಬೆಲೆ ಏರಿಕೆ ವಿರೋಧಿಸಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ನಡೆಸುತ್ತಿರುವ ಲಾರಿ ಮುಷ್ಕರ ಮೂರನೇ ದಿನಕ್ಕೆ ಕಾಲಿಟ್ಟಿದ್ದು ಸರಕು ಸಾಗಾಟದಲ್ಲಿ ಭಾರಿ ವ್ಯತ್ಯಯ ಕಂಡು ಬಂದಿದ್ದು ಅಗತ್ಯ ವಸ್ತುಗಳ ಅಭಾವ ತಲೆದೋರಿದೆ. ಲಾರಿಗಳ ಅನಿರ್ದಿಷ್ಟಾವಧಿ ಮುಷ್ಕರದಿಂದ ರೈತರು, ವರ್ತಕರು ವಿವಿಧ ಉದ್ಯಮಿಗಳು ಸಂಕಷ್ಟಕ್ಕೆ ಈಡಾಗುವಂತಾಗಿದೆ.

ಹೊರ ರಾಜ್ಯಗಳಿಂದ ಬರುವ ಹಣ್ಣು, ತರಕಾರಿ, ಸೊಪ್ಪು, ದಿನನಿತ್ಯದ ಪದಾರ್ಥಗಳ ಮೇಲೆ ಭಾರಿ ಪರಿಣಾಮ ಬೀರಿದೆ. ಸರಕು ಸಾಗಣಿಕೆ ವಾಹನಗಳು ಸಂಪೂರ್ಣ ಸ್ಥಗಿತಗೊಂಡಿರುವುದರಿಂದ ಹಳ್ಳಿಗಳಿಂದ ಹಣ್ಣು, ತರಕಾರಿ ಮತ್ತಿತರ ವಸ್ತುಗಳು ಸಾಗಾಟವಾಗದೆ ಕೊಳೆಯತೊಡಗಿವೆ. ಎಲ್‌ಪಿಜಿ ಗ್ಯಾಸ್, ಗೃಹ ಬಳಕೆ ಗ್ಯಾಸ್, ದಿನಸಿ, ಜಲ್ಲಿ, ಮರಳು, ಕಬ್ಬಿಣ ಸೇರಿದಂತೆ ಅನೇಕ ಬಗೆಯ ಸರಕು ಸಾಗಾಣಿಕೆಯಲ್ಲಿ ವ್ಯತ್ಯಯವಾಗಿದೆ.

# ಜಾತಿ ಜನಗಣತಿ ವರದಿ ತಿರಸ್ಕರಿಸುವಂತೆ ಸಿಎಂಗೆ ಶೋಭಾ ಕರಂದ್ಲಾಜೆ ಒತ್ತಾಯ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಏ.18–ಹಿಂದುಳಿದ ವರ್ಗಗಳ ಶಾಶ್ವತ ಆಯೋಗ ಸರ್ಕಾರಕ್ಕೆ ಸಲ್ಲಿಕೆ ಮಾಡಿರುವ ಜಾತಿ ಜನಗಣತಿ ವರದಿಯ ಬಗ್ಗೆ ಸಾಕಷ್ಟು ಸಂಶಯಗಳು ವ್ಯಕ್ತವಾಗಿರುವ ಹಿನ್ನೆಲೆಯಲ್ಲಿ ಸಚಿವ ಸಂಪುಟ ಸಭೆಯಲ್ಲಿ ಅನುಷ್ಠಾನ ಮಾಡದೆ ತಿರಸ್ಕಾರ ಮಾಡುವಂತೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಮುಖ್ಯಮಂತ್ರಿಗೆ ಒತ್ತಾಯಿಸಿದ್ದಾರೆ.

ಈ ಸಂಬಂಧ ಮುಖ್ಯಮಂತ್ರಿಗಳಿಗೆ ಎರಡು ಪುಟಗಳ ಪತ್ರ ಬರೆದಿರುವ ಶೋಭಾ ಕರಂದ್ಲಾಜೆ ಅವರು, ಕಾಂತರಾಜು ಆಯೋಗದ ಮೇಲುಸ್ತುವಾರಿಯಲ್ಲಿ ಸಿದ್ಧಪಡಿಸಲಾದ ಕರ್ನಾಟಕ ಜಾತಿ ಗಣತಿ ವರದಿಯ ಬಗ್ಗೆ ಗಂಭೀರ ಕಳವಳ ವ್ಯಕ್ತವಾಗಿದೆ. ವರದಿಯು ಮೂಲಭೂತವಾಗಿ ದೋಷಪೂರಿತವಾಗಿದೆ ಮತ್ತು ರಾಜ್ಯದ ಜನಸಂಖ್ಯಾ ವಾಸ್ತವತೆಯನ್ನು ಪ್ರತಿಬಿಂಬಿಸುವಲ್ಲಿ ವಿಫಲವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಆಯೋಗದ ಪ್ರಕಾರ, ಸಮೀಕ್ಷೆಯನ್ನು ಏಪ್ರಿಲ್ 11, 2015 ಮತ್ತು ಮೇ 30, 2015 ರ ನಡುವೆ 5.9 ಕೋಟಿ ಜನಸಂಖ್ಯೆಯನ್ನು ಒಳಗೊಳ್ಳಲು ಕೇವಲ 50 ದಿನಗಳ ಅಲ್ಪಾವಧಿಯಲ್ಲಿ ನಡೆಸಲಾಗಿದೆ. ಇದು ಪ್ರಕ್ರಿಯೆಯ ವಿಶ್ವಾಸಾರ್ಹತೆ ಮತ್ತು ಸಂಪೂರ್ಣತೆಯ ಮೇಲೆ ಗಂಭೀರ ಅನುಮಾನವನ್ನು ಉಂಟುಮಾಡುತ್ತದೆ ಎಂದು ಸಂಶಯ ವ್ಯಕ್ತಪಡಿಸಿದ್ದಾರೆ.

ವಿವಿಧ ಸಮುದಾಯಗಳ ಜನಸಂಖ್ಯೆಯ ಅಂಕಿ–ಅಂಶಗಳಲ್ಲಿ ಅತ್ಯಂತ ಎದ್ದು ಕಾಣುವ ವ್ಯತ್ಯಾಸಗಳಲ್ಲಿ ಒಂದಾಗಿದೆ. ಉದಾಹರಣೆಗೆ, ವೀರಶೈವ ಲಿಂಗಾಯತ ಜನಸಂಖ್ಯೆಯು ಕೇವಲ 30 ಲಕ್ಷ ಎಂದು ವರದಿ ಹೇಳುತ್ತದೆ, ಆದರೆ ವಿಶ್ವಾಸಾರ್ಹ ಅಂದಾಜಿನ ಪ್ರಕಾರ ಸಂಖ್ಯೆ 1.25 ಕೋಟಿ ಮೀರಿದೆ. ಅಂತಹ ಕಡಿಮೆ ಪ್ರಾತಿನಿಧ್ಯವು ದತ್ತಾಂಶ ಸಂಗ್ರಹವನ್ನು ವೈಜ್ಞಾನಿಕ ಅಥವಾ ವ್ಯವಸ್ಥಿತ ರೀತಿಯಲ್ಲಿ ನಡೆಸಲಾಗಿಲ್ಲ ಎಂದು ಸ್ಪಷ್ಟವಾಗಿ ಸೂಚಿಸುತ್ತದೆ ಎಂದು ಕಿಡಿಕಾರಿದ್ದಾರೆ.

ಚನ್ನಗಿರಿ ವಿಧಾನಸಭಾ ಕ್ಷೇತ್ರವೊಂದರಲ್ಲೇ ಸುಮಾರು 60,000 ಸಾದರ ಲಿಂಗಾಯತರು ವಾಸವಾಗಿದ್ದರೂ, ಲಿಂಗಾಯತ ಸಮುದಾಯದ ಸಾದರ ಉಪ ಪಂಗಡದ ಅಡಿಯಲ್ಲಿ ಕೇವಲ 67,000 ವ್ಯಕ್ತಿಗಳನ್ನು ಮಾತ್ರ ವರದಿ ಉಲ್ಲೇಖಿಸಿದೆ. ಈ ಅಸಂಗತತೆಗಳು ಸಮೀಕ್ಷೆಯ ಸಂಶೋಧನೆಗಳು ಮತ್ತು ನೆಲದ ವಾಸ್ತವಗಳ ನಡುವಿನ ಸಂಪರ್ಕ ಕಡಿತವನ್ನು ಎತ್ತಿ ತೋರಿಸುತ್ತವೆ ಎಂಬುದನ್ನು ಸಿಎಂ ಗಮನಕ್ಕೆ ತಂದಿದ್ದಾರೆ. ಇದಲ್ಲದೆ, ಪರಿಶಿಷ್ಟ ಜಾತಿಗಳು ಕರ್ನಾಟಕದಲ್ಲಿ ಅತಿ ದೊಡ್ಡ ಸಮುದಾಯವಾಗಿದ್ದು, ಸುಮಾರು 1.1 ಕೋಟಿ ಜನರು ಮತ್ತು 109 ಉಪ–ಜಾತಿಗಳನ್ನು ಹೊಂದಿದ್ದು, ಮುಸ್ಲಿಂ ಜನಸಂಖ್ಯೆ 12.6% ರಷ್ಟಿದೆ ಎಂದು ವರದಿ ಹೇಳುತ್ತದೆ. ಇದು ಮುಸ್ಲಿಮರನ್ನು



ಹೆಚ್ಚಿಸಲು ಶಿಫಾರಸು ಮಾಡುತ್ತದೆ. ನ್ಯಾಯೋಚಿತ ಮತ್ತು ಅಂತರ್ಗತ ಪ್ರಾತಿನಿಧ್ಯವನ್ನು ಆಧರಿಸಿರುವ ಬದಲು ನಿರ್ದಿಷ್ಟ ಮತ ಬ್ಯಾಂಕ್ ಅನ್ನು ಸಮಾಧಾನಪಡಿಸುವ ಗುರಿಯನ್ನು ಹೊಂದಿದೆ ಎಂದು ಶೋಭಾ ಟೀಕೆ ಮಾಡಿದ್ದಾರೆ.ಗೃಹ ಸಚಿವ ಡಾ. ಜಿ. ಪರಮೇಶ್ವರ ಅವರು ದೃಢಪಡಿಸಿದಂತೆ ಜಾತಿಗಣತಿಯಿಂದ ರಾಜ್ಯದ ಬೊಕ್ಕಸಕ್ಕೆ 169 ಕೋಟಿ ರೂಪಾಯಿ ನಷ್ಟವಾಗಿದೆ ಎಂದು ವರದಿಯಾಗಿದೆ. ದೋಷಗಳು ಮತ್ತು ತಪ್ಪುಗಳಿಂದ ಕೂಡಿದ ಸಮೀಕ್ಷೆಯ ಇಂತಹ ಮಹತ್ವದ ಖರ್ಚು, ಅದರ ಉದ್ದೇಶ ಮತ್ತು ಉಪಯುಕ್ತತೆಯ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕುತ್ತದೆ. ಜಾತಿ ಗಣತಿಗೆ ಸಂಬಂಧಿಸಿದ ವಿಧಾನಗಳು, ಸಂಶೋಧನೆಗಳು ಮತ್ತು ವೆಚ್ಚಗಳನ್ನು ವಿವರಿಸುವ ಶ್ವೇತ ಪತ್ರವನ್ನು ಸರ್ಕಾರ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದ್ದಾರೆ.

ಹಲವಾರು ಧಾರ್ಮಿಕ ಮತ್ತು ಸಮುದಾಯದ ಮುಖಂಡರು ಈಗಾಗಲೇ ವರದಿಯ ಬಗ್ಗೆ ಅಸಮತಿ ವ್ಯಕ್ತಪಡಿಸಿದ್ದಾರೆ. ಇದರಲ್ಲಿ ಅವೈಜ್ಞಾನಿಕ, ಪಕ್ಷಪಾತ, ಅಪೂರ್ಣ ಮತ್ತು ಪಾರದರ್ಶಕತೆಯ ಕೊರತೆ ಇದೆ ಎಂದು ಕರೆದಿದ್ದಾರೆ. ವರದಿಯು ಸಾಮಾಜಿಕ ನ್ಯಾಯದ ಕಡೆಗೆ ಒಂದು ಹೆಜ್ಜೆ ಹೋಗುವುದಕ್ಕಿಂತ ಹೆಚ್ಚಾಗಿ ರಾಜಕೀಯ ಕಾರ್ಯಸೂಚಿಯನ್ನು ಪೂರೈಸುತ್ತದೆ ಎಂದು ಶೋಭಾ ಕರಂದ್ಲಾಜೆ ಕಿಡಿಕಾರಿದ್ದಾರೆ. 1948ರ ಜನಗಣತಿ ಕಾಯಿದೆಯಡಿ ಪೂರ್ಣ ಪ್ರಮಾಣದ ಜಾತಿ ಗಣತಿಯನ್ನು ನಡೆಸಲು ಕೇಂದ್ರ ಸರ್ಕಾರಕ್ಕೆ ಮಾತ್ರ ಅಧಿಕಾರವಿದೆ ಎಂಬುದನ್ನು ಪುನರುಚ್ಚರಿಸುವುದು ಮುಖ್ಯವಾಗಿದೆ. ರಾಜ್ಯ ಸರ್ಕಾರಗಳು ಸಮೀಕ್ಷೆಗಳನ್ನು ನಡೆಸಬಹುದಾದರೂ, ಈ ಕಾರ್ಯವನ್ನು ಅಧಿಕೃತ ಜನಗಣತಿಯಾಗಿ ಪ್ರಸ್ತುತಪಡಿಸುವ ಯಾವುದೇ ಪ್ರಯತ್ನವು ಅಸಾಂವಿಧಾನಿಕ ಮತ್ತು ಕಾನೂನುಬಾಹಿರವಾಗಿದೆ ಎಂಬುದನ್ನು ಒತ್ತಿ ಹೇಳಿದ್ದಾರೆ.


ಈ ಕಾಳಜಿಯ ಹಿನ್ನೆಲೆಯಲ್ಲಿ ಪ್ರಸ್ತುತ ಜಾತಿ ಗಣತಿ ವರದಿಯನ್ನು ತಿರಸ್ಕರಿಸಬೇಕೆಂದು ನಾನು ರಾಜ್ಯ ಸರ್ಕಾರವನ್ನು ಬಲವಾಗಿ ಒತ್ತಾಯಿಸುತ್ತೇನೆ. ತಾಜಾ, ವೈಜ್ಞಾನಿಕ ಮತ್ತು ನಿಷ್ಪಕ್ಷಪಾತ ಸಮೀಕ್ಷೆಯನ್ನು ನಡೆಸಬೇಕೆಂದು ನಾನು ವಿನಂತಿಸುತ್ತೇನೆ. ಈ ಹೊಸ ಸಮೀಕ್ಷೆಯು ಆಧಾರ್–ಸಂಯೋಜಿತ ನಾಗರಿಕ ಪರಿಶೀಲನೆಯನ್ನು ಆಧರಿಸಿರಬೇಕು ಮತ್ತು ಪ್ರತಿಯೊಬ್ಬ ವ್ಯಕ್ತಿಯ ತಿಳಿವಳಿಕೆಯುಳ್ಳ ಒಪ್ಪಿಗೆಯೊಂದಿಗೆ ನಡೆಸಬೇಕು.

ಅಸ್ತಿತ್ವದಲ್ಲಿರುವ ರಾಜ್ಯ ಸರ್ಕಾರದ ಡೇಟಾಬೇಸ್‌ಗಳ ಡೇಟಾವನ್ನು ಮರು ಪರಿಶೀಲನೆಗಾಗಿ ಬಳಸಬೇಕು. ಫಲಿತಾಂಶದ ಡೇಟಾಸೆಟ್ ನಿಖರವಾಗಿ, ಪಕ್ಷಪಾತ ರಹಿತವಾಗಿದೆ ಹಾಗೂ ಕರ್ನಾಟಕದ ನಿಜವಾದ ಸಾಮಾಜಿಕ ರಚನೆಯನ್ನು ಪ್ರತಿಬಿಂಬಿಸುತ್ತದೆ ಎಂದು ಪತ್ರದಲ್ಲಿ ಸಿದ್ದರಾಮಯ್ಯ ಅವರಿಗೆ ಶೋಭಾ ಕರಂದ್ಲಾಜೆ ಮನವರಿಕೆ ಮಾಡಿಕೊಟ್ಟಿದ್ದಾರೆ.

# ಪತ್ರಕರ್ತನ ಮೇಲೆ ಹಲ್ಲೆ ಮಾಡಿದ ಅರಣ್ಯ ಇಲಾಖೆ ಅಧಿಕಾರಿ ಸಿಬ್ಬಂದಿ ವಿರುದ್ಧ ಕ್ರಮಕ್ಕೆ ಒತ್ತಾಯ

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: – ಎ 17 ಬೀದರ್‌ನಲ್ಲಿ ಪತ್ರಕರ್ತರಾದ ರವಿ ಭೂಸಂಡೆ ಅವರ ಮೇಲೆ ಅಮಾನವೀಯವಾಗಿಹಲ್ಲೆಮಾಡಿರುವ ಅರಣ್ಯ ಇಲಾಖೆಯ ನಾಲ್ಕು ಜನ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಬಸವಕಲ್ಯಾಣ ಶಾಲೆಯಿಂದ ಒತ್ತಾಯಿಸಿದೆ.



ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರ ನಿಯೋಗದಿಂದ ಗುರುವಾರ ತಾಲೂಕು ಅಡಳಿತ ಸೌಧಕ್ಕೆ ತೆರಳಿ ಮುಖ್ಯಮಂತ್ರಿಗಳಿಗೆ ಬರೆದ ಮನವಿ ಪತ್ರವನ್ನು ತಹಸೀಲ್ದಾರರಾದ ಡಾ.ದತ್ತಾತ್ರೇಯ ಗಾದಾ ಅವರಿಗೆ ಸಲ್ಲಿಸಲಾಗಿದ್ದು, ಹಲ್ಲೆ ನಡೆಸಿದ ಅರಣ್ಯ ಇಲಾಖೆಯ ನಾಲ್ಕು ಜನ ಅಧಿಕಾರಿ ಹಾಗೂ ಸಿಬ್ಬಂದಿಯನ್ನು ಬಂಧಿಸಿ, ಅವರನ್ನು ಸೇವೆಯಿಂದ ಅಮಾನತ್ತು ಗೊಳಿಸಲು ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಲಾಗಿದೆ

15ರಂದು ರಾತ್ರಿ ಪತ್ರಕರ್ತ ರವಿ ಭೂಸಂಡೆಅವರುಮನ್ನಾಯಿಖೆಳ್ಳಿಯಿಂದ ಚಿದ್ರಿಗೆ ಆಗಮಿಸುವ ಸಂದರ್ಭದಲ್ಲಿ ಅಲ್ಲಿಯ ಜನರ ಹಾಗೂ ಅರಣ್ಯ ಅಧಿಕಾರಿಗಳ ಮಧ್ಯ ವಾಗ್ವಾದ ನಡೆಯುತ್ತಿತ್ತು. ನೋಡಲು ಹೋದ ರವಿ ಅವರ ಮೇಲೆ ಅರಣ್ಯ ಇಲಾಖೆಯ ನಾಲ್ಕು ಜನ ಅಧಿಕಾರಿ ಮತ್ತು ಸಿಬ್ಬಂದಿಗಳಾದ ದಸ್ತಗಿರ್,ಶಾಂತಕುಮಾರ,ಗಜಾನಂದ ಹಾಗೂ ಸಂಗಮೇಶ ಎಂಬುವವರು ಮುಗಿಬಿದ್ದು ಹಲ್ಲೆ ಮಾಡಿದ್ದಲ್ಲದೆ ಬೀದರ್‌ನ ಎಲ್ಲಡೆ ಸುತ್ತಾಡಿಸಿದ್ದು, ಈ ಅಮಾನವೀಯ ಘಟನೆ ಖಂಡಿಸಿ ಕ್ರಮಕ್ಕೆ ಒತ್ತಾಯಿಸಲಾಗಿದೆ.

ಸಂಘದ ತಾಲೂಕ ಅಧ್ಯಕ್ಷರಾದ ಮಾರ್ಥಂಡ್ ಜೋಶಿ, ಪ್ರಧಾನ ಕಾರ್ಯದರ್ಶಿ ಉದಯಕುಮಾರ ಮುಳೆ, ಉಪಾಧ್ಯಕ್ಷರಾದ ಡಿ. ಕೆ. ಪ್ರಹ್ಲಾದ. ನೈಮೂದಿನ ಚಾಬುಕ ಸವಾರ , ಕಾರ್ಯದರ್ಶಿ ಶಿವಪುತ್ರ ಪಾಟೀಲ್, ಖಜಾಂಚಿ ಪ್ರದೀಪ ವಿಸಾಜಿ, ಗೌರವ ಸಲಹೆಗಾರ ವೀರಶೆಟ್ಟಿ ಮಲಶೆಟ್ಟಿ, ಸದಸ್ಯರಾದ ಕಲ್ಯಾಣರಾವ ಮದರಗಾಂವಕರ್, ರಾಜೇಂದ್ರಗೋಖಲೆ, ಗುರುನಾಥ ಗಡ್ಡೆ,ಧನರಾಜ ರಾಜೋಳೆ, ಎಂಡಿ. ಖುತಬೋದ್ದಿನ್,ಹಾಗೂ ಬಿ. ಕೆ. ನ್ಯೂಜ್‌ನ ಅಕ್ಬರ್, ಜಾಕೀರ ಅಹ್ಮದ, ವಾಸೀಮ,ಬಿಎಸ್‌ಪಿ ಮುಖಂಡರಾದ ಅಶೋಕ ಮಂತಾಳಕರ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಈಜಲು ಹೋದ ಯುವಕ ನೀರುಪಾಲು

ಮಲ್ಲಮ್ಮ ನುಡಿ ವಾರ್ತೆ

ಬೀದರ. ಎ. 18 : ಈಜಲು ಹೋದ ಯುವಕನೋರ್ವ ಮುಳುಗಿ ನೀರು ಪಾಲಾದ ಘಟನೆ ನಗರದ ಝರಣಾ ಮಂದಿರದ ಹತ್ತಿರವಿರುವ ಈಜುಕೊಳದಲ್ಲಿ ಗುರುವಾರ (ಏ.17) ಸಾಯಂಕಾಲ ನಡೆದಿದೆ.



ನಗರದ ಅಬ್ದುಲ್ ಫೈಜ್ ದರ್ಗಾದ ನಿವಾಸಿ ಸಯ್ಯದ್ ಅಫಾನ್ (19) ಮೃತಪಟ್ಟ ಯುವಕ ಎಂದು ಗುರುತಿಸಲಾಗಿದೆ. ಇಬ್ಬರು ಗೆಳೆಯರ ಜೊತೆ ಈಜುಕೊಳದಲ್ಲಿ ಸ್ನಾನಕ್ಕಿಳಿದ್ದು, ಈ ವೇಳೆ ನೀರಿನಲ್ಲಿ ಜಿಗಿಯಲು ವೇಳೆ ತಲೆಗೆ ಪೆಟ್ಟು ಬಿದ್ದು ಸಾವನಪ್ಪಿದ್ದಾನೆ.

ಈ ಘಟನೆಗೆ ಸಂಬಂಧಿಸಿದಂತೆ ಮಾರ್ಕೆಟ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು,ತನಿಖೆಮುಂದುವರೆದಿದೆ.

# ಜನಿವಾರ ಪ್ರಕರಣ: ಸ್ವಯಂ ದೂರು ದಾಖಲಿಸಿಕೊಂಡ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 18 : ಜನಿವಾರ ಹಾಕಿದನೆಂಬ ಕಾರಣದಿಂದ ಬ್ರಾಹ್ಮಣ ವಿದ್ಯಾರ್ಥಿಗೆ ಕೆ–ಸಿಇಟಿ ಪರೀಕ್ಷೆ ಬರೆಯಲು ಅವಕಾಶ ನೀಡದೆ ವಾಪಸ್ ಕಳಿಸಿದ ಘಟನೆಗೆ ಸಂಬಂಧಿಸಿದಂತೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಸ್ವ–ಯಂ ದೂರು ದಾಖಲಿಸಿಕೊಂಡಿದೆ. ಜತೆಗೆ ವಿದ್ಯಾರ್ಥಿಯ ಭವಿಷ್ಯದ ದೃಷ್ಟಿಯಿಂದ ವಿಶೇಷ ಪ್ರಕರಣದಡಿ ಮತ್ತೊಮ್ಮೆ ಪರೀಕ್ಷೆ ಬರೆಯಲು ಅವಕಾಶ ನೀಡುವಂತೆ ಸೂಚಿಸಿದೆ.

ನಗರದ ಸಾಯಿ ಸ್ಫೂರ್ತಿ ಕಾಲೇಜು ಕೇಂದ್ರದಲ್ಲಿ ಗುರುವಾರ ನಡೆದಿದ್ದ ಕೆ–ಸಿಇಟಿ (ಗಣಿತ) ಪರೀಕ್ಷೆ ವೇಳೆ ವಿದ್ಯಾರ್ಥಿ ಸುಚಿವ್ರತ್ ಕುಲಕರ್ಣಿ ಜನಿವಾರ ಹಾಕಿಕೊಂಡು ಪರೀ–ಕ್ಷೆಗೆ ಬಂದಿದ್ದ. ತಪಾಸಣೆ ವೇಳೆ ಜನಿವಾರ ಹಾಕಿದ್ದಕ್ಕಾಗಿ ಸಿಬ್ಬಂದಿ ತಗಾದೆ ತೆಗೆದಿದ್ದು, ಅದರೊಳಗೆ ಕ್ಯಾಮೆರಾ, ಇತರೆ ಎಲೆಕ್ಟ್ರಾನಿಕ್ ವಸ್ತುಗಳು ಇರಬಹುದು? ಅದನ್ನು ತೆಗೆದಿಟ್ಟು ಬಾ ಎಂದು ಹೀಯಾಳಿಸಿದ್ದಾರೆ. ಜನಿವಾರ ನಮ್ಮ ಧರ್ಮದ ಕುರುಹು, ಅದನ್ನು ತೆಗೆಯಲು ಬರುವುದಿಲ್ಲ. ಅಷ್ಟಕ್ಕೂ ಇಂತಹ ಯಾವುದೇ ನಿಯಮವೂ ಇಲ್ಲ ಎಂದು ವಿದ್ಯಾರ್ಥಿ ಹೇಳಿದ್ದಾನೆ. ಇದಕ್ಕೆ ಕಿವಿಗೊಡದ ಸಿಬ್ಬಂದಿ ಸುಚಿವೃತ್‌ನನ್ನು ಬೈದು ಪರೀಕ್ಷಾ ಕೋಣೆಗೆ ಪ್ರವೇಶಕ್ಕೆ ಅವಕಾಶ ಮಾಡಿಕೊಡದೆ ವಾಪಸ್ ಕಳುಹಿಸಿದ್ದರು. ಈ ವರ್ತನೆಯಿಂದ ಆಘಾತಗೊಂಡಿದ್ದ ವಿದ್ಯಾರ್ಥಿ ಮತ್ತು ಪಾಲಕರು ಜಿಲ್ಲಾಡಳಿತಕ್ಕೆ ದೂರು ನೀಡಿದ್ದರು.

ಸಿಇಟಿ ಪರೀಕ್ಷೆಗೆ ವಿದ್ಯಾರ್ಥಿಗೆ ನಿರ್ಬಂಧ ಹಾಕಿದ ಬಗ್ಗೆ ಗೊತ್ತಾಗುತ್ತಿದ್ದಂತೆ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ ಶುಕ್ರವಾರ (ಏ.18) ವಿದ್ಯಾರ್ಥಿ ಸುಚಿವ್ರತ್ ಮನೆಗೆ ಭೇಟಿ ಕೊಟ್ಟು ಘಟನೆಯ ಮಾಹಿತಿ ಪಡೆದರು. ಆತನಿಗೆ ಮತ್ತು ಪಾಲಕರಿಗೆ ಧೈರ್ಯ ತುಂಬಿದ್ದಾರೆ. ಜನಿವಾರ ಹಾಕಿದೆನೆಂಬ ಕಾರಣ–ಕ್ಕೆ ಸಿಇಟಿ ಬರೆಯಲು ಅವಕಾಶ ನೀಡದೆ ವಿದ್ಯಾರ್ಥಿಗೆ ಅವಮಾನ ಮಾಡಿರುವುದನ್ನು ಅಯೋಗ ಸಹಿಸುವುದಿಲ್ಲ. ಇದು ಧಾರ್ಮಿಕ ಹಕ್ಕಿನ ಉಲ್ಲಂಘನೆಯೂ ಆಗಿದೆ. ಆಯೋಗ ಸ್ವಯಂ ದೂರು ದಾಖಲಿಸಿಕೊಂಡು, ತಪ್ಪಿಸ್ಥ ಪರೀಕ್ಷಾ ಅಧಿಕಾರಿ ಮತ್ತು ಸಿಬ್ಬಂದಿ ವಿರುದ್ಧ ಕ್ರಮ ಕೈಗೊಳ್ಳುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುವುದು. ಜತೆಗೆ ವಿದ್ಯಾರ್ಥಿಗೆ ಮತ್ತೊಮ್ಮೆ ಪರೀಕ್ಷೆ ಬರೆಯಲು ಅವಕಾಶ ನೀಡುವಂತೆ ಕಾಲೇಜು ಶಿಕ್ಷಣ ಇಲಾಖೆಗೆ ಪತ್ರ ಬರೆಯಲಾಗುವುದು ಎಂದು ಹೇಳಿದ್ದಾರೆ.

# ಬೆಲೆ ಏರಿಕೆಯಿಂದ ಜನ ಜೀವನ ತತ್ತರ: ಬಿವೈವಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.18: ರಾಜ್ಯದಲ್ಲಿ ಐವತ್ತಕ್ಕೂ ಹೆಚ್ಚು ವಸ್ತುಗಳ ಬೆಲೆ ಏರಿಕೆಯಾಗಿದೆ. ಹಾಗಾಗಿ ಜನರು ತತ್ತರಿಸಿ ಹೋಗಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಟೀಕಿಸಿದರು.

ಜನಾಕ್ರೋಶ ಯಾತ್ರೆಯಲ್ಲಿ ಪಾಲ್ಗೊಳ್ಳುವುದಕ್ಕೂ ಮುನ್ನ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಜನರು ಸಂತೋಷವಾಗಿದ್ದಾರೆ ಎಂಬ ಭ್ರಮೆಯಲಿದ್ದಾರೆ. ಆದರೆ ನಿನ್ನೆ ಬಿಜಾಪುರದಲ್ಲಿ ನಡೆದ ಜನಾಕ್ರೋಶ ಯಾತ್ರೆಯಲ್ಲಿ ಪಾಲ್ಗೊಂಡಿದ್ದ ಜನಸ್ತೋಮ ನೋಡಿದರೆ ರಾಜ್ಯದಲ್ಲಿ ಜನರು ಸಂತೋಷವಾಗಿಲ್ಲ ಎಂಬುದು ಖಾತ್ರಿಯಾಗುತ್ತದೆ ಎಂದರು.

ಇಷ್ಟು ದಿನಗಳ ಜನಾಕ್ರೋಶ ಯಾತ್ರೆಯಲ್ಲಿ ವಿಜಯಪುರದ ಯಾತ್ರೆ ಅತ್ಯಂತ ಯಶಸ್ವಿಯಾಗಿದೆ ಎಂದು ಸಮಾಧಾನ ವ್ಯಕ್ತಪಡಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರೈತರ ಸಮಸ್ಯೆ ಆಲಿಸುತ್ತಿಲ್ಲ. ಕೇವಲ ಅಲ್ಪಸಂಖ್ಯಾತರ ಓಲೈಕೆ , ಹಿಂದೂಗಳ ಅಪಮಾನ ಮಾಡುವುದನ್ನೇ ಮುಂದುವರಿಸಿಕೊಂಡು ಹೊರಟಿದ್ದಾರೆ ಎಂದರು.ಬಿಜೆಪಿ ಜನಾಕ್ರೋಶ ಯಾತ್ರೆಯಿಂದ ರಾಜ್ಯ ಸರಕಾರದ ಬಣ್ಣ ಬಯಲಾಗಿದೆ ಎಂದು ವ್ಯಾಖ್ಯಾನಿಸಿದರು.



ಮುಖ್ಯಮಂತ್ರಿಗಳ ಪ್ರೀತಿಗೆ ಪಾತ್ರವಾದ ಜಾತಿಗಣತಿ ಬಗ್ಗೆ ನಿನ್ನೆ ಸಚಿವ ಸಂಪುಟ ಸಭೆ ನಡೆಸಿದರು. ಆದರೆ ಅಲ್ಲಿ ಏನೂ ಆಗಲಿಲ್ಲ. ಮುಖ್ಯಮಂತ್ರಿಗಳಿಗೆ ಇಚ್ಛಾಶಕ್ತಿ ಇಲ್ಲ , ಹಿಂದುಳಿದ ವರ್ಗಕ್ಕೆ ನ್ಯಾಯ ಕೊಡಿಸುವ ಚಿಂತನೆ ಇಲ್ಲ ಎಂಬುದು ಇದರಿಂದ ಖಾತ್ರಿಯಾಗಿದೆ ಎಂದು ವ್ಯಾಖ್ಯಾನಿಸಿದರು.ಹಾಗೊಂದು ವೇಳೆ ಮುಖ್ಯಮಂತ್ರಿಗಳಿಗೆ ಪರಿಶಿಷ್ಟರು ಹಾಗೂ ಹಿಂದುಳಿದವರ ಬಗ್ಗೆ ಪ್ರೀತಿ ಇದ್ದಿದ್ದರೆ ಎಸ್ಸಿಪಿ–ಟಿಎಸ್ಪಿ ಪಾಲಿನ ಹಣ ವ್ಯಯ ಮಾಡುತ್ತಿರಲಿಲ್ಲ ಎಂದರು.

ನಿನ್ನೆ ಮುಖ್ಯಮಂತ್ರಿಗಳು ತಮ್ಮ ಅವಧಿಯಲ್ಲಿ ಹೊಸ ಅನುಭವ ಮಂಟಪ ಪೂರ್ಣಗೊಳಿಸುವುದಾಗಿ ಹೇಳಿದ್ದಾರೆ. ಬಸವಣ್ಣನವರ ಬಗ್ಗೆ ಮಾತಾಡಬೇಕಾದರೆ ಮುಖ್ಯಮಂತ್ರಿಗಳು ತಿಳಿದುಕೊಂಡು ಮಾತನಾಡಬೇಕು. ಬಸವಣ್ಣನವರು ನುಡಿದಂತೆ ನಡೆದವರು. ಇನ್ನೊಂದೆಡೆ ಸಿದ್ದರಾಮಯ್ಯ ಅವರು ವೀರಶೈವ ಲಿಂಗಾಯತರ ಮಧ್ಯೆ ಪ್ರತ್ಯೇಕ ಧರ್ಮದ ಬಗ್ಗೆ ಬೆಂಕಿ ಹಚ್ಚುವುದಕ್ಕೆ ಮುಂದಾಗಿದ್ದರು ಎಂದರು.

ಸ್ವತಃ ಡಿಕೆಶಿಯವರೇ ನಾವು ಧರ್ಮ ಒಡೆಯುವುದಾಗಿ ಹೇಳಿದ್ದರು. ಹಾಗಾಗಿ ಅನುಭವ ಮಂಟಪ ಮುಗಿಸುವುದಕ್ಕಿಂತ ಹೆಚ್ಚಾಗಿ ನಿಮ್ಮ ನಡೆಯನ್ನು ಜನರು ಗಮನಿಸುತ್ತಿದ್ದಾರೆ ಎಂದು ತಿವಿದರು.

ನೀವು ನಾಡಿನ ಮುಖ್ಯಮಂತ್ರಿಯೋ ಅಥವಾ ಮುಸ್ಲಿಮರ ಮುಖ್ಯಮಂತ್ರಿಯೋ ಎಂದು ಜನರು ಮಾತನಾಡುತ್ತಿದ್ದಾರೆ.ನಿಮ್ಮ ಅವಧಿಯಲ್ಲಿ ಅನುಭವ ಮಂಟಪ ಮುಗಿಸಲು ಡಿಕೆಶಿ ಬಿಡುತ್ತಾರೋ ಇಲ್ಲವೋ ಗೊತ್ತಿಲ್ಲ ಎಂದು ಟಾಂಗ್ ನೀಡಿದರು.ಬೆಂಕಿ ಹಚ್ಚುವ ಕೆಲಸ ಬಿಡಿ

ವಿದ್ಯಾರ್ಥಿಯೊಬ್ಬನ ಜನಿವಾರ ತೆಗೆಸಿ ಪರೀಕ್ಷೆ ಬರೆಯಿಸಿರುವ ವಿಚಾರ ಪ್ರಸ್ತಾಪಿಸಿದ ವಿಜಯೇಂದ್ರ 'ಹಿರಿಯಕ್ಕನ ಚಾಳಿ ಮನೆ ಮಂದಿಗೆ ಅನ್ನುವ ಹಾಗಾಗಿದೆ. ಬೇರೆ ಬೇರೆ ಸಮುದಾಯದ ನಡುವೆ ಬೆಂಕಿ ಹಚ್ಚುವ ಕೆಲಸ ಮಾಡುತ್ತಿದ್ದಾರೆ. ಇದಕ್ಕೆ ಜನರೇ ಉತ್ತರ ನೀಡುತ್ತಾರೆ ಎಂದರು.

ಚಿತ್ತಾಪುರದಲ್ಲಿ ಮರಳು ಮಾಫಿಯಾ ದೊಡ್ಡ ಪ್ರಮಾಣದಲ್ಲಿ ನಡೆದಿದೆ. ದಿನಕ್ಕೆ ಐನೂರು ಗಾಡಿಗಳಷ್ಟು ಮರಳು ದಂಧೆ ನಡೆಯುತ್ತಿದೆ.


ನೂರಾರು ಕೋಟಿ ಅವ್ಯವಹಾರ ನಡೆಯುತ್ತಿದೆ. ಇದೆಲ್ಲವೂ ಸಚಿವ ಪ್ರಿಯಾಂಕ್ ಖರ್ಗೆ ಮೂಗಿನ ಅಡಿಯಲ್ಲೇ ನಡೆಯುತ್ತಿದೆ ಎಂದು ವಿಜಯೇಂದ್ರ ಗಂಭೀರ ಆರೋಪ ಮಾಡಿದರು.

# ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ: 35 ವರ್ಷ ಶಿಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.18: ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದ ಅರೋಪ ಸಾಬೀತಾಗಿದ್ದರಿಂದ ಇಲ್ಲಿನ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ (ವಿಶೇಷ ಪೊಕ್ಸೊ) ನ್ಯಾಯಾಲಯವು ಅಪರಾಧಿಗೆ 35 ವರ್ಷ ಜೈಲು ಶಿಕ್ಷೆ ವಿಧಿಸಿದೆ. ಜೇವರಗಿ ತಾಲ್ಲೂಕಿನ ಗ್ರಾಮವೊಂದರ ನಿವಾಸಿ ಮೌನೇಶ ನಿಂಗಪ್ಪ (21) ಶಿಕ್ಷೆಗೆ ಒಳಗಾದ ಅಪರಾಧಿ. 16 ವರ್ಷದ ಶಾಲಾ ಬಾಲಕಿಯ ಹಿಂದೆ ಬಿದ್ದು, ಪ್ರೀತಿಸುತ್ತೇನೆ ನಂತರ ಮದುವೆಯಾಗುತ್ತೇನೆ ಎಂದು ನಂಬಿಸಿದ್ದ. ಬಾಲಕಿಯನ್ನು ಬೇರೆ ಬೇರೆ ಸ್ಥಳಗಳಿಗೆ ಕರೆದೊಯ್ದು ಬಂಧನದಲ್ಲಿಟ್ಟು ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದ. ಈ ಕುರಿತು ನೆಲೋಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ತನಿಖೆ ನಡೆಸಿದ ಪೊಲೀಸರು ನ್ಯಾಯಾಲಯಕ್ಕೆ ಆರೋಪ ಪಟ್ಟಿಯನ್ನು ಸಲ್ಲಿಸಿದ್ದರು.

ವಾದಪ್ರತಿವಾದ ಅಲಿಸಿದ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ (ವಿಶೇಷ ಪೊಕ್ಸೊ) ಎಫ್‌ಟಿಎಸ್‌ಸಿ–1 ನ್ಯಾಯಾಧೀಶ ಯಮನಪ್ಪ ಬಮ್ಮಣಗಿ ಅವರು, ಮೌನೇಶಗೆ ಪೊಕ್ಸೊ ಕಾಯ್ದೆಯ ವಿವಿಧ ಸೆಕ್ಷನ್‌ಗಳ ಅಡಿ 35 ವರ್ಷ ಜೈಲು ಶಿಕ್ಷೆ ಮತ್ತು 32 ಸಾವಿರ.ರೂ ದಂಡ ವಿಧಿಸಿದ್ದಾರೆ.ಸರ್ಕಾರದ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕ ಶಾಂತವೀರ ಬಿ.ತುಪ್ಪದ ಅವರು ವಾದ ಮಂಡಿಸಿದ್ದರು.





ಕಲಬುರಗಿ: ನಗರದ ಕ್ರೈಸ್ಟ್ ಮೆಥೋಡಿಸ್ಟ್ ಸೆಂಟ್ರಲ್ ಚರ್ಚ್‌ನಲ್ಲಿ ಪವಿತ್ರವಾರ ಶುಭ ಶುಕ್ರವಾರ ಆರಾಧನೆಯ ಕಾರ್ಯಕ್ರಮಗಳು ನಡೆದವು. ಈ ಸಂದರ್ಭದಲ್ಲಿ ಧರ್ಮಗುರುಗಳಾದ ಫೋಲ್ ಮಧುಕರ್, ಡಿಸೋಜಾ ಥಾಮಸ್, ಅನೀತಾಕುಮಾರಿ ಡಿಸೋಜಾ, ಸಲೋಮನ್ ದಿವಾಕರ್, ಸುಮಂತ ಡಿ ಸರಡಗಿ, ಐ ವಿಜಯಕುಮಾರ, ಜ್ಞಾನಮಿತ್ರ ಸಾಮ್ಯುವೆಲ್, ಸಂಧ್ಯಾರಾಜ್ ಸಾಮ್ಯುವೆಲ್, ಸೂರ್ಯಕುಮಾರ, ಸತೋಷಿ ಸುಧಿರ, ಶ್ರೀಕಾಂತ ಮಾಳಗಿ ಸೇರಿದಂತೆ ಕ್ರಿಶ್ಚಿಯನ್ ಸಮಾಜ ಬಾಂಧವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಬುರ್ಖಾಧಾರಿಯ ಬಂಧನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.18–ಬುರ್ಖಾ ಧರಿಸಿ ಅನುಮಾನಾಸ್ಪದವಾಗಿ ತಿರುಗಾಡುತ್ತಿದ್ದ ವ್ಯಕ್ತಿಯನ್ನು ಪೋಲಿಸರು ಬಂಧಿಸಿರುವ ಘಟನೆ ಜಿಲ್ಲೆಯ ಇಳಕಲ್ಲ ಪಟ್ಟಣದಲ್ಲಿ ಶುಕ್ರವಾರ ನಡೆದಿದೆ. ಬುರ್ಖಾ ಧರಿಸಿ ಕೈಯಲ್ಲಿ ವ್ಯಾನಿಟಿ ಬ್ಯಾಗ ಹಿಡಿದಿದ್ದ ಜಾವೀದ ಎಂಬ ವ್ಯಕ್ತಿಯ ಬಗ್ಗೆ ಹಿಂದೂ ಟ್ರಸ್ಟ್ ಸಂಚಾಲಕ ಪರುಶುರಾಮ ಬಿಸಲದಿನ್ನಿ ಪೋಲಿಸರಿಗೆ ಮಾಹಿತಿ ನೀಡಿದ್ದಾರೆ.



ಸ್ಥಳಕ್ಕೆ ಆಗಮಿಸಿದ ಪೋಲಿಸರು ಬುರ್ಖಾಧಾರಿಯನ್ನು ಠಾಣೆಗೆ ಕರೆದೊಯ್ದಿದ್ದಾರೆ. ಜಾವೀದ್ ಬ್ಯಾಗಿನಲ್ಲಿ ಚಾಕಲೇಟು, ಬಳೆ, ಮುತ್ತಿನ ಸಾಮಾನುಗಳು ದೊರೆತಿವೆ. ಈತ ಅರೇಮಾನಸಿಕ ವ್ಯಕ್ತಿ ಎಂದು ಹೇಳಲಾಗಿದೆ. ಶಹರ ಠಾಣೆಯ ಪಿಎಸ್‌ಐ ಷಹಜಹಾನ ನಾಯಕ ತನಿಖೆ ನಡೆಸಿದ್ದಾರೆ.

# ದಾಸೋಹ ಮನೆಗೆ ವರ್ತಕರಿಂದ 300 ಕ್ವಿಂಟಲ್ ಆಹಾರ ಧಾನ್ಯ ಕೊಡುಗೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಏ.18: ನಗರದ ಆಹಾರ ಧಾನ್ಯ ಮತ್ತು ಬೀಜ ವ್ಯಾಪಾರಿಗಳ ಸಂಘ, ಕಲಬುರಗಿ ದಾಲ್ ಮಿಲ್ ಸಂಘ ಹಾಗೂ ಕೃಷಿ ಪರಿಕರ ಮಾರಾಟ ಸಂಘಗಳ ವತಿಯಿಂದ ಶರಣಬಸವೇಶ್ವರ ಮಹಾ ದಾಸೋಹ ಮನೆಗೆ 300 ಕ್ವಿಂಟಲ್ ದವಸ–ಧಾನ್ಯಗಳನ್ನು ನೀಡಲಾಯಿತು.

ಸಂಘಗಳ ಪದಾಧಿಕಾರಿಗಳು ತಮ್ಮ ಶಕ್ತ್ಯಾನುಸಾರ ಧಾನ್ಯ ಹಾಗೂ ಆಹಾರ ಪದಾರ್ಥಗಳನ್ನು ನೀಡಿದರು. ದಾಸೋಹಕ್ಕಾಗಿ ನೀಡಿದರು. 110 ಕ್ವಿಂಟಲ್ ಅಕ್ಕಿ, 50 ಕ್ವಿಂಟಲ್ ಬೆಲ್ಲ, 100 ಕ್ವಿಂಟಲ್ ಗೋಧಿ, 50 ಕ್ವಿಂಟಲ್ ಎಣ್ಣೆ ಸೇರಿದಂತೆ ಇತರೆ ಪದಾರ್ಥಗಳನ್ನು ಸಂಗ್ರಹಿಸಿ ಕೊಟ್ಟರು.





ಗಂಜ್ ಪ್ರದೇಶದ ಎಪಿಎಂಸಿ ಆವರಣದಿಂದ ಲಾರಿ, ಟಂಟಂ, ಸಣ್ಣ ಸರಕು ವಾಹನಗಳಲ್ಲಿ ಕಾಳು, ಆಹಾರ ಪದಾರ್ಥಗಳನ್ನು ತುಂಬಿದರು. ಮೆರವಣಿಗೆಯಲ್ಲಿ ಭಜನೆ ಮಾಡುತ್ತಾ ಶರಣಬಸವೇಶ್ವರ ದೇವಸ್ಥಾನದವರೆಗೆ ತೆರಳಿದರು. ಬಳಿಕ ದಾಸೋಹ ಮನೆಗೆ ಅರ್ಪಿಸಿದರು. ವ್ಯಾಪಾರಿಗಳು ಕಳೆದ ನಾಲ್ಕು ವರ್ಷಗಳಿಂದ ನೂರಾರು ಕ್ವಿಂಟಲ್ ದವಸ– ಧಾನ್ಯಗಳನ್ನು ಸಮರ್ಪಿಸುತ್ತಿದ್ದಾರೆ.

ಈ ಸಂದರ್ಭದಲ್ಲಿ ಆಹಾರ ಧಾನ್ಯ ಮತ್ತು ಬೀಜ ವ್ಯಾಪಾರಿಗಳ ಸಂಘದ ಅಧ್ಯಕ್ಷ ಸಂತೋಷ ಲಂಗರ್, ಉಪಾಧ್ಯಕ್ಷ ಶರಣಪ್ಪ ಬಾಳಿ, ಕಾರ್ಯದರ್ಶಿ ಬಸವರಾಜ ಎಸ್. ತಡಕಲ್, ಸಹ ಕಾರ್ಯದರ್ಶಿ ಮಲ್ಲಿಕಾರ್ಜುನ ಟಿ., ಖಜಾಂಚಿ ಮಲ್ಲಿಕಾರ್ಜುನ ಮಾನಕರ್, ದಾಲ್ ಮಿಲ್ ಸಂಘದ ಅಧ್ಯಕ್ಷ ಚಂದ್ರಶೇಖರ ಕೋಬಾಳ, ಉಪಾಧ್ಯಕ್ಷರಾದ ವಿಷ್ಣುದಾಸ ಸಾಪಡಿಯ, ಶರಣಬಸಪ್ಪ ಮಚ್ಚಟೆ, ಕಾರ್ಯದರ್ಶಿ ಹಣಮಂತರಾವ ತೋಟನಳ್ಳಿ, ಕೃಷಿ ಪರಿಕರ ಮಾರಾಟ ಸಂಘದ ಅಧ್ಯಕ್ಷ ಬಸವರಾಜ ಮಂಗಲಗಿ, ಪ್ರಮುಖರಾದ ಅಶೋಕ ನಿಂಗದೆ, ರಾಜಶೇಖರ ದುರ್ಗುರು, ಚನ್ನಬಸಪ್ಪ ಗಂಗಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮೇ 1 ರಿಂದ ಜಿಪಿಎಸ್ ಆಧಾರಿತ ಟೋಲ್ ಇಲ್ಲ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಏ.18: ಜಿಪಿಎಸ್ ಆಧಾರಿತ ಟೋಲ್ ವ್ಯವಸ್ಥೆಯ ಬಗ್ಗೆ ಯಾವುದೇ ನಿರ್ಧಾರ ಕೈಗೊಂಡಿಲ್ಲ ಎಂದು ಶುಕ್ರವಾರ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವು ಸ್ಪಷ್ಟನೆ ನೀಡಿದ್ದು, ಸದ್ಯ ಚಾಲ್ತಿಯಲ್ಲಿರುವ ಫಾಸ್ಟ್ಯಾಗ್ ಟೋಲ್ ವ್ಯವಸ್ಥೆಯೇ ಮುಂದುವರೆಯಲಿದೆ.

ಮೇ 1ರಿಂದ ಜಿಪಿಎಸ್ ಆಧಾರಿತ ಫಾಸ್ಟ್ಯಾಗ್ ಟೋಲ್ ಇರಲಿದೆ ಎಂಬ ಸುದ್ದಿಯು ಹರಿದಾಡಿತ್ತು. ಈ ವರದಿಯನ್ನು ತಳ್ಳಿ ಹಾಕಿರುವ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವು, ಈ ರೀತಿಯ ಯಾವುದೇ ಚಿಂತನೆ ಇಲ್ಲ. ಸದ್ಯ ಫಾಸ್ಟ್ಯಾಗ್ ಟೋಲ್ ವ್ಯವಸ್ಥೆಯೇ ಮುಂದುವರೆಯಲಿದೆ ಎಂದು ಸ್ಪಷ್ಟಪಡಿಸಿದೆ.

ಜಿಪಿಎಸ್ ಆಧಾರಿತ ಟೋಲ್ ವ್ಯವಸ್ಥೆ ಬಗ್ಗೆ ಸಲಹೆಗಳು ಬಂದಿವೆ. ಆದರೆ ಅದನ್ನು ಜಾರಿಗೆ ತರುತ್ತಿಲ್ಲ. ಕೆಲವು ಕಡೆ ಪ್ರಾಯೋಗಿಕವಾಗಿ ಎನ್‌ಪಿಆರ್ ಫಾಸ್ಟ್ಯಾಗ್ ಆಳವಡಿಕೆಗೆ ಚಿಂತನೆ ಮಾಡಲಾಗುತ್ತಿದೆ. ನಂಬರ್ ಪ್ಲೇಟ್ ಆಧಾರಿತ ಫಾಸ್ಟ್ಯಾಗ್ ಇದಾಗಿದ್ದು, ಇದರ ಸಾಧಕ ಭಾದಕಗಳನ್ನ ನೋಡಿಕೊಂಡು ಮುಂದಿನ ನಿರ್ಧಾರ ಕೈಗೊಳ್ಳಲಾಗುವುದು ಎನ್ನುವ ಮೂಲಕ ವರದಿಯನ್ನು ತಳ್ಳಿಹಾಕಿದೆ.

# ಬಸವ ಜಯಂತಿ ಉತ್ಸವ ಸಮಿತಿ ಕಾರ್ಯಲಯ ಉದ್ಘಾಟನೆ

ಬೀದರ:ಏ.18: 892ನೇ ಬಸವ ಜಯಂತಿ ಅದ್ದೂರಿ ಆಚರಣೆ ಅಂಗವಾಗಿ ಬೀದರ್ ನಗರದ ಮಡಿವಾಳ ವೃತ್ತದ ಬಳಿ ಇರುವ ಶಕುಂತಲಾ ಕಾಂಪ್ಲೆಕ್ಸ್‌ನಲ್ಲಿ ಬಸವ ಜಯಂತಿ ಉತ್ಸವ ಸಮಿತಿಯ ಕಾರ್ಯಲಯವನ್ನು ಇಂದು ಭಾಲ್ಕಿಯ ಪೂಜ್ಯ ಬಸವಲಿಂಗ ಪಟ್ಟದೇವರು ಉದ್ಘಾಟಿಸಿದರು.





ಕಾರ್ಯಾಲಯವನ್ನು ಉದ್ಘಾಟಿಸಿ ಮಾತನಾಡಿದ ನಾಡೋಜ ಬಸವಲಿಂಗ ಪಟ್ಟದೇವರು, ಬಸವಜಯಂತಿಯ ಲಿಂಗವಂತರಿಗೆ ತುಂಬಾ ವಿಶಿಷ್ಟ ಹಾಗೂ ದೊಡ್ಡ ಹಬ್ಬವಾಗಿದೆ.

ಅಂತಹ ದೊಡ್ಡ ಹಬ್ಬದಂದು ಲಿಂಗಾಯತರು ತಮ್ಮ ಮನೆಗೆ ಸುಣ್ಣ– ಬಣ್ಣ ಮಾಡಿ, ಮಕ್ಕಳಿಗೆ ಹೊಸ ಬಟ್ಟೆ ತಂದು ವಿಜೃಂಭಣೆಯಿಂದ ಆಚರಿಸಬೇಕು ಎಂದರು.

ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ಶೈಲೇಂದ್ರ ಬೆಲ್ದಾಳೆ, ರಾಜ್ಯದ ಸಮಸ್ತ ಜನತೆಗೆ ಬಸವಜಯಂತಿಯ ಶುಭಾಶಯಗಳು. ಅಧ್ಯಕ್ಷರಾದ ಜಯರಾಜ ಖಂಡ್ರೆ, ಖಜಾಂಚಿ ರಜನೀಶ್ ವಾಲಿ, ಪ್ರಧಾನ ಕಾರ್ಯದರ್ಶಿ ಸಂಜು ಪಾಟೀಲ್ ಅವರ ನೇತೃತ್ವದಲ್ಲಿ ಈ ಬಾರಿಯ ಬಸವ ಜಯಂತಿಯನ್ನ ಒಗ್ಗಟ್ಟಿನಲ್ಲಿ ಆಚರಿಸುವ ಭರವಸೆ ಇದೆ ಎಂದರು..ಸಮಿತಿ ಅಧ್ಯಕ್ಷರಾದ ಜಯರಾಜ ಖಂಡ್ರೆ ಮಾತನಾಡಿ,ಬಸವ ಜಯಂತಿ ಅಂಗವಾಗಿ ಈ ಬಾರಿ ಮೂರು ದಿನಗಳ ಕಾಲ ಅದ್ದೂರಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು.

ಡಾ.ಚನ್ನಬಸವ ಪಟ್ಟದೇವರ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು ಎಂದು ಜಯರಾಜ್ ಖಂಡ್ರೆ ಅವರು ಹೇಳಿದ್ದರು.

# ಉಪ ರಾಷ್ಟ್ರಪತಿ ವಿರುದ್ಧ ಕಪಿಲ್ ಸಿಬಲ್ ವಾಗ್ದಾಳಿ

ನವದೆಹಲಿ:ಏ.18: ಮಸೂದೆಗಳ ಕುರಿತು ನಿರ್ಧರಿಸಲು ರಾಷ್ಟ್ರಪತಿಗಳಿಗೆ ಸಮಯ ನಿಗದಿಪಡಿಸಿದ ಸುಪ್ರೀಂ ಕೋರ್ಟ್ ತೀರ್ಪು ಪ್ರಶ್ನಿಸಿದ ಉಪ ರಾಷ್ಟ್ರಪತಿ ಜಗದೀಪ್ ಧನಕರ್ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ರಾಜ್ಯಸಭಾ ಸದಸ್ಯ ಕಪಿಲ್ ಸಿಬಲ್, ಇದು "ಅಸಂವಿಧಾನಿಕ" ಮತ್ತು ಯಾವುದೇ ರಾಜ್ಯಸಭಾ ಅಧ್ಯಕ್ಷರು ಈ ರೀತಿಯ "ರಾಜಕೀಯ ಹೇಳಿಕೆ" ನೀಡಿರುವುದನ್ನು ನಾನು ಯಾವತ್ತೂ ನೋಡಿಲ್ಲ ಎಂದು ಶುಕ್ರವಾರ ಹೇಳಿದ್ದಾರೆ.

ಧನಕರ್ ಅವರು ನ್ಯಾಯಾಂಗವನ್ನು ಕಟುವಾಗಿ ಟೀಕಿಸಿದ ಒಂದು ದಿನದ ನಂತರ ಪ್ರತಿಕ್ರಿಯಿಸಿದ ಸಿಬಲ್, ಲೋಕಸಭಾ ಸ್ಪೀಕರ್ ಮತ್ತು ರಾಜ್ಯಸಭಾ ಅಧ್ಯಕ್ಷರು, ವಿರೋಧ ಪಕ್ಷ ಮತ್ತು ಆಡಳಿತ ಪಕ್ಷದ ನಡುವೆ ಸಮಾನ ಅಂತರ ಕಾಯ್ದುಕೊಳ್ಳುತ್ತಾರೆ. ಅವರು "ಪಕ್ಷದ ವಕ್ತಾರ" ಆಗಲು ಸಾಧ್ಯವಿಲ್ಲ ಎಂದಿದ್ದಾರೆ.

"ಲೋಕಸಭಾ ಸ್ಪೀಕರ್ ಅವರ ಕುರ್ಚಿ ಸದನದ ಮಧ್ಯದಲ್ಲಿ ಇದೆ ಎಂದು ಎಲ್ಲರಿಗೂ ಗೊತ್ತು. ಅವರು ಒಂದು ಪಕ್ಷದ ಸ್ಪೀಕರ್ ಅಲ್ಲ. ಅವರು ಮತ ಚಲಾಯಿಸುವುದಿಲ್ಲ, ಅವರು ಟೈ ಇದ್ದಾಗ ಮಾತ್ರ ಮತ ಚಲಾಯಿಸುತ್ತಾರೆ. ಮೇಲ್ಮನೆಯಲ್ಲೂ ಅದೇ ಆಗಿದೆ. ನೀವು ವಿರೋಧ ಪಕ್ಷ ಮತ್ತು ಆಡಳಿತ ಪಕ್ಷದ ನಡುವೆ ಸಮಾನ ಅಂತರ ಕಾಯ್ದುಕೊಳ್ಳಬೇಕು" ಎಂದು ಹಿರಿಯ ವಕೀಲರು ಇಂದು ಪತ್ರಿಕಾಗೋಷ್ಠಿಯಲ್ಲಿ ಧನಕರ್ ಅವರಿಗೆ ತಿರುಗೇಟು ನೀಡಿದರು.

"ನೀವು ನೀಡುವ ಪ್ರತಿಯೊಂದು ಹೇಳಿಕೆಯೂ ಸಮಾನ ಅಂತರದಲ್ಲಿರಬೇಕು. ನೀವು ಒಂದು ಪಕ್ಷದ ವಕ್ತಾರರಾಗಲು ಸಾಧ್ಯವಿಲ್ಲ. ರಾಜ್ಯಸಭಾ ಅಧ್ಯಕ್ಷರು ಅಥವಾ ಸ್ಪೀಕರ್ ಯಾವುದೇ ಪಕ್ಷದ ವಕ್ತಾರರಾಗಲು ಸಾಧ್ಯವಿಲ್ಲ. ಅವರು ಹಾಗೆ ಮಾಡಿದರೆ ಆ ಕುರ್ಚಿಯ ಘನತೆ ಕಡಿಮೆಯಾಗುತ್ತದೆ" ಎಂದು ಸಿಬಲ್ ಪ್ರತಿಪಾದಿಸಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.